ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 03 | PAGE- ಪುಟ 8 | ಮಂಗಳವಾರ 04.02.2025 | RS.ಬೆಲೆ 2/-

# ಸಮಾಜದ ಅಂಕುಡೊಂಕು ತಿದ್ದುವಲ್ಲಿ ಮಾಧ್ಯಮಗಳ ಪಾತ್ರ ದೊಡ್ಡದು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.03:ಸಮಾಜದ ಅಂಕು–ಡೊಂಕುಗಳನ್ನು, ಟೀಕೆ ಟಿಪ್ಪಣಿಗಳ ಮೂಲಕ ತಿದ್ದಿ – ತೀಡಿ ಜನರಿಗೆ ತಲುಪಿಸುವಲ್ಲಿ ಮಾಧ್ಯಮಗಳ ಪಾತ್ರಮಹತ್ತರವಾದದ್ದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಭಾರತೀಯ ವಿಜ್ಞಾನ ಸಂಸ್ಥೆಯ ಜೆ.ಎನ್.ಟಾಟಾ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 2023 ಮತ್ತು 2024ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡುತ್ತಾ, ಪ್ರಜಾಪ್ರಭುತ್ವದಲ್ಲಿ ನಾಲ್ಕನೇ ಅಂಗವಾಗಿರುವ ಮಾಧ್ಯಮ ರಂಗಕ್ಕೆ ಬಹಳ ದೊಡ್ಡ ಜವಬ್ದಾರಿ ಇದೆ. ತಮ್ಮ ಬರವಣಿಗೆ, ವರದಿಗಳ ಮೂಲಕ ಜನರಿಗೆ ತಲುಪಿಸುವ ಮಾಧ್ಯಮಗಳು ಜನಸೇವೆ ದೇಶಸೇವೆ ಮಾಡುತ್ತಿರುವುದು ವಿಶೇಷ. ಮಾಧ್ಯಮದವರ ಪರಿಶ್ರಮ ಮತ್ತು ಅವರ ಕುಟುಂಬಸ್ಥರ ತ್ಯಾಗದಿಂದ ಪತ್ರಕರ್ತರು ಪ್ರಶಸ್ತಿಗೆ ಭಾಜನರಾಗಿರುವುದು ಸಂತಸದ ಸಂಗತಿ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಪತ್ರಕರ್ತರಿಗೆ ಟಿಯೆಸ್ಸಾರ್, ಮೊಹರೆ ಹಣಮಂತರಾಯ, ಅಭಿವೃದ್ಧಿ ಪತ್ರಿಕೋದ್ಯಮ, ಪರಿಸರ ಪತ್ರಿಕೋದ್ಯಮ, ರಘುರಾಮಶೆಟ್ಟಿ ವಡ್ಡರ್ಸೆ ಹಾಗೂ ಚಲನಚಿತ್ರೋದ್ಯಮಿಗಳಿಗೆ ಚಲನಚಿತ್ರಪ್ರಶಸ್ತಿ,ಚಲನಚಿತ್ರಗಳಿಗೆ ಸಹಾಯಧನಗಳನ್ನು ನೀಡಲಾಗುತ್ತಿದೆ. ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ನೀಡುವ ಸೌಲಭ್ಯವನ್ನು 2024–25ನೇ ಸಾಲಿನ ಬಜೆಟನಲ್ಲಿ ಘೋಷಿಲಾಗಿದ್ದು, ಇದು ಈಗಾಗಲೇ ಕಾರ್ಯಗತಗೊಂಡಿದೆ. ಪತ್ರಕರ್ತರಿಗೆ ಆರೋಗ್ಯ ವಿಮೆ ಸೌಲಭ್ಯ ಹಾಗೂ ಅರ್ಹ ಪತ್ರಕರ್ತರಿಗೆ ನಿವೇಶನ ಹಂಚಿಕೆಯನ್ನು ಮುಂಬರುವ ದಿನಗಳಲ್ಲಿ ನೀಡಲಾಗುವುದು ಎಂದು ಭರವಸೆ ನೀಡಿದರು.

ಇತ್ತೀಚೆಗೆ ಹೆಚ್ಚಾಗುತ್ತಿರುವ ಸುಳ್ಳು ಸುದ್ದಿಗಳನ್ನು ನಿಯಂತ್ರಿಸುವುದು ಎಲ್ಲರ ಕರ್ತವ್ಯವಾಗಿದೆ. ಆಧುನಿಕ ಪತ್ರಿಕೋದ್ಯಮ ಶಿಕ್ಷಣ ನೀಡುವ ಪತ್ರಿಕೋದ್ಯಮ ಇನ್ಸಿಟಿಟ್ಯೂಟನ್ನು ಪ್ರಾರಂಭಿಸುವುದಾಗಿ ತಿಳಿಸಿದರು.

ಇದೇ ಸಮಯದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಹೊರತಂದ 2023 ಮತ್ತು 2024ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪುರಸ್ಕೃತರ ಪುಸ್ತಕವನ್ನು ಬಿಡುಗಡೆ ಮಾಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಮಾಧ್ಯಮ ಅಕಾಡೆಮಿಯಿಂದ ಮಹಿಳಾ ಬಜೆಟ್, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್ ಕಾರ್ಯಾಗಾರ, ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಮುಂತಾದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಜೀವಮಾನ ಹಾಗೂ ವಾರ್ಷಿಕ ಪ್ರಶಸ್ತಿ ಮೊತ್ತವನ್ನು ಕಳೆದ ಬಾರಿಗಿಂತ ಈ ಬಾರಿ ದುಪ್ಪಟ್ಟುಗೊಳಿಸಲಾಗಿದೆ. ಪತ್ರಕರ್ತರಿಗೆ ಹೊಸ ತಂತ್ರಜ್ಞಾನದ ಬಳಕೆಯಿಂದ ಮುನ್ನೆಡೆಯಲು ಕಾರ್ಯಕ್ರಮಗಳನ್ನು ರೂಪಿಸಲಾಗುವುದು. ಸಮಸಮಾಜದ ಮುಖ್ಯಮಂತ್ರಿಗಳ ಕನಸನ್ನು ನನಸಾಗಿಸಲು ಪ್ರಯತ್ನಿಸಲಾಗುವುದು. ಅಕಾಡೆಮಿಯು ಸ್ತ್ರೀ ಸಬಲೀಕರಣ, ಸುಳ್ಳು ಸುದ್ದಿ ನಿಯಂತ್ರಣ, ಪತ್ರಕರ್ತರ ಕಲ್ಯಾಣ ಯೋಜನೆಗಳನ್ನು ಜಾರಿ ಮಾಡುವ ಮೂಲಕ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದೆ. ಬಹುತೇಕ ಪತ್ರಿಕೋದ್ಯಮ ಕಾಲೇಜುಗಳು ಮುಚ್ಚಿಹೋಗಿದ್ದು, ಈ ಕ್ಷೇತ್ರವನ್ನು ಹಾಗೂ ಪತ್ರಕರ್ತರನ್ನು ಮುನ್ನೆಲೆಗೆ ತರಲು ಅಕಾಡೆಮಿಯು ಪ್ರಯತ್ನಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಮಾಧ್ಯಕ ಸಲಹೆಗಾರಾದ ಕೆ.ವಿ. ಪ್ರಭಾಕರ್ ಅವರು ಮಾತನಾಡುತ್ತಾ, ಊಹಾ ಪತ್ರಿಕೋದ್ಯಮ, ಸಾಮಾಜಿಕ ಜಾಲತಾಣಗಳಿಂದ ಪತ್ರಿಕಾ ರಂಗಕ್ಕೆ ಧಕ್ಕೆ ಬರುತ್ತಿದೆ. ಮಾಧ್ಯಮದವರು ಹೊಸ ಹೊಸ ತಂತ್ರಜ್ಞಾನಗಳ ಬಳಕೆಯಿಂದ ಕ್ಷೇತ್ರಕ್ಕೆ ಮೆರಗು ನೀಡಬೇಕು. ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಸೌಲಭ್ಯ ನೀಡಲಾಗುತ್ತಿದೆ. ಮುಂದುವರೆದು ಇವರಿಗೆ ಆರೋಗ್ಯ ವಿಮೆ ನೀಡಲು ಸಹ ಸರ್ಕಾರ ಬದ್ಧವಾಗಿದೆ ಎಂದರು.

2023 ಹಾಗೂ 2024ರ ಜೀವಮಾನದ ಸಾಧನೆಯ ವಿಶೇಷ ಪ್ರಶಸ್ತಿಗೆ ಕ್ರಮವಾಗಿ ಹಿರಿಯ ಪತ್ರಕರ್ತರಾದ ಅ.ಚ. ಶಿವಣ್ಣ ಹಾಗೂ ವಾರ್ತಾ ಭಾರತಿ ಸಂಪಾದಕರಾದ ಅಬ್ದು ಸಲಾಂ ಪುತ್ತಿಗೆ ಅವರಿಗೆ ನೀಡಲಾಯಿತು. 2023 ಹಾಗೂ 24ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ ದತ್ತಿ ಪ್ರಶಸ್ತಿಗಳಿಗೆ ಭಾಜನರಾದ ಪತ್ರಕರ್ತರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

(2ನೇ ಪುಟ ನೋಡಿ)

# ಸೋನಿಯಾ ಗಾಂಧಿ ವಿರುದ್ಧ ಹಕ್ಕುಚ್ಯುತಿ ಮಂಡನೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:.3: ಕಳೆದ ವಾರ ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು "ಅವಮಾನಿಸಿದ್ದಾರೆ ಮತ್ತು ಮಾನಹಾನಿಕರ ಪದ" ಬಳಸಿದ್ದಾರೆ ಎಂದು ಆರೋಪಿಸಿ, ಬಿಜೆಪಿ ಸಂಸದರು ಸೋಮವಾರ ಕಾಂಗ್ರೆಸ್ ಸಂಸದೆ ಸೋನಿಯಾ ಗಾಂಧಿ ವಿರುದ್ಧ ಸಂಸತ್ತಿನ ಹಕ್ಕುಚ್ಯುತಿ ನಿರ್ಣಯ ಮಂಡಿಸಿದರು.

ಸೋನಿಯಾ ಹೇಳಿಕೆ "ಅತ್ಯುನ್ನತ ಹುದ್ದೆಯ ಘನತೆಯನ್ನು ಕುಗ್ಗಿಸುವ" ಉದ್ದೇಶವನ್ನು ಹೊಂದಿದೆ ಎಂದು ಬಿಜೆಪಿ ಸಂಸದರು ಆರೋಪಿಸಿದ್ದಾರೆ.

"ರಾಜ್ಯಸಭಾ ಸದಸ್ಯೆ ಸೋನಿಯಾ ಗಾಂಧಿ ಅವರು ಇತ್ತೀಚೆಗೆ ಭಾರತದ ರಾಷ್ಟ್ರಪತಿಗಳ ವಿರುದ್ಧ ಬಳಸಿದ ಕೆಲವು ಅಸಂಸದೀಯ, ಅವಹೇಳನಕಾರಿ ಹೇಳಿಕೆಗಳ ಬಗ್ಗೆ ನಾವು ತೀವ್ರ ನಿರಾಶೆಯಿಂದ ಹಕ್ಕುಚ್ಯುತಿ ಮಂಡಿಸುತ್ತಿದ್ದೇವೆ. ಇದು ಗಂಭೀರ ಪರಿಗಣನೆ ಮತ್ತು ಶಿಸ್ತು ಕ್ರಮಕ್ಕೆ ಅರ್ಹವಾಗಿವೆ" ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

ರಾಷ್ಟ್ರಪತಿಗಳು ಬಜೆಟ್ ಅಧಿವೇಶನಕ್ಕೆ ಮುಂಚಿತವಾಗಿ ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಿದ ನಂತರ, ಮುರ್ಮು ಅವರು ಕೊನೆಯವರೆಗೂ ತುಂಬಾ ದಣಿದಿದ್ದರು. ಅವರಿಗೆ ಮಾತನಾಡಲು ಕಷ್ಟವಾಗುತ್ತಿತ್ತು. ಕಳಪೆ ವಿಷಯ" ಎಂದು ಕಾಂಗ್ರೆಸ್ ಮಾಜಿ ಮುಖ್ಯಸ್ಥೆ ಸೋನಿಯಾ ಗಾಂಧಿ ಹೇಳಿದ್ದರು.

# ಕೃಷಿಗಾಗಿ ತಾಯಿ ಮಾಡಿದ ಸಾಲ ತೀರಿಸಲಾಗದೇ ಮಗ ಆತ್ಮಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 03 : ತಾಯಿ ಮಾಡಿದ ಸಾಲದಿಂದ ಮನನೊಂದು ಮಗ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೀದರ್ ಜಿಲ್ಲೆಯ ಚಿಟಗುಪ್ಪ ತಾಲೂಕಿನ ರಾಂಪೂರ್ ಗ್ರಾಮದಲ್ಲಿ ನಡೆದಿದೆ.

ಮೃತನನ್ನು ಗಣೇಶ್ (26) ಎಂದು ಗುರುತಿಸಲಾಗಿದೆ. ಮೃತ ಗಣೇಶ್ ತಾಯಿ ಕೃಷಿಗಾಗಿ ಬ್ಯಾಂಕ್‌ನಲ್ಲಿ ಐದು ಲಕ್ಷ ಸಾಲ ಮಾಡಿದ್ದರು.

ಬಂದ ಸಾಲದಿಂದ ಗಣೇಶ್ ತೊಗರಿ ಬಿತ್ತನೆ ಮಾಡಿದ್ದರು. ಆದರೆ ಬೆಳೆ ಫಲವತ್ತಾಗಿ ಬರದೇ ಹಾಳಾಗಿ ಹೋಗಿತ್ತು. ಹೀಗಾಗಿ ಸಾಲ ಮರುಪಾವತಿಸಲು ಸಾಧ್ಯವಾಗದೇ ಮನನೊಂದು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಈ ಕುರಿತು ಚಿಟ್ಟಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾರು ಪಲ್ಟಿ- ರಸ್ತೆಯಿಡೀ ಚೆಲ್ಲಿದ ಕೋಟ್ಯಾಂತರ ಮೌಲ್ಯದ ಗಾಂಜಾ!




ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 03 : ಕಾರೊಂದು ಪಲ್ಟಿಯಾಗಿ, ಅದರಲ್ಲಿ ಅಕ್ರಮವಾಗಿ ಸಾಗಿಸಲಾಗುತ್ತಿದ್ದ ಕೋಟ್ಯಾಂತರ ರೂ. ಮೌಲ್ಯದ ಗಾಂಜಾ ರಸ್ತೆಯಿಡೀ ಚೆಲ್ಲಾಪಿಲ್ಲಿಯಾಗಿ ಬಿದ್ದ ಘಟನೆ ಸೋಮವಾರ ಬಸವಕಲ್ಯಾಣದಲ್ಲಿ ನಡೆದಿದೆ.

ಘಟನೆ ಬಸವಕಲ್ಯಾಣ ತಾಲೂಕಿನ ರಾಜೇಶ್ವರ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಮಹಿಳೆಯೊಬ್ಬರು ರಸ್ತೆ ದಾಟುತ್ತಿದ್ದಾಗ ಡಿಕ್ಕಿ ತಪ್ಪಿಸಲು ಹೋಗಿ ಕಾರು ಚಾಲಕ ಡಿವೈಡರ್‌ಗೆ ಡಿಕ್ಕಿ ಹೊಡೆದಿದ್ದಾನೆ. ಈ ವೇಳೆ ಕಾರು ಪಲ್ಟಿಯಾಗಿ ಬಿದ್ದಿದೆ.

ಕಾರು ಪಲ್ಟಿಯಾಗುತ್ತಿದ್ದಂತೆ ಅದರಲ್ಲಿ ಸಾಗಿಸಲಾಗುತ್ತಿದ್ದ ಕೋಂಟ್ಯಂತರ ರೂ. ಮೌಲ್ಯದ ಗಾಂಜಾ ಪ್ಯಾಕೆಟ್‌ಗಳು ರಸ್ತೆಯಿಡೀ ಚೆಲ್ಲಾಪಿಲ್ಲಿಯಾಗಿ ಬಿದ್ದಿದೆ. ಇದನ್ನು ಗಮನಿಸಿದ ಗ್ರಾಮದ ಜನರು ಕಾರಿನಲ್ಲಿ ಪ್ರಯಾಣ ಮಾಡುತ್ತಿದ್ದ ಇಬ್ಬರು ಯುವಕರನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಪಲ್ಟಿಯಾದ ಕಾರು ತೆಲಂಗಾಣದಿಂದ ಮಹಾರಾಷ್ಟ್ರದ ಕಡೆಗೆ ಸಾಗುತ್ತಿತ್ತು ಎಂದು ತಿಳಿದು ಬಂದಿದೆ. ಸ್ಥಳಕ್ಕೆ ಆಗಮಿಸಿದ ಬಸವಕಲ್ಯಾಣ ಗ್ರಾಮೀಣ ಠಾಣೆಯ ಪೊಲೀಸರು ಕಾರಿನಲ್ಲಿದ್ದ 118 ಕೆಜಿ ಗಾಂಜಾ ಜಪ್ತಿ ಮಾಡಿದ್ದಾರೆ. ಆರೋಪಿಗಳಾದ ಫಿರೋಜ್ ಹಾಗೂ ರಿಯಾಜ್‌ನನ್ನು ಬಂಧಿಸಿದ್ದಾರೆ.

# ಫೆ.4ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಫೆ:3:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೃಷಿ ಇಲಾಖೆ, ಕರ್ನಾಟಕ ರಾಜ್ಯ ಕೃಷಿ ಇಲಾಖೆ ಹಾಗೂ ಕರ್ನಾಟಕ ಪ್ರದೇಶ ಕೃಷಿಕ ಸಮಾಜ ಇವರ ಸಹಯೋಗದಲ್ಲಿ ಮಂಗಳವಾರ ಫೆಬ್ರವರಿ 4 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಆಯೋಜಿಸಲಾಗಿದೆ ಎಂದು ಯಾದಗಿರಿ ಜಂಟಿ ಕೃಷಿ ನಿರ್ದೇಶಕರು ಶ್ರೀ ರತೇಂದ್ರನಾಥ ಸುಗೂರ ಅವರು ತಿಳಿಸಿದ್ದಾರೆ.

ಕೃಷಿ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಇಂದು ಈ ಕುರಿತು ಪತ್ರಿಕಾಗೋಷ್ಠಿ ನಡೆಸಿದ ಅವರು, ಸರ್ಕಾರದ ನಿರ್ದೇಶನದಂತೆ ಯುವಪೀಳಿಗೆ, ತಾಯಂದಿರಲ್ಲಿ, ಸಾರ್ವಜನಿಕರಲ್ಲಿ ಆರೋಗ್ಯಕ್ಕೆ ಅತ್ಯಂತ ಉಪಯುಕ್ತವಾಗಿರುವ ಸಿರಿಧಾನ್ಯ ಆಹಾರದ ಬಗ್ಗೆ ಅರಿವು ಮೂಡಿಸಲು ಈ ಸಿರಿಧಾನ್ಯ ಹಾಗೂ ಸಾವಯವ ಹಬ್ಬ ಹಮ್ಮಿಕೊಂಡಿದ್ದು, ಅಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಈ ಕಾರ್ಯಕ್ರಮ ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಘನ ಉಪಸ್ಥಿತಿಯಲ್ಲಿ, ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

(2ನೇ ಪುಟ ನೋಡಿ)

# ಪೊಲೀಸರ ಕಚ್ಚಿ ಓಡಿ ಹೋದ ಸರಗಳ್ಳ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.3:ಸರಗಳ್ಳನೊಬ್ಬ ಬಂಧಿಸಲು ಹೋದ ಪೊಲೀಸ್ ಸಿಬ್ಬಂದಿಯೊಬ್ಬರಿಗೆ ಕಚ್ಚಿ ಪರಾರಿಯಾಗಿರುವ ಘಟನೆ ನಗರದಲ್ಲಿ ನಡೆದಿದೆ.

ಸರಗಳ್ಳತನ ಪ್ರಕರಣದಲ್ಲಿ ಆರೋಪಿಯಾಗಿರುವ ಮಹ್ಮದ್ ನವಾಜ್ ಎಂಬಾತನೆ ಅಶೋಕನಗರ ಪೊಲೀಸ್ ಠಾಣೆಯ ಸಿಬ್ಬಂದಿ ಶರಣಬಸಪ್ಪಾ ಸಜ್ಜನ್ ಅವರಿಗೆ ಕಲ್ಲಿನಿಂದ ಹೊಡೆದು ಕೈಗೆ ಕಚ್ಚಿ ಪರಾರಿಯಾಗಿದ್ದು, ಗಾಯಗೊಂಡಿರುವ ಸಜ್ಜನ್ ಅವರನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಸರಗಳ್ಳತನ ಪ್ರಕರಣದಲ್ಲಿ ಆರೋಪಿಯಾದ ಮಹ್ಮದ್ ನವಾಜ್ ಹೈಕೋರ್ಟ್ ಎದುರುಗಡೆ ಇರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಆತನನ್ನು ಬಂಧಿಸಲು ಅಶೋಕನಗರ ಪೊಲೀಸ್ ಠಾಣೆ ಸಿಬ್ಬಂದಿಗಳಾದ ಶರಣಬಸಪ್ಪಾ ಸಜ್ಜನ್, ಸಂತೋಷಕುಮಾರ ಮತ್ತು ಚಂದ್ರಶೇಖರ್ ಅವರು ಅಲ್ಲಿಗೆ ತೆರಳಿದ್ದಾರೆ. ಗ್ರೀನ್ ಪಾರ್ಕ್ ಹಿಂದುಗಡೆ ಇರುವ ಖುಲ್ಲಾ ಜಾಗದಲ್ಲಿದ್ದ ನವಾಜ್ ಪೊಲೀಸ್ ಸಿಬ್ಬಂದಿಯನ್ನು ನೋಡಿ ಅಲ್ಲಿಂದ ಓಡಿ ಹೋಗಲು ಯತ್ನಿಸಿದ್ದಾನೆ. ಈ ವೇಳೆ ಪೊಲೀಸರು ಅವನನ್ನು ಹಿಡಿಯಲು ಬೆನ್ನಟ್ಟಿದಾಗ ಇವರೆಡೆಗೆ ಕಲ್ಲು ಎಸೆದಿದ್ದಾನೆ. ಶರಣಬಸಪ್ಪಾ ಸಜ್ಜನ್ ಅವರ ತಲೆಗೆ ಕಲ್ಲೇಟು ಬಿದ್ದು ಗಾಯಗೊಂಡು ಕೆಳಗಡೆ ಬಿದ್ದಿದ್ದಾರೆ. ಆಗ ಸಂತೋಷ ಮತ್ತು ಚಂದ್ರಶೇಖರ್ ಅವರು ಆರೋಪಿ ನವಾಜನನ್ನು ಹಿಡಿದು ಕೆಳಗೆ ಕೂಡಿಸಿದ್ದು, ಈ ವೇಳೆ ನವಾಜ್ ಶರಣಬಸಪ್ಪಾ ಅವರ ಬಲಗೆ ಮತ್ತು ಎಡಗೈಗೆ ಜೋರಾಗಿ ಕಚ್ಚಿದ್ದಾನೆ.

(2ನೇ ಪುಟ ನೋಡಿ)

# ಕುಂಭಮೇಳ ಕಾಲ್ತುಳಿತ ನಿಖರ ಸಾವಿನ ಸಂಖ್ಯೆ ನೀಡಲು ವಿಪಕ್ಷಗಳ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಫೆ.3: ಬಜೆಟ್ ಅಧಿವೇಶನದ ಮೂರನೇ ದಿನವಾದ ಸೋಮವಾರ, ಮಹಾ ಕುಂಭ ಮೇಳದಲ್ಲಿ ನಡೆದ ಕಾಲ್ತುಳಿತ ಪ್ರಕರಣದ ಕುರಿತು ಪ್ರತಿಪಕ್ಷಗಳು ಸದನದಲ್ಲಿ ಗದ್ದಲ ಎಬ್ಬಿಸಿದವು. ಕಾಲ್ತುಳಿತದಿಂದ ಉಂಟಾದ ಸಾವಿನ ಸರಿಯಾದ ಅಂಕಿಅಂಶಗಳನ್ನು ರಾಜ್ಯ ಸರ್ಕಾರ ಪ್ರಸ್ತುತಪಡಿಸಬೇಕೆಂದು ಪ್ರತಿಪಕ್ಷಗಳು ಒತ್ತಾಯಿಸುತ್ತವೆ.

ಮಹಾ ಕುಂಭ ಮೇಳದಲ್ಲಿ ಆಡಳಿತಾತ್ಮಕ ನಿರ್ಲಕ್ಷ್ಯ ಮತ್ತು ಸಾರ್ವಜನಿಕರಿಗೆ ನಿರ್ಮಿಸಲಾದ ಸೇತುವೆಗಳನ್ನು ಮುಚ್ಚಿ ಅಖಾಡಗಳು ಮತ್ತು ವಿವಿಐಪಿಗಳಿಗೆ ಮಾತ್ರ ತೆರೆಯುವುದರಿಂದ ಈ ದುರಂತ ಸಂಭವಿಸಿದೆ ಎಂದು ಸಮಾಜವಾದಿ ಪಕ್ಷದ ಸಂಸದ ರಾಮ್ ಗೋಪಾಲ್ ಯಾದವ್ ಹೇಳಿದ್ದಾರೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ, ಈ ಘಟನೆಯಲ್ಲಿ ಸಾವಿರಾರು ಜನರು ಸಾವನ್ನಪ್ಪಿದ್ದಾರೆ. ಕೆಲವರು ಗಂಗಾ ನದಿಯಲ್ಲಿ ಕೊಚ್ಚಿ ಹೋಗಿದ್ದು ಇತರರು ಸಮಾಧಿಯಾದರು ಎಂದು ಸಮಾಜವಾದಿ ಪಕ್ಷದ ಸಂಸದರು ಹೇಳಿದರು. ಆದರೆ ಈ ಸಂಖ್ಯೆ 30 ಮೀರಬಾರದು ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮೃತರ ಸಂಬಂಧಿಕರಿಗೆ 15 ರಿಂದ 20 ಸಾವಿರ ರೂಪಾಯಿಗಳನ್ನು ನೀಡಿ ಶವಗಳನ್ನು ತೆಗೆದು–ಕೊಂಡು ಹೋಗುವಂತೆ ಒತ್ತಡ ಹೇರಲಾಗುತ್ತಿದೆ. ಯಾವುದೇ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಓಡಿ ಹೋದ ಸರಗಳ್ಳ

ಈ ವೇಳೆ ಸಂತೋಷ ಮತ್ತು ಚಂದ್ರಶೇಖರ್ ಅವರು ಬಿಡಿಸಲು ಹೋಗಿದ್ದು, ಆಗ ಆರೋಪಿ ನವಾಜ್ ಪರಾರಿಯಾಗಿದ್ದಾನೆ. ಈ ಬಗ್ಗೆ ಅಶೋಕನಗರ ಪೊಲೀಸ್ ಠಾಣೆಯಲ್ಲಿ ನವಾಜ್ ವಿರುದ್ಧ ಪ್ರಕರಣ ದಾಖಲಾಗಿದೆ. ತನಿಖೆ ನಡೆದಿದೆ.

### ಸಾವಿನ ಸಂಖ್ಯೆ ನೀಡಲು ವಿಪಕ್ಷಗಳ ಒತ್ತಾಯ

ಅಧಿಕಾರಿಯ ವಿರುದ್ಧ ಕ್ರಮ ಕೈಗೊಂಡಿಲ್ಲ. ನಾವು ಈ ವಿಷಯವನ್ನು ಸದನದಲ್ಲಿ ಎತ್ತಿದರೆ, ಅದನ್ನು ತಿರಸ್ಕರಿಸಲಾಗುತ್ತದೆ. ಕುಂಭಮೇಳದಲ್ಲಿ ಇಷ್ಟೊಂದು ದೊಡ್ಡ ದುರಂತ ಸಂಭವಿಸಿದೆ ಎಂದು ಅವರು ಹೇಳಿದರು, ಆದರೂ ನಿಜವಾದ ಸಂಖ್ಯೆಯನ್ನು ಮರೆಮಾಡಲಾಗುತ್ತಿದೆ. ಅಲ್ಲಿಗೆ ಹೋದ ತಮ್ಮ ಕುಟುಂಬ ಸದಸ್ಯರು ಜೀವಂತವಾಗಿದ್ದಾರೆಯೇ ಅಥವಾ ಇಲ್ಲವೇ ಎಂದು ತಿಳಿದುಕೊಳ್ಳುವ ಹಕ್ಕು ಜನರಿಗೆ ಇಲ್ಲವೇ? ಮೂಲಭೂತ ಪಟ್ಟಿಯನ್ನು ಸಹ ಒದಗಿಸಲಾಗುತ್ತಿಲ್ಲ. ಅವರು ಕೇವಲ 30 ಜನರು ಸತ್ತಿದ್ದಾರೆ ಎಂದು ಹೇಳುತ್ತಾರೆ. ಆದ್ದರಿಂದ ಕನಿಷ್ಠ ಆ 30 ಜನರ ಹೆಸರುಗಳನ್ನು ಬಿಡುಗಡೆ ಮಾಡಿ. ಅವರು ಯಾರು, ಎಲ್ಲಿಂದ ಬಂದವರು. ಈ ಮಾಹಿತಿಯೂ ಲಭ್ಯವಿಲ್ಲ. ಇದು ಕೇವಲ ರಾಜ್ಯದ ಸಮಸ್ಯೆಯಲ್ಲ, ರಾಷ್ಟ್ರೀಯ ದುರಂತ ಎಂದು ಹೇಳಿದರು.ಇದು ನಮ್ಮ ಬಗ್ಗೆ ಮಾತ್ರವಲ್ಲ, ಇಡೀ ದೇಶವೇ ಚಿಂತಿತವಾಗಿದ್ದು, ತನ್ನ ಜನರನ್ನು ಹುಡುಕುತ್ತಿದೆ ಎಂದು ಆರ್‌ಜೆಡಿ ಸಂಸದ ಮನೋಜ್ ಝಾ ಹೇಳಿದರು. ದೃಢೀಕೃತ ವರದಿಗಳ ಪ್ರಕಾರ, ಟ್ರಕ್‌ನಲ್ಲಿ ಸಾವಿರಾರೂ ಮೊಬೈಲ್ ಫೋನ್‌ಗಳು ಕಂಡುಬಂದಿವೆ. ಆದರೆ ಅವುಗಳ ಮಾಲೀಕರು ಎಲ್ಲಿದ್ದಾರೆಂದು ಯಾರಿಗೂ ತಿಳಿದಿಲ್ಲ. ಏತನ್ಮಧ್ಯೆ, ಅಧಿಕಾರಿಗಳು ಪ್ರಮಾಣಪತ್ರಗಳನ್ನು ನೀಡುವಲ್ಲಿ ನಿರತರಾಗಿದ್ದಾರೆ. ಯಾರಾದರೂ ಸಂತರಲ್ಲಿ ಯಾವುದೇ ನ್ಯೂನತೆಗಳನ್ನು ಎತ್ತಿ ತೋರಿಸಿದರೆ, ಅವರ ಹೆಸರು ಕೆಡಿಸಲು ಪ್ರಯತ್ನಿಸಲಾಗುತ್ತದೆ. ಸತ್ಯವೆಂದರೆ ಕುಂಭಮೇಳ ಇದಕ್ಕೂ ಮೊದಲು ಇತ್ತು ಮತ್ತು ಇದರ ನಂತರವೂ ಮುಂದುವರಿಯುತ್ತದೆ. ಕುಂಭ ರಾಶಿಯು ನಿರಂತರತೆಯ ಬಗ್ಗೆ, ಆದರೆ ರಾಜಕೀಯ ಪಕ್ಷಗಳು ಹಾಗಲ್ಲ. ಜನರು ಹೊಣೆಗಾರಿಕೆಯನ್ನು ಬಯಸುತ್ತಾರೆ ಎಂದು ಆಗ್ರಹಿಸಿದರು.

ಸದನದಲ್ಲಿ ಶಾಂತಿಯುತವಾಗಿ ಕೆಲಸ ನಡೆಯಬೇಕೆಂದು ಇಡೀ ವಿರೋಧ ಪಕ್ಷ ಬಯಸುತ್ತದೆ ಎಂದು ಕಾಂಗ್ರೆಸ್ ಸಂಸದ ಪ್ರಮೋದ್ ತಿವಾರಿ ಹೇಳಿದರು. ಹಾಗಾಗಿ ಸರ್ಕಾರದ ದುರಾಡಳಿತದಿಂದಾಗಿ ಕುಂಭಮೇಳದಲ್ಲಿ ಪ್ರಾಣ ಕಳೆದುಕೊಂಡವರಿಗೆ ಗೌರವ ಸಲ್ಲಿಸಬೇಕೆಂದು ಒತ್ತಾಯಿಸಿ ನಾವು ಒಂದು ಗಂಟೆ ಕಾಲ ಪಾದಯಾತ್ರೆ ಮಾಡಿದೆವು. ಆದರೆ ಸರ್ಕಾರ ಸತ್ಯವನ್ನು ಮರೆಮಾಡಲು ಪ್ರಯತ್ನಿಸುತ್ತಿದೆ ಮತ್ತು ಸಾವಿನ ಸಂಖ್ಯೆಯನ್ನು ಬಹಿರಂಗಪಡಿಸದಂತೆ ಮತ್ತು ಘಟನೆಯ ಸಂದರ್ಭಗಳನ್ನು ತಪ್ಪಿಸುವಂತೆ ನೋಡಿಕೊಳ್ಳುತ್ತಿದೆ. ಇದು ಭಾರತದ ಎಲ್ಲಾ ಭಕ್ತರು, ಯಾತ್ರಿಕರು ಮತ್ತು ನಾಗರಿಕರಿಗೆ ಮಾಡಿದ ಅವಮಾನ. ನಮಗೆ ಗೌರವ ಸಲ್ಲಿಸಲು ಅವಕಾಶವೂ ನೀಡುತ್ತಿಲ್ಲ. ಇದನ್ನು ವಿರೋಧಿಸಿ ನಾವು ಮಧ್ಯಾಹ್ನ 1 ಗಂಟೆಯವರೆಗೆ ಸಭಾತ್ಯಾಗ ಮಾಡಿದೆವು ಎಂದು ಪ್ರಮೋದ್ ಹೇಳಿದರು.ಇದೇ ವೇಳೆ ಮಾತನಾಡಿದ ಡಿಎಂಕೆ ಸಂಸದೆ ಕನಿಮೋಳಿ, ಯಾತ್ರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ವಿಫಲವಾದ ಸರ್ಕಾರವನ್ನು ಟೀಕಿಸಿ ತಮ್ಮ ಸಂತಾಪ ವ್ಯಕ್ತಪಡಿಸಿದರು. ಕುಂಭಮೇಳ ಕಾಲ್ತುಳಿತದಲ್ಲಿ ಪ್ರಾಣ ಕಳೆದುಕೊಂಡ ಜನರಿಗೆ ನನ್ನ ದುಃಖ ಮತ್ತು ಸಹಾನುಭೂತಿಯನ್ನು ವ್ಯಕ್ತಪಡಿಸಲು ನಾನು ಬಯಸುತ್ತೇನೆ. ಈ ಜನರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ನಂಬಿದ್ದರು, ಅವರು ತಮ್ಮನ್ನು ರಕ್ಷಿಸುತ್ತಾರೆ ಎಂದು ಆಶಿಸಿದರು, ಆದರೆ ದುರದೃಷ್ಟವಶಾತ್, ಯಾರೂ ಅವರನ್ನು ರಕ್ಷಿಸಲಿಲ್ಲ ಎಂದು ಅವರು ಹೇಳಿದರು.

# ಸಿರಿಧಾನ್ಯ ಮತ್ತು ಸಾವಯವ ಹಬ್ಬ

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ, ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕುಮಾರಿ ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ ಮಾಲಿ ಪಾಟೀಲ್ , ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಬಸನಗೌಡ ಮಾಲಿಪಾಟೀಲ್ ಮಾರ್ಕಲ್ ಅತಿಥಿಗಳಾಗಿ ಉಪಸ್ಥಿತರಿರುವರು.

ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.

ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದ ಡೀನ್ ಡಾ.ಪ್ರಕಾಶ ಕುಚನೂರ, ಕವಡಿಮಟ್ಟಿ ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥರು ಹಾಗೂ ಹಿರಿಯ ವಿಜ್ಞಾನಿ ಗಳಾದ ಡಾ.ಜಯಪ್ರಕಾಶ ನಾರಾಯಣ ಉಪನ್ಯಾಸಕರಾಗಿ ಉಪಸ್ಥಿತರಿರುವರು ಎಂದು ಹೇಳಿದರು.

ಸಿರಿಧಾನ್ಯ ಮ್ಯಾರಥಾನ್ :

ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬದ ಅಂಗವಾಗಿ ಫೆಬ್ರವರಿ 4ರ ಮಂಗಳವಾರ ರಂದು ಬೆಳಿಗ್ಗೆ 7 ಗಂಟೆಗೆ ಹೊಸ ಬಸ್ ನಿಲ್ದಾಣದಿಂದ

ಶ್ರೀ ಲಾಲ್‌ಬಹದ್ದೂರ್ ಶಾಸ್ತ್ರಿ ವೃತ್ತ, ಸುಭಾಷಚಂದ್ರ ಬೋಸ್ ವೃತ್ತದ ಮೂಲಕ ಯಾದಗಿರಿ ಸರ್ಕಾರಿ ಪದವಿ ಮಹಾವಿದ್ಯಾಲಯದವರೆಗೆ ಸಿರಿಧಾನ್ಯ ಮ್ಯಾರಥಾನ್ ಆಯೋಜಿಸಲಾಗಿದೆ. ಇದರಲ್ಲಿ ರೈತರು, ಯುವಕರು, ನಗರ ನಾಗರಿಕರು, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ,ಸಿಬ್ಬಂದಿ, ಅನೇಕ ಶಾಲಾ,ಕಾಲೇಜು ಮಕ್ಕಳು ಭಾಗವಹಿಸಲಿದ್ದಾರೆ. ಇಲ್ಲಿ ಪ್ರತಿಯೊಬ್ಬರಿಗೆ ರಾಗಿ ಜೂಸ್ ಸಹ ನೀಡಲಾಗುವುದೆಂದರು.

ಸಿರಿಧಾನ್ಯ ಸಂಬಂಧಿತ ಮಳಿಗೆಗಳ ಸ್ಥಾಪನೆಈ ಹಬ್ಬದಲ್ಲಿ ಸಿರಿಧ್ಯಾನ ಮತ್ತು ಕೃಷಿಗೆ ಸಂಬಂಧಿಸಿದಂತೆಯೇ ವಿವಿಧ 30ಕ್ಕೂ ಅಧಿಕ ಮಳಿಗೆಗಳನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ಸ್ಥಾಪಿಸಲಾಗುತ್ತಿದೆ.ಇದರಂಗವಾಗಿ ಇತ್ತೀಚೆಗೆ ಆಯೋಜಿಸಿದ್ದ ಜಿಲ್ಲಾಮಟ್ಟದ ಸಿರಿಧಾನ್ಯ ಹಾಗೂ ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯಲ್ಲಿ ( ಖಾರ,ಸಿಹಿ ಮತ್ತು ಮರೆತು ಹೋದ ಖಾದ್ಯಗಳ) ವಿಜೇತರಾದ ಒಂಬತ್ತು ಜನರಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನ ನೀಡಲಾಗುವುದೆಂದು ಅವರು ಹೇಳಿದರು. ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕರ ಆಯ್ಕೆ

2024–25 ನೇ ಸಾಲಿನ ಆತ್ಮ ಯೋಜನೆಯಡಿ ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಜಿಲ್ಲೆಯ ಪ್ರಗತಿಪರ ರೈತರನ್ನು ಆಯ್ಕೆ ಮಾಡಲಾಗಿದೆ. ಪ್ರತಿಯೊಬ್ಬರಿಗೂ ನಗದು 25 ಸಾವಿರ ರೂ., ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಗುವುದು, ಆಧುನಿಕ ಜೀವನ ಶೈಲಿಗೆ ಸಿರಿಧಾನ್ಯ ಆಹಾರದ ಮಹತ್ವ ಕುರಿತು ಏರ್ಪಡಿಸಿದ್ದ ಭಾಷಣ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೂ ಬಹುಮಾನ ನೀಡಲಾಗುವುದೆಂದು ರತೇಂದ್ರನಾಥ ವಿವರಿಸಿದರು.

ಈ ಮಹತ್ವದ ಹಬ್ಬದಂತಹ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧೆಡೆಯಿಂದ ಸುಮಾರು ಒಂದು ಸಾವಿರ ಜನರು ಭಾಗವಹಿಸಲಿದ್ದಾರೆ. ವಿಶೇಷವಾಗಿ ಬತ್ತ ಬೆಳೆಯುವ ಕಕ್ಕೇರಾದ ರೈತ ಸುಮಾರು ವಿವಿಧ 40 ನಮೂನೆಯ ತಳಿಗಳನ್ನು ಸಂಗ್ರಹಿಸಿದ್ದು, ಯಲ್ಹೇರಿ ರೈತ ವಿಶ್ವ ಶಂಕರ ಎಂಬುವವರು ದೇಶಿಯ ತಳಿ ಹೊಂದಿದ್ದು ಇವರಿಬ್ಬರು ಸಹ ಮಳಿಗೆ ಹಾಕುವ ಮೂಲಕ ಬಂದು ಹೋಗುವ ಜನರಿಗೆ ಈ ಮಾಹಿತಿ ನೀಡಲಿದ್ದಾರೆಂದು ಅವರು ಹೇಳಿದರು.

2024– 25 ನೇ ಸಾಲಿನ ಕಂಬೈನ್ಡ್ ಹಾರ್ವೇಸ್ಟರ್ ಹಬ್ ಸ್ಥಾಪನೆಗಾಗಿ ಇಲಾಖೆ ನಿಯಮಗಳ ಪ್ರಕಾರ ಸಾಮಾನ್ಯ, ಪ.ಜಾ., ಪ.ಪಂ.ಮತ್ತು ಸಂಘ ಸಂಸ್ಥೆ ಹೀಗೆ ಜಿಲ್ಲೆಯ ನಾಲ್ವರು ಆಯ್ಕೆಯಾಗಿದ್ದು,ಅವರಿಗೆಲ್ಲ ಕಾರ್ಯಕ್ರಮದಲ್ಲಿ ಬೇಕಾದ ಸಾಮಗ್ರಿಗಳು ವಿತರಿಸಲಾಗುವುದೆಂದರು. ಇದಕ್ಕೆ ವರ್ಗವಾರು ರಿಯಾಯಿತಿ ಇದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಅಧಿಕಾರಿಗಳಾದ ರಾಜಕುಮಾರ್ , ಸಿಬ್ಬಂಧಿಗಳು ಉಪಸ್ಥಿತರಿದ್ದರು.

### ತಿದ್ದುವಲ್ಲಿ ಮಾಧ್ಯಮಗಳ ಪಾತ್ರ ದೊಡ್ಡದು

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀಮತಿ ಬಿ.ಬಿ. ಕಾವೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್, ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿಗಳಾದ ಸಹನಾ ಎಂ. ಸೇರಿದಂತೆ ವಾರ್ತಾ ಇಲಾಖೆಯ ಹಿರಿಯ ಅಧಿಕಾರಿಗಳು, ಹಿರಿಯ ಪತ್ರಕರ್ತರು, ಗಣ್ಯರು, ಉಪಸ್ಥಿತರಿದ್ದರು.

# ಫೆ.8 ರಂದು ಕುಕನೂರ ನಲ್ಲಿ ಸಹಕಾರಿ ಜಾಗೃತಿ ಸಮಾವೇಶ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.3: ಕುಕನೂರ ಪಟ್ಟಣದಲ್ಲಿ ಫೆಬ್ರುವರಿ 8ನೇ ತಾರೀಕು ಸಹಕಾರಿ ಜಾಗೃತ ಸಮಾವೇಶ ಆಯೋಜನೆ. ಸಹಕಾರ ಕ್ಷೇತ್ರದ ವಿವಿಧ ಯೋಜನೆಗಳಿಂದ ರೈತರ ಅಭಿವೃದ್ಧಿ ಸಾಧ್ಯವಾಗಿದ್ದು ಸಹಕಾರಕ್ಷೇತ್ರದ ಸೌಲಭ್ಯಗಳನ್ನು ರೈತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ, ಚಂದ್ರಶೇಖರಯ್ಯ ಹಿರೇಮಠ ಹೇಳಿದರು.

ಪಟ್ಟಣದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸುದ್ದಿಗೋಷ್ಠಿ ನಡೆಸಿ ಫೆಬ್ರವರಿ 8ರಂದು ಪಟ್ಟಣದಲ್ಲಿ ಜರುಗುವ ಸಹಕಾರ ಜಾಗೃತಿ ಸಮಾವೇಶದ ಮಾಹಿತಿ ನೀಡಿದರು. ತಾಲೂಕಿನಲ್ಲಿ ಸಹಕಾರ ರಂಗವನ್ನು ಬಲಪಡಿಸಲು, ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಆರ್ಥಿಕವಾಗಿ ಉತ್ತೇಜಿಸಲು ಮತ್ತು ರೈತರಿಗೆ ಸಹಕಾರ ಬ್ಯಾಂಕ್ ನ ಸೌಲಭ್ಯಗಳನ್ನು ಮನವರಿಕೆ ಮಾಡುವ ಸಲುವಾಗಿ ಈ ಜಾಗೃತಿ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಇಡೀ ರಾಜ್ಯದಲ್ಲಿ ಜಾಗೃತಿ ಸಮಾವೇಶ ಪ್ರಥಮ, ಮೊಟ್ಟಮೊದಲನೆಯದಾಗಿದ್ದು, ಸರ್ಕಾರ 2025 ನೆ ವರ್ಷವನ್ನು ಜಾಗತಿಕ ಸಹಕಾರ ವರ್ಷವೆಂದು ಘೋಷಣೆ ಮಾಡಿದೆ. ಹೀಗಾಗಿ ರೈತರನ್ನು ಮತ್ತೆ ಸಹಕಾರ ಕ್ಷೇತ್ರಗಳತ್ತ ಸೆಳೆಯಲು ತಾಲೂಕಿನಲ್ಲಿ ವಿಶೇಷ ಜಾಗೃತಿ ಸಮಾವೇಶ ಮಾಡಲಾಗುತ್ತಿದೆ. ಈಗಾಗಲೇ ಸಹಕಾರ ಕ್ಷೇತ್ರದಿಂದ ರೈತರು ವಿಮುಖರಾಗಿದ್ದಾರೆ. ಅವರನ್ನು ಮತ್ತೆ ಸಹಕಾರ ಬ್ಯಾಂಕ್ ನ ಕಡೆ ಬರುವಂತೆ ಮಾಡಿ ರೈತರಿಗೆ ಲಾಭವಾಗುವ ನಿರ್ದಿಷ್ಟ ಉದ್ದೇಶದೊಂದಿಗೆ ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಸಮಾವೇಶ ಕಾರ್ಯಕ್ರಮದಲ್ಲಿ ಸಹಕಾರ ಇಲಾಖೆ ಸಚಿವ ಕೆ ಎನ್ ರಾಜಣ್ಣ, ಸಚಿವರಾದ ಎಚ್ ಕೆ ಪಾಟೀಲ್, ಶಿವರಾಜ್ ತಂಗಡಗಿ, ಆರ್ಥಿಕ ಸಲಹೆಗಾರ ಬಸವರಾಜ್ ರಾಯರಡ್ಡಿ ಸೇರಿದಂತೆ ಅನೇಕ ಧುರೀಣ–ರು ಪಾಲ್ಗೊಳ್ಳಲಿದ್ದು, ರೈತರು ಜನಸಾಮಾನ್ಯರು ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಚಂದ್ರಶೇಖರಯ್ಯ ಹಿರೇಮಠ ಮನವಿ ಮಾಡಿಕೊಂಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಆರ್ ಡಿ ಸಿ ಸಿ ಬ್ಯಾಂಕ್ ನಿರ್ದೇಶಕ ಶೇಖರ್ ಗೌಡ ಉಳ್ಳಾಗಡ್ಡಿ, ಪ್ರಭಾರಿ ಉಪ ನಿಬಂಧಕ ಪ್ರಕಾಶ್ ಸಜ್ಜನ್, ನಾರಾಯಣಪ್ಪ ಹರಪನಹಳ್ಳಿ, ಸಿದ್ದಯ್ಯ ಕಳ್ಳಿಮಠ, ರಾಮಣ್ಣ ಬಜೇಂತ್ರಿ, ರಾಘವೇಂದ್ರ ಆಚಾರ್, ಭೀಮರೆಡ್ಡಿ ಶ್ಯಾಡ್ಲಿಗೇರಿ, ರೈಮಾನ್ ಸಾಬ್ ಮಕ್ಕಪ್ಪನವರ್, ಇತರರು ಉಪಸ್ಥಿತರಿದ್ದರು.

# ಬಡ ಹೆಣ್ಣು ಮಗಳಿಗೆ ಕತ್ತನ್ನು ಕೊಯ್ದು

## ಬರ್ಬರವಾಗಿ ಕೊಲೆ : ಕಠಿಣ ಶಿಕ್ಷೆಗೆ ಎಸ್.ಐ.ಓ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು:ಫೆ.3:ತಾಲೂಕಿ ಗುರುವಾರದಂದು ಸಿಂಧನೂರಿನ ಗೌತಮ್ ಲೇಔಟ್‌ನಲ್ಲಿ ಸರಕಾರಿ ಪದವಿ ಮಹಾವಿದ್ಯಾಲಯ ಎಂ.ಎಸ್,ಸಿ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿನಿಯಾದ ಶಿಫಾ ತಂದೆ ಅಬ್ದುಲ್ ವಾಹಿದ್ ಎನ್ನುವ ಒಂದು ಅಮಾಯಕ ಬಡ ಹೆಣ್ಣು ಮಗಳಿಗೆ ಕತ್ತನ್ನು ಕೊಯ್ದು ಬರ್ಬರವಾಗಿ ಕೊಲೆ ಮಾಡಿರುವ ಶೇಖ ಮುಬೀನ್ ಇಡೀ ನಾಗರಿಕರ ಸಮಾಜ ತಲೆತಗ್ಗಿಸುವಂತಾಗಿದೆ. ಕೊಲೆಗೆ ಕಾರಣನಾದ ದುಷ್ಕರ್ಮಿಯು ಈಗಾಗಲೇ ಲಿಂಗಸೂಗೂರು ಪೋಲಿಸರಿಗೆ ಶರಣಾಗಿದ್ದು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಪೋಲಿಸ್ ಇಲಾಖೆಯು ನಿಷ್ಪಕ್ಷಪಾತವಾಗಿ ತನಿಖೆ ಪೂರ್ಣಗೊಳಿ ಆದಷ್ಟ ಬೇಗ ಫಾಸ್ಟ್ರ್ಯಾಕ್ ಕೋರ್ಟ್ ಮೂಲಕ ವಿಚಾರಣೆ ನಡೆಸಿ ಈತನಿಗೆ ಕಠಿಣತಿ ಕಠಿಣ ಶಿಕ್ಷಗೆ ಗುರಿಪಡಿಸಿಬೇಕು ಮತ್ತು ಇಂಥ ದುಷ್ಕೃತ್ಯಗಳು ಮರುಕಳಿಸಿದಂತೆ ಪೋಲಿಸ್ ಇಲಾಖೆ ಮತ್ತು ಸರ್ಕಾರ ಸೂಕ್ತ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕೆಂದು. ಸ್ಟೂಡೆಂಟ್ ಇಸ್ಲಾಮಿಕ ಅರ್ಗನೈಜೇಶನ್ ಆಫ್ ಇಂಡಿಯಾ ವತಿಯಿಂದ ಲಿಂಗಸೂಗೂರ ಸಹಾಯಕ ಆಯುಕ್ತರ ಮುಖಾಂತರ ಸಿಎಂ ಸಿದ್ದರಾಮಯ್ಯರವರಿಗೆ ಮನವಿ ಸಲ್ಲಿಸಿದರು.

ಈಸಂದರ್ಭದಲ್ಲಿ ಅಬ್ದುಲ್ ನಯೀಮ್ ,ಅಮ್ಮದ್ ಅಲಿ, ಜಹೀರುದ್ದೀನ್ ಗೌಸ್, ಇಮ್‌ತ್ತಿಯಾಜ್, ಸಮಾಜದ ಮುಖಂಡರು ಸೇರಿದಂತೆ ಉಪಸ್ಥಿತರಿದ್ದರು .

# ಸಿದ್ಧ ತೋಟೇಂದ್ರ ಶಿವಾಚಾರ್ಯರಿಂದ ವರದಿಗಾರ ವೀರೇಶ್ ಟಕ್ಕಳಕಿಗೆ ಆಶೀರ್ವಾದ

ಮಲ್ಲಮ್ಮ ನುಡಿ ವಾರ್ತೆ

ಚಿತ್ತಾಪುರ :ತಾಲೂಕಿನ ನಾಲವಾರ ದೇವಸ್ಥಾನ ಬಗ್ಗೆ ವಿಶೇಷವಾಗಿ

ಕರ್ನಾಟಕದಅದರಲ್ಲೂಕಲ್ಯಾಣ ಕರ್ನಾಟಕ ಭಾಗದ ಪ್ರತಿಷ್ಠಿತ ಮಠವಾಗಿರುವ,ಕಲಬುರಗಿ ಜಿಲ್ಲೆಯ ನಾಲವಾರದ ಸದ್ಗುರು ಶ್ರೀ ಕೋರಿಸಿದ್ಧೇಶ್ವರ ಮಹಾಸಂಸ್ಥಾನ ಮಠವು ಸುಮಾರು 300 ವರ್ಷಗಳ ಭವ್ಯ–ದಿವ್ಯ ಪರಂಪರೆಯನ್ನು ಹೊಂದಿರುವ ಧಾರ್ಮಿಕ ಜಾಗೃತ ತಾಣ. ನಂಬಿ ಬರುವ ಭಕ್ತರ ಕೋರಿಕೆಗಳನ್ನು ಈಡೇರಿಸುವ ಮಹಾಶಕ್ತಿಯಾಗಿ ಮಹಾಯೋಗಿ ಕೋರಿಸಿದ್ಧೇಶ್ವರರು ನಾಲವಾರ



ಶ್ರೀಕ್ಷೇತ್ರದಲ್ಲಿ ಜೀವಂತ ಸಮಾಧಿಸ್ಥರಾಗಿ,ಭಕ್ತರ ಬಾಳು ಬೆಳಗುತ್ತಿದ್ದಾರೆ.

ನಾಲವಾರ ಶ್ರೀಮಠ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಲವು ಪ್ರಥಮಗಳಿಗೆ ಕಾರಣವಾದ ವಿಶಿಷ್ಠನೆಲ. ಕಲ್ಯಾಣ ಕರ್ನಾಟಕ ಭಾಗದಲ್ಲಿಯೇ ಮೊದಲ ಬಾರಿಗೆ 1990 ರಲ್ಲಿಯೇ ನೂರಾರು ಉಚಿತ ಸಾಮೂಹಿಕ ವಿವಾಹಗಳನ್ನು ಹಮ್ಮಿಕೊಂಡು,ಮಠ ಸಮಾಜಮುಖಿಯಾಗಿಯೂ ಯೋಚಿಸಬಹುದು ಎಂಬುದನ್ನು ಸಾಬೀತುಪಡಿಸಿತು.. ಕೇವಲ ದಕ್ಷಿಣ ಕರ್ನಾಟಕದ ಹಾಗೂ ಉತ್ತರದ ಕೆಲವೇ ಶ್ರೀಮಂತ ಮಠಗಳಲ್ಲಿ ನಡೆಯುತ್ತಿದ್ದ ಶಿವಾನುಭವ ಕಾರ್ಯಕ್ರಮವನ್ನು 1984 ರಲ್ಲಿಯೇ ನಾಲವಾರ ಶ್ರೀಮಠದಲ್ಲಿ ಪ್ರಾರಂಭಿಸಿ ಇಂದಿನವರೆಗೂ ಅನೂಚಾನವಾಗಿ ನಡೆಸಿಕೊಂಡು ಬಂದ ಶ್ರೇಯಸ್ಸು ನಾಲವಾರ ಶ್ರೀಮಠದ್ದು. 90 ರ ದಶಕದಲ್ಲಿಯೇ ಬೃಹತ್ ಪ್ರಮಾಣದಲ್ಲಿ ಸರ್ವಧರ್ಮ ಸಮ್ಮೇಳನಗಳನ್ನು ನಾಲವಾರದ ನೆಲದಲ್ಲಿ ಆಯೋಜಿಸಿ,ಧಾರ್ಮಿಕ ಭಾವೈಕ್ಯತೆಗೆ ಶ್ರಮಿಸಿದ ಹಿರಿಮೆ ನಾಲವಾರ ಶ್ರೀಮಠದ್ದು.

ಮಠವೆಂದರೆ ಕೇವಲ ಧಾರ್ಮಿಕ ಚಟುವಟಿಕೆಗಳ, ದರ್ಶನ – ಆಶೀರ್ವಾದಗಳ ಕೇಂದ್ರಮಾತ್ರವಾಗದೇ ಅದೊಂದು ಸಾಮಾಜಿಕವಾಗಿ,ಮಾನಸಿಕವಾಗಿ ನೊಂದು ಬೆಂದವರ ಪಾಲಿಗೆ ನೆಮ್ಮದಿಯನ್ನು ಕರುಣಿಸುವ ಕಾರಣವಾಗಬೇಕೆಂಬ ಧ್ಯೇಯದೊಂದಿಗೂ ಮನುಕುಲದ ಒಳಿತಿಗಾಗಿ ಶ್ರಮಿಸುತ್ತಿದೆ.. ನಾಲವಾರದ ಮಠ.. ಶ್ರೀ ಮಠದ ಶ್ರೀ ಸಿದ್ಧ ತೆ–ೂಟೆಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದುಕೊಂಡು ಧನ್ಯರಾದ ಮಲ್ಲಮ್ಮ ನುಡಿ ಪತ್ರಿಕೆಯ ಸುರಪುರ ತಾಲೂಕಿನ ವರದಿಗಾರರು ವೀರೇಶ್ ಟಕ್ಕಳಕಿ ಕೆಂಭಾವಿ

# ಬಡತನ ನಿವಾರಣೆಗೆ ಶಿಕ್ಷಣವೇ ದಿವ್ಯ ಔಷಧಿ: ನಿರುಪಾದಿ ಖೈರವಾಡಗಿ




ಲಿಂಗಸೂಗೂರು, ಫೆ.3: ಶಿಕ್ಷಣದಿಂದ ಸಾಮಾಜಿಕ ಮನ್ನಣೆ, ಆರ್ಥಿಕ ಬಲ ಬರುತ್ತದೆ, ಬಡತನ ನಿವಾರಣೆಗೆ ಶಿಕ್ಷಣವೇ ದಿವ್ಯ ಔಷಧಿ ಆಗಿದ್ದರಿಂದ ಉತ್ತಮ ಶಿಕ್ಷಣ ಪಡೆದುಕೊಳ್ಳಬೇಕು ಎಂದು ಪ್ರಾಧ್ಯಾಪಕ ನಿರುಪಾದಿ ಖೈರವಾಡಗಿ ಹೇಳಿದರು.ಪಟ್ಟಣದ ಸಂಗಮೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಓಂ ಇಂಗ್ಲೀಷ್ ಅಕಾಡೆಮಿ ವತಿಯಿಂದ ಹಮ್ಮಿಕೊಂಡ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲರನ್ನು ಪ್ರೀತಿಸುವ, ಎಲ್ಲರನ್ನು ಗೌರವಿಸುವ, ನಿಸ್ವಾರ್ಥತೆಯಿಂದ ಬಾಳುವ ಆದರ್ಶ ಗುಣಗಳನ್ನು ರೂಢಿಸಿಕೊಳ್ಳಬೇಕು. ಸಮಯವ್ಯರ್ಥ ಮಾಡಿದರೆ ವಿದ್ಯಾರ್ಥಿ ಜೀವನ ಬಂಗಾರದ ಜೀವನ ಆಗಲ್ಲ, ವಿದ್ಯಾರ್ಥಿ ಜೀವನ ತುಂಬಾ ಕಠಿಣವಾದದ್ದು, ತಪಸ್ಸಿನ ರೀತಿಯಲ್ಲಿ ಓದಿ, ಕಲ್ಲು ಮುಳ್ಳಿನ ದುರ್ಗಮ ಹಾದಿ ದಾಟಿ ಬಂದು ಬಂಗಾರದ ಜೀವನ ರೂಪಿಸಿಕೊಳ್ಳಬೇಕು ಎಂದರು.ಉಪನ್ಯಾಸಕ ಶರಣಬಸವ ಯಾದವ್,ನಿರುಪಾದಿ ಬನ್ನಿಗೋಳ ಮಾತನಾಡಿದರು. ಸಾಹಿತಿ ದುರ್ಗಾ ಸಿಂಗ್ ಕಾರ್ಯಕ್ರಮ ಉದ್ಘಾಟಿಸಿದರು.ಓಂ ಇಂಗ್ಲೀಷ್ ಅಕಾಡೆಮಿಯಲ್ಲಿ ಕಲಿತು, ಕಳೆದ ಶೈಕ್ಷಣಿಕ ವರ್ಷದಲ್ಲಿ ಶೇ.98 ಅಂಕಗಳು ಪಡೆದು ಜಿಲ್ಲಾ ಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದ ಪ್ರತಿಭಾವಂತ ವಿದ್ಯಾರ್ಥಿ ನಿರುಪಾದಿ ಬನ್ನಿಗೋಳ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.ವಿದ್ಯಾರ್ಥಿಗಳಾದ ಅಕ್ಷತಾ ಪಾಟೀಲ, ವಿಜಯಲಕ್ಷ್ಮಿ, ನಿಂಗಮ್ಮ, ಅನಿತಾ, ಸುಮಯ್ಯ, ತುಳಜಾಬಾಯಿ,ಅಕ್ಕಮಹಾದೇವಿ, ಆಸ್ಮಾ, ಮಲ್ಲಪ್ಪ, ಪರಶುರಾಮ, ನಾಗರಾಜ್, ಆನಂದ, ಮಲ್ಲಿಕಾರ್ಜುನ, ಮಹೇಶ, ಮಲ್ಲಯ್ಯ, ಸುನೀಲ ಸೇರಿದಂತೆ ಹಲವರಿದ್ದರು.

# ಪ್ಲಾಸ್ಟಿಕ್ ಮತ್ತು ರಟ್ಟಿನ ಚಹಾ ಕಪ್ಪ ನಿಷೇಧಿಸಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.3: ನಗರ ಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅಕ್ಬರ್ ಪಾಶಾ ಪಲ್ಟನ್ ಅವರಿಗೆ ನಗರ ಸಭೆಯಲ್ಲಿ ನಡೆಯುವ ಎಲ್ಲಾ ಸಭೆಗಳಲ್ಲಿ ಬಳಕೆಯಲ್ಲಿರುವ ಪ್ಲಾಸ್ಟಿಕ್ ಹಾಗೂ ರಟ್ಟಿನ ಚಹಾ ಕಪ್ ಗಳನ್ನು ನಿಷೇಧಿಸುವಂತೆ ಸೋಮವಾರ ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್,ಎ,ಗಫಾರ್, ಯುವ ನಾಯಕ ಅಸಿಫ್ ಖಾನ್ ಹಣಗಿ ಹಾಗೂ ಇಮತ್ಯಾಝ್ ಎಮ್,ಪಲ್ಟನ್ ಮುಂತಾದವರು ಕೋರಿದರು.



ಕೊಪ್ಪಳ ನಗರ ಸಭೆಯಲ್ಲಿ ನಡೆಯುವ ತುರ್ತು ಸಭೆಗಳು, ಸಾಮಾನ್ಯ ಸಭೆಗಳು, ಅಧಿಕಾರಿಗಳ ಸಭೆಗಳು, ಶಾಸಕರ, ಸಚಿವರುಗಳ ಪರಿಶೀಲನಾ ಸಭೆಗಳಲ್ಲಿ ಬಳಸುತ್ತಾ ಬಂದಿರುವುದು ವಿಪರ್ಯಾಸ, ಇದರಿಂದ ಮಾನವನ ಆರೋಗ್ಯಕ್ಕೆ ಹಾನಿಕಾರಕವಾಗಿದೆ ಎಂದು ಪತ್ರಿಕೆಗಳಲ್ಲಿ ಬಂದಿದೆ, ಪ್ಲಾಸ್ಟಿಕ್ ಮತ್ತು ರಟ್ಟಿನ ಚಹಾ ಕಪ್ ಗಳಲ್ಲಿ ಚಹಾ ಸೇವಿಸುವುದರಿಂದ ಕ್ಯಾನ್ಸರ್ ನಂತಹ ಆರೋಗ್ಯಕ್ಕೆ ತುಂಬಾ ಹಾನಿ ಮಾಡುವ ಅಂಶಗಳಿವೆ ಎಂದು ಗಮನ ಸೆಳೆಯಲಾಯಿತು,

ಮಾನವನ ಆರೋಗ್ಯದ ದೃಷ್ಟಿಯಿಂದ ನಗರ ಸಭೆಯ ಸಭೆಗಳಲ್ಲಿ ಅಧ್ಯಕ್ಷರಿಗೆ, ಉಪಾಧ್ಯಕ್ಷರಿಗೆ, ಸ್ಥಾಯಿ ಸಮಿತಿ ಅಧ್ಯಕ್ಷರಿಗ ',ಸದಸ್ಯರಿಗೆ, ಅಧಿಕಾರಿಗಳಿಗೆ, ಸಿಬ್ಬಂದಿಗಳಿಗೆ, ಸಾರ್ವಜನಿಕರಿಗೆ ನೀಡುತ್ತಿರುವುದು ಮತ್ತು ನಗರದ ಬಹುತೇಕ ಹೋಟೆಲುಗಳಲ್ಲಿ ಬಳಕೆಯಲ್ಲಿರುವ ಪ್ಲಾಸ್ಟಿಕ್ ಹಾಗೂ ರಟ್ಟಿನ ಚಹಾ ಕಪ್ ಗಳನ್ನು ನಿಷೇಧಿಸುವ ಮೂಲಕ ಮಾದರಿ ನಗರ ಸಭೆ ಎಂಬ ಕೀರ್ತಿಗೆ ಪಾತ್ರರಾಗಲಿ ಎಂದು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್,ಎ,ಗಫಾರ್ ನಗರ ಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅಕ್ಬರ್ ಪಾಶಾ ಪಲ್ಟನ್ ಅವರಿಗೆ ಮನವರಿಕೆ ಮಾಡಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಅಕ್ಬರ್ ಪಾಶಾ ಪಲ್ಟನ್ ನಿಮ್ಮ ಮನವಿಯಂತೆ ಪ್ಲಾಸ್ಟಿಕ್ ಹಾಗೂ ರಟ್ಟಿನ ಚಹಾ ಕಪ್ ಗಳನ್ನು ನಗರ ಸಭೆಯ ಸಭೆಗಳಲ್ಲಿ ಮತ್ತು ನಗರದ ಹೋಟೆಲ್ ಗಳಲ್ಲಿ ನಿಷೇಧಿಸಲು ನಮ್ಮ ನಗರ ಸಭೆ ಅಧಿಕಾರಿಗಳ ಗಮನಕ್ಕೆ ತಂದು ಜಾರಿ ಮಾಡಿಸಲು ಪ್ರಯತ್ನಿಸುತ್ತೇನೆ ಎಂದು ಆಶ್ವಾಸನೆ ನೀಡಿದರು.

# ದಮ್ಮು ತಾಕತ್ತು ಇಲ್ಲದ ಬಜೆಟ್ : ರಾಜಕುಮಾರ ಹಲಬುರ್ಗೆ

ಮಲ್ಲಮ ನುಡಿ ವಾರ್ತೆ ಬೀದರ. ಫೆ. 03 : ಕೇಂದ್ರ ಸರ್ಕಾರ ಮಂಡಿಸಿದ ಬಜೆಟ್ ದಮ್ಮು ತಾಕತ್ತು, ಉಪ್ಪು ಹುಳಿ ಇಲ್ಲದ ಬಜೆಟ್ ಆಗಿದೆ ಎಂದು ಔರಾದ ನಗರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರಾಜಕುಮಾರ ಬಿ. ಹಲಬುರ್ಗೆ ಲೇವಡಿ ಮಾಡಿದ್ದಾರೆ.

ಅವರು ಪತ್ರಿಕಾ ಪ್ರಕಟಣೆ ಮೂಲಕ ಈ ಹೇಳಿಕೆ ನೀಡಿದ್ದು. ಇದು ರೈತರು, ಯುವಕರು ಹಾಗೂ ಮದ್ಯಮ ವರ್ಗದ ವಿರೋಧಿ ಬಜೆಟ್ ಆಗಿದ್ದು. ಕರ್ನಾಟಕಕ್ಕೆ ಮೋದಿ ಮೋಸ ಮಾಡಿದ್ದಾರೆ. ಮತ್ತೊಮ್ಮೆ ಕರ್ನಾಟಕಕ್ಕೆ ನಿರ್ಮಲಮ್ಮನ ಉಂಡೆನಾಮ ಹಾಕಿದ್ದಾರೆ.

ಕೇಂದ್ರದ ಬಜೆಟ್ ಗಾತ್ರ 50.65 ಲಕ್ಷ ಕೋಟಿ. ಸಾಲಮಾಡಿಯಾದ್ರು ತುಪ್ಪ ತಿನ್ನು ಎನ್ನುವ ಹಾಗೆ ಒಟ್ಟು ಬಜೆಟ್ ನಲ್ಲಿ 24% ರಷ್ಟು ಸಾಲ 15.68936 ಲಕ್ಷ ಕೋಟಿ ಸಾಲ ಮಾಡುತ್ತಿರುವ ಮೋದಿ-ನಿರ್ಮಲಾ ಸೀತಾರಾಮನ್



ಸಾಲದ ಸರ್ಕಾರವಾಗಿದೆ. ಕೇಂದ್ರ ಸರ್ಕಾರದ ಒಟ್ಟು ಸ್ವೀಕೃತಿ 31.47 ಲಕ್ಷ ಮತ್ತು ಒಟ್ಟು ತೆರಿಗೆ ಸ್ವೀಕೃತಿ 25.57 ಲಕ್ಷ ಕೋಟಿ ಸಾಲ ಮರುಪಾವತಿ 12.67 ಲಕ್ಷ ಕೋಟಿ ಅಂದರೆ ಬಜೆಟ್ ನ 20% ಸಾಲಕ್ಕೆ ಹೋಗುತ್ತದೆ.

ಕಳೆದ ವರ್ಷದ ಬಜೆಟ್‌ಗೆ ಹೋಲಿಕೆಮಾಡಿದರೆ ಕಾರ್ಪೊರೇಟ್ ತೆರಿಗೆ ಬಹುತೇಕ ಅಷ್ಟೇ ಇದೆ ಅಂದರೆ ಕಾರ್ಪೊರೇಟ್ ಕಂಪನಿಗಳ ಅಭಿವೃದ್ಧಿ ಆಗಿಲ್ಲ, ಇದು ಕೇಂದ್ರ ಸರ್ಕಾರದ ಸಾಧನೆ ಮೋದಿ ಸರ್ಕಾರದಲ್ಲಿ ಕಾರ್ಪೊರೇಟ್ ಕಂಪನಿಗಳು ಕಟ್ಟುವ ತೆರಿಗೆ ಕೇವಲ 10 ಲಕ್ಷ ಕೋಟಿ ಆದರೆ ಬಡವರ ಮತ್ತು ಮಧ್ಯಮ ವರ್ಗದ ಬೆವರಿನ ಹನಿಯಿಂದ ಕಟ್ಟುತ್ತಿರುವ ಆದಾಯ ತೆ-ರಿಗೆ 14.5 ಲಕ್ಷ ಕೋಟಿ. ಅಂದರೆ ಕಂಪೆನಿಗಳಿಗಿಂತ ಜನರೇ 5 ಲಕ್ಷ ಕೋಟಿ ತೆ-ರಿಗೆ ಹೆಚ್ಚು ಕಟ್ಟಿದ್ದಾರೆ. ಪ್ರತಿ ಬಜೆಟನಲ್ಲಿ ಕೇಂದ್ರ ಸರ್ಕಾರ ರಾಜ್ಯದ ಜೊತೆ ತಾರತಮ್ಯ ಮಾಡಿತ್ತಿದೆ. ಈಗ ಮಂಡಿಸಿದ ಕೇಂದ್ರ ಬಜೇಟ್ ಸಂಪೂರ್ಣ ನಿರಾಶಾದಾಯಕವಾಗಿದೆ ಎಂದು ಅವರು ಹೇಳಿದ್ದಾರೆ.

# ಸಮಾಜದ ಸಂಘಟಿತ ಹೋರಾಟ ಮತ್ತು ಐಕ್ಯತೆಗಾಗಿ ಸಮಾವೇಶ: ರಾಮಕೃಷ್ಣನ್ ಸಾಳೆ



ಮಲ್ಲಮ ನುಡಿ ವಾರ್ತೆ ಬೀದರ.ಫೆ. 03 : ಪದ್ಮಶಾಲಿ ಸಮಾಜ ಅತ್ಯಂತ ಹಿಂದುಳಿದ ಸಮಾಜವಾಗಿದೆ. ಹೀಗಾಗಿ ರಾಜ್ಯ ಮತ್ತು ರಾಷ್ಟ್ರದಾದ್ಯಂತ ಸಂಘಟಿತ ಹೋರಾಟ ಮತ್ತು ಐಕ್ಯತೆಗಾಗಿ ಸಮಾವೇಶದ ಮೂಲಕ ಪ್ರತಿಯೊಬ್ಬರೂ ಶ್ರಮಿಸಬೇಕೆಂದು ಪದ್ಮಶಾಲಿ ಸಮಾಜ ಸಮಿತಿಯ ಗೌರವಾಧ್ಯಕ್ಷರಾದ ರಾಮಕೃಷ್ಣನ್ ಸಾಳೆ ತಿಳಿಸಿದರು.

ನಗರದ ರಾಂಪೂರೆ ಕಾಲೋನಿಯಲ್ಲಿರುವ ಶ್ರೀ ಗುರುದತ್ತ ಧ್ಯಾನ ಮಂದಿರ ಸಭಾಂಗಣದಲ್ಲಿ ಪದ್ಮಶಾಲಿ ಸಮಾಜ ಸಮಿತಿ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ರವಿವಾರ ಆಯೋಜಿಸಿದ 'ಪದ್ಮಶಾಲಿ ಸಮಾಜ ಬೃಹತ್ ಸಮಾವೇಶ'ವನ್ನು ಉದ್ಘಾಟಿಸಿ ಮಾತನಾಡಿದರು.

ಪದ್ಮಶಾಲಿ ಸಮಾಜ ಪರಿಶ್ರಮದಿಂದ ದುಡಿಯುವ ಸಮಾಜವಾಗಿದೆ. ಆದರೆ ಶೈಕ್ಷಣಿಕವಾಗಿ, ರಾಜಕೀಯವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿದೆ. ಸಮಾಜದ ಬಂಧುಗಳು ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಬೇಕು. ಒಗ್ಗಟ್ಟಿನಿಂದ ಬದುಕಬೇಕು. ಮಾರ್ಕಂಡೇಯ ಜಯಂತಿ ತಪ್ಪದೇ ಆಚರಣೆ ಮಾಡಿ ಭಕ್ತಿ ಶ್ರದ್ಧೆ ಮತ್ತು ನಿಷ್ಠೆ ಹಾಗೂ ಪ್ರಾಮಾಣಿಕತೆಯೇ ತಮ್ಮ ಉಸಿರಾಗಿಸಿಕೊಳ್ಳಬೇಕು. ಮಹಿಳೆಯರು ಕೂಡಾ ಎಲ್ಲಾ ರಂಗಗಳಲ್ಲಿ ಸಾಧನೆ ಮಾಡಲು ಮುಂದೆ ಬರಬೇಕೆಂದು ಸಾಳೆ ಕರೆ ನೀಡಿದರು.

ಸಮಾವೇಶದಲ್ಲಿ ಕೈಗೊಂಡ ಆರು ನಿರ್ಣಯಗಳು: ಪದ್ಮಶಾಲಿ ಅಭಿವೃದ್ಧಿ ನಿಗಮ ಸ್ಥಾಪಿಸುವಂತೆ ಸರ್ಕಾರಕ್ಕೆ ಒತ್ತಾಯಿಸುವುದು.

ಪದ್ಮಶಾಲಿ ಸಮುದಾಯ ನಿರ್ಮಾಣಕ್ಕಾಗಿ ಒಂದು ಸಿಎ ನಿವೇಶನ ನೀಡಬೇಕೆಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸುವುದು. ಸ್ಕಿಲ್ ಡೆವೆಲಪ್‌ಮೆಂಟ್ ಗಳಂತಹ ಕೆಲಸಗಳನ್ನು ಸಮಾಜದ ಮಹಿಳೆಯರಿಗೆ ನೀಡಿ ಸರ್ಕಾರ ಆರ್ಥಿಕವಾಗಿ ಸಬಲೀಕರಣಗೊಳಿಸಬೇಕು .ಶೈಕ್ಷಣಿಕವಾಗಿ ಸಮಾಜದ ಮಕ್ಕಳಿಗೆ ವಿದ್ಯಾರ್ಥಿವೇತನ ನೀಡಬೇಕು ಮತ್ತು ಸರ್ಕಾರಿ ನೌಕರಿಗಳಲ್ಲಿ ಸಡಿಲ ನೀತಿ ಅಳವಡಿಸಬೇಕು. ಕೈಗಾರಿಕೆಯಲ್ಲಿ ಹೆಚ್ಚಿನ ಆದ್ಯತೆ ನೀಡಿ ಪರವಾನಗಿ ಮತ್ತು ಧನಸಹಾಯ ಸರ್ಕಾರ ನೀಡಬೇಕು. ಸಮಾಜದ ಸಂಘಟನೆಗಾಗಿ ರಾಷ್ಟ್ರದಾದ್ಯಂತ ಸಮಾವೇಶ ಆಯೋಜಿಸುವುದು.

ಈ ಆರು ಪ್ರಮುಖ ನಿರ್ಣಯಗಳನ್ನು ಸಮಾವೇಶದಲ್ಲಿ ಕೈಗೊಳ್ಳಲಾಯಿತು. ಪದ್ಮಶಾಲಿ ಸಮಾಜದ ಬೀದರ ಜಿಲ್ಲಾಧ್ಯಕ್ಷ ಮೋಹನ ಬಾಚಾ ನಿರ್ಣಯಗಳನ್ನು ಮಂಡಿಸಿದರು. ಪದ್ಮಶಾಲಿ ಸಮಾಜ ಸಮಿತಿ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ರಾಜಕುಮಾರ ಬಿಜ್ಜಾ ಅನುಮೋದಿಸಿದರು. ಸಮಾವೇಶದಲ್ಲಿ ನೆರೆದ ಎಲ್ಲಾ ಸಮಾಜ ಬಾಂಧವರು ಕರತಾಡನ ಮೂಲಕ ಒಪ್ಪಿಗೆ ಸೂಚಿಸಿದರು.

ವೇದಿಕೆ ಮೇಲೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಹೈದರಾಬಾದನ ಅಖಿಲ ಭಾರತ ಪದ್ಮಶಾಲಿ ಸಂಘದ ಅಧ್ಯಕ್ಷ ಕಂದಗಟ್ಲ ಸ್ವಾಮಿ, ಪದ್ಮಶಾಲಿ ಉತ್ತರ ಕರ್ನಾಟಕ ಪ್ರಾಂತ ಸಂಘದ ಅಧ್ಯಕ್ಷ ಕಾಳಪ್ಪ ಕೊಂಗತಿ, ಸಂಘದ ಹೈದರಾಬಾದನ ಪ್ರಧಾನ ಕಾರ್ಯದರ್ಶಿ ಗಡ್ಡಂ ಜಗನ್ನಾಥ, ಸಂಘದ ಹುಬ್ಬಳ್ಳಿ ಕಾರ್ಯದರ್ಶಿ ರವೀಂದ್ರ ಸಗ್ಗಂ, ಸಂಘದ ಹೈದರಾಬಾದನ ಕಾರ್ಯಕಾರಿಣಿ ಸದಸ್ಯೆ ರುಕ್ಮಿಣಿ ಗಣೇಶ ಸಂಗಾ, ನೇಕಾರರ ಸಮುದಾಯಗಳ ಒಕ್ಕೂಟದ ಕಲಬುರಗಿ ಅಧ್ಯಕ್ಷ ಪ್ರದೀಪ್ ಸಂಗಾ, ಚಿಟಗುಪ್ಪಾ ಅಧ್ಯಕ್ಷ ವೀರಪ್ಪ ಜಟಲಾ, ಜಹಿರಾಬಾದ ಅಧ್ಯಕ್ಷ ಗಡ್ಡಮ್ ಜನಾರ್ಧನ್, ಸದಾಶಿವಪೇಟ್ ಅಧ್ಯಕ್ಷ ಮ್ಯಾಕಲ್ ಜನಾರ್ಧನ್, ಸಂಗಾರೆಡ್ಡಿ ಅಧ್ಯಕ್ಷ ಕೊಪ್ಪೇರಿ ವೆಂಕಟ್ ಹರಿಹರ ಕಿಶನ್, ಬೀದರ ನಿರ್ದೇಶಕ ಪುನೀತ್ ಸಾಳೆ ಸೇರಿದಂತೆ ವಿವಿಧ ರಾಜ್ಯಗಳಿಂದ ಆಗಮಿಸಿದ ಸಮಾಜದ ಪ್ರಮುಖರು, ಬಾಂಧವರು ಉಪಸ್ಥಿತರಿದ್ದರು. ಇದೇ ವೇಳೆ ಸಮಾಜಕ್ಕಾಗಿ ಹಲವಾರು ವರ್ಷಗಳಿಂದ ದುಡಿದ ರಾಮಕೃಷ್ಣನ್ ಸಾಳೆಯವರಿಗೆ ಪದ್ಮಶಾಲಿ ಸಮಾಜದ ವತಿಯಿಂದ "ಸಮಾಜ ಶಿಲ್ಪಿ" ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಮಾಜದ ಕುಲಬಾಂಧವರಿಗೆ ಸನ್ಮಾನಿಸಲಾಯಿತು.

ಪದ್ಮಶಾಲಿ ಸಮಿತಿ ನಿರ್ದೇಶಕ ಸೂರ್ಯಕಾಂತ ಕುಚನ್ ನಿರೂಪಿಸಿದರು. ಮುರಳಿಧರ ಸಾಮಲ್ ಸ್ವಾಗತ ಗೀತೆ ಹಾಡಿದರು. ಪ್ರಾಸ್ತಾವಿಕವಾಗಿ ಟ್ರಸ್ಟ್ ಕಾರ್ಯದರ್ಶಿ ಕಿರಣಕುಮಾರ ಬಿ.ದೋಮಲ್ ಮಾತನಾಡಿದರು. ಸಮಿತಿ ನಿರ್ದೇಶಕ ದಿಡ್ಡಿ ಚಂದ್ರಕಾಂತ ವಂದಿಸಿದರು.

# ಮಾರ್ಚನಲ್ಲಿ ಬೊಮ್ಮಗೊಂಡೇಶ್ವರ ಉತ್ಸವ



ಮಲ್ಲಮ ನುಡಿ ವಾರ್ತೆ ಬೀದರ. ಫೆ. 03 :ನಗರದಲ್ಲಿ ಬರುವ ಮಾರ್ಚನಲ್ಲಿ ಅರ್ಥಪೂರ್ಣ ಬೊಮ್ಮಗೊಂಡೇಶ್ವರ ಉತ್ಸವ ಆಯೋಜನೆಗೆ ನಿರ್ಧರಿಸಲಾಗಿದೆ ಎಂದು ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಅಧ್ಯಕ್ಷ ಸಂತೋಷಕುಮಾರ ಜೋಳದಾಪಕೆ ಹೇಳಿದರು.

ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ವತಿಯಿಂದ ನಗರದ ಗಾಂಧಿಗಂಜನ ಕನಕ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಬೊಮ್ಮಗೊಂಡೇಶ್ವರ ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉತ್ಸವದ ಅಂಗವಾಗಿ ಬೊಮ್ಮಗೊಂಡೇಶ್ವರ ಕುರಿತ ವಿಶೇಷ ಉಪನ್ಯಾಸ, ಚಿತ್ರಕಲಾ ಪ್ರದರ್ಶನ, ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಭಾಷಣ, ನಿಬಂಧ, ರಂಗೋಲಿ ಸ್ಪರ್ಧೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಉತ್ಸವದ ದಿನ ನಗರದಲ್ಲಿ ಅಲಂಕೃತ ವಾಹನದಲ್ಲಿ ಬೊಮ್ಮಗೊಂಡೇಶ್ವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಲಾಗುವುದು. ಡೊಳ್ಳು ಕುಣಿತ ಸೇರಿದಂತೆ ಪ್ರಮುಖ ಕಲಾ ತಂಡಗಳು ಮೆರವಣಿಗೆಯ ಸಂಭ್ರಮವನ್ನು ಇಮ್ಮಡಿಗೊಳಿಸಲಿವೆ ಎಂದು ಹೇಳಿದರು. ಬೊಮ್ಮಗೊಂಡೇಶ್ವರರ ಜೀವನ ಹಾಗೂ ಸಾಧನೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವುದು ಉತ್ಸವ ಸಂಘಟನೆಯ ಉದ್ದೇಶವಾಗಿದೆ. ಉತ್ಸವದ ಯಶಸ್ವಿಗೆ ಸಮಾಜದ ಮುಖಂಡರು, ಸಂಘ ಸಂಸ್ಥೆಗಳು ಸಹಕರಿಸಬೇಕು ಎಂದು ಮನವಿ ಮಾಡಿದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಖಜಾಂಚಿಯಾಗಿ ಆಯ್ಕೆಯಾದ ದೇವಪ್ಪ ಎಂ. ಚಾಂಬೋಳೆ ಅವರನ್ನು ಪೇಟ ತೊಡಿಸಿ, ಕಂಬಳಿ ಹೊದಿಸಿ, ಬೊಮ್ಮಗೊಂಡೇಶ್ವರ ಭಾವಚಿತ್ರ ಕೊಟ್ಟು ಅಭಿನಂದಿಸಲಾಯಿತು.

ಮುಖಂಡರಾದ ಭೀಮಸಿಂಗ್ ಮಲ್ಕಾಪುರ, ಮಲ್ಲಿಕಾರ್ಜುನ ಬಿರಾದಾರ(ಪರಿಹಾರ), ಎಂ.ಎಸ್. ಕಟಗಿ, ಮಾಳಪ್ಪ ಅಡಸಾರೆ, ಡಾ. ಸಂಜೀವಕುಮಾರ ಅತಿವಾಳೆ, ಸುಭಾಷ್ ನಾಗೂರೆ, ಭೀಮಶಾ ಬಸಲಾಪುರ, ಬಕ್ಕಪ್ಪ ನಾಗೂರೆ, ಸಂಜೀವಕುಮಾರ ತಳಘಟ, ಸಂಜೀವಕುಮಾರ ಚಿಮಕೋಡ್, ಬಾಬುರಾವ್ ಶೇಳಕೆ, ಲೋಕೇಶ್ ಮರ್ಜಾಪುರ, ದೀಪಕ್ ಚಿದ್ರಿ, ಪ್ರಲ್ಹಾದ್ ಚಿಟ್ಟಾವಾಡಿ, ಕಲ್ಲಪ್ಪ ರಾಯಗೊಂಡ, ಜಾಲೇಂದ್ರ ಮಾಳೆಗಾಂವ್, ವಿಜಯಕುಮಾರ ಬ್ಯಾಲಹಳ್ಳಿ, ಮಲ್ಲಿಕಾರ್ಜುನ ಮುರ್ಕಿ, ಬಸವರಾಜ ಬಾವಗೆ, ಎಂ.ಪಿ. ವೈಜಿನಾಥ, ಲಕ್ಷ್ಮಣ ಮೇತ್ರೆ, ವಿಠ್ಠಲರಾವ್ ಭಂಗೂರೆ, ಮಲ್ಲಿಕಾರ್ಜುನ ಸಾತೋಳೆ, ನರಸಪ್ಪ ಜಾನಕನೋರ, ರಮೇಶ ಮರ್ಜಾಪುರ, ಸುನೀಲ್ ಚಿಲ್ಲರ್ಗಿ, ಪ್ರಜ್ವಲ್ ಮೇತ್ರೆ, ವಿಜಯಕುಮಾರ ತೋರಣೆ, ಶ್ರೀಕಾಂತ ಗೋರನಳ್ಳಿ, ಸತೀಶ್ ಕಾಡವಾದ್, ಗಣಪತಿ ಕಮತಾಣ, ಅನಿಲ್ ಚಿಟ್ಟಾ, ಸಂತೋಷ್ ಶೇಕಾಪುರ, ತುಕ್ಕಪ್ಪ ಸಾತೋಳಿ, ಭದ್ರೇಶ ಕೊಳಾರ, ಆನಂದ ಸೋಲಪುರ, ಆನಂದ ಚಿಟ್ಟಾವಾಡಿ ಮತ್ತಿತರರು ಇದ್ದರು.

# ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಅವರ ಜಯಂತಿಯ ಸರ್ಕಾರ ವತಿಯಿಂದ ಆಚರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :- ಫೇ 3 ಭಾರತ ದೇಶಕ್ಕೆ ಇಡೀ ವಿಶ್ವದಲ್ಲೇ ಅತ್ಯಂತ ಶ್ರೇಷ್ಠ ಅದ್ಭುತವಾದ ಸಂವಿಧಾನವನ್ನು ನೀಡಿರುವ ಮಹಾನ್ ಮಾನವತಾವಾದಿ ಭಾರತರತ್ನ ಡಾ.ಬಾಬಾಸಾಹೇಬ್ ಅಂಬೇಡ್ಕರ್ ರವರ ಧರ್ಮಪತ್ನಿ, ತ್ಯಾಗ-ಸ್ಪೂರ್ತಿಯ ಸಂಕೇತ ಮಾತೆ ರಮಾಬಾಯಿ ಅಂಬೇಡ್ಕರ್ ರವರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ರಾಜ್ಯ



ಸರ್ಕಾರದ ಮೇಲೆ ಒತ್ತಡ ಹೇರುವಂತೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಶರಣು ಸಲಗರ್ ರವರಿಗೆ ಮಾನವ ಬಂಧುತ್ವ ವೇದಿಕೆ ಘಟಕದ ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾನವ ಬಂಧುತ್ವವೇದಿಕೆ ತಾಲೂಕಾ ಸಂಚಾಲಕ ಪಿಂಟು ಕಾಂಬಳೆ, ದಲಿತ ಹಿರಿಯ ಮುಖಂಡರಾದ ದೀಪಕ ಗಾಯಕವಾಡ, ಸಮತಾ ಸೈನಿಕ ದಳದ ರಾಜ್ಯ ಸಮಿತಿ ಸದಸ್ಯ ದತ್ತಾತ್ರೇಯ ಸೂರ್ಯವಂಶಿ, ಮಾನವ ಬಂಧುತ್ವವೇದಿಕೆ ತಾಲೂಕಾ ಉಪಾಧ್ಯಕ್ಷ ಗೌತಮ ಖರ್ಗೆ ಉಪಸ್ಥಿತರಿದ್ದರು. ಈ ಮನವಿ ಪತ್ರವನ್ನು ಸ್ವೀಕರಿಸಿ ಮಾತನಾಡಿದ ಶಾಸಕರು ನಾನು ಆದಷ್ಟು ಬೇಗ ಮುಖ್ಯಮಂತ್ರಿಗಳಿಗೆ ಭೇಟಿ ಮಾಡಿ ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ರವರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ರಾಜ್ಯ ಸರ್ಕಾರದ ಮೇಲೆ ಒತ್ತಡ ಹಾಕುತ್ತೇನೆ ಎಂದು ಹೇಳಿ ಮನವಿಗೆ ಸ್ಪಂದಿಸಿದರು.

# ಕೇಕ್ ಕತ್ತರಿಸಿ ನರೇಗಾ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಬೀದರ.ಫೆ.03: ತಾಲ್ಲೂಕಿನ ನಾಗೋರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಘೋಡಂಪಳ್ಳಿ ಗ್ರಾಮದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿ ಸ್ಥಳದಲ್ಲಿ ಭಾನುವಾರ ಕೇಕ್ ಕತ್ತರಿಸಿ ನರೇಗಾ ಜಾರಿಗೆ ಬಂದ ದಿನ ಆಚರಿಸಲಾಯಿತು.

ಕೇಕ್ ಕತ್ತರಿಸಿದ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಪ್ಪ ಯಾಕತಪುರ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆ ಗ್ರಾಮೀಣ ಜನರಿಗೆ ವರದಾನವಾಗಿದೆ. ಕಾರ್ಮಿಕರ ಗುಳೆ ತಪ್ಪಿಸಲು ಸಹಕಾರಿಯಾಗಿದೆ ಎಂದು ಹೇಳಿದರು.

ಕಾರ್ಮಿಕರನ್ನು ಸನ್ಮಾನಿಸಲಾಯಿತು. ಗ್ರಾಮ ಪಂಚಾಯಿತಿ ಸದಸ್ಯರಾದ ಆದಿತ್ಯರೆಡ್ಡಿ, ವಿಜಯಕುಮಾರ, ತುಕಾರಾಮ, ಪ್ರಮುಖರಾದ ಹರಿಓಂ ಮತ್ತಿತರರು ಇದ್ದರು.

# ತಾಲ್ಲೂಕು ಮಟ್ಟದ ಕ್ರೀಡಾಕೂಟ ಫೆ. 5 ರಿಂದ

ಮಲ್ಲಮ್ಮ ನುಡಿ ವಾರ್ತೆ ಬೀದರ ಫೆ. 03 : ನೆಹರೂ ಯುವ ಕೇಂದ್ರ ಹಾಗೂ ಬೀದರ್ ಮೈನಾರಿಟಿ ಸ್ಪೋರ್ಟ್ಸ್ ಅಸೋಸಿಯೇಷನ್ ವತಿಯಿಂದ ಬೀದರ್ ತಾಲ್ಲೂಕಿನ ಮಂದಕನಳ್ಳಿ ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಫೆ. 5 ಮತ್ತು 6 ರಂದು ತಾಲ್ಲೂಕು ಮಟ್ಟದ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ.

ಯುವಕರ ವಿಭಾಗದಲ್ಲಿ ವಾಲಿಬಾಲ್, ಶಟಲ್ ಬ್ಯಾಡ್ಮಿಂಟನ್, ವೇಟ್ ಲಿಫ್ಟಿಂಗ್, ಯುವತಿಯರ ವಿಭಾಗದಲ್ಲಿ 100 ಮೀ. ಓಟ, ಸ್ಲೋ ಸೈಕ್ಲಿಂಗ್, ಕೊಕ್ಕೋ ಸ್ಪರ್ಧೆಗಳು ನಡೆಯಲಿವೆ.

ಆಸಕ್ತ ಕ್ರೀಡಾಪಟುಗಳು ಕ್ರೀಡಾಕೂಟದ ಮಾಹಿತಿ ಹಾಗೂ ಹೆಸರು ನೋಂದಣಿಗೆ ಮೊಬೈಲ್ ಸಂಖ್ಯೆ 8217014315 ಅಥವಾ 8861420116 ಗೆ ಸಂಪರ್ಕಿಸಬಹುದು ಎಂದು ಬೀದರ್ ಮೈನಾರಿಟಿ ಸ್ಪೋರ್ಟ್ಸ್ ಅಸೋಸಿಯೇಷನ್ ಅಧ್ಯಕ್ಷ ಮುಬಾರಕ್ ಮಂದಕನಳ್ಳಿ ತಿಳಿಸಿದ್ದಾರೆ.

# ಸೈಯದ್ ಮನ್ಸೂರ್ ಖಾದ್ರಿಗೆ ಹಜ್ ಸಮಿತಿ ಅಧ್ಯಕ್ಷರನ್ನಾಗಿ ಮಾಡಿ: ಶ್ರೀಕಾಂತ ಸ್ವಾಮಿ



ಬೀದರ. ಫೆ. 03: ಅಂಜುಮನ್ ಖಾದಿಮ್ ಉಲ್ ಹುಜ್ಜಾಜ್ ಸಂಘಟನೆ ಮೂಲಕ ನಿರಂತರವಾಗಿ 26 ವರ್ಷಗಳಿಂದ ಸಮಾಜ ಸೇವೆ ಮಾಡಿಕೊಂಡು ಬರುತ್ತಿರುವ ಸೈಯದ್ ಮನ್ಸೂರ್ ಖಾದ್ರಿ ಅವರಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರ ನೇಮಕ ಮಾಡಬೇಕೆಂದು ಜಾತ್ಯಾತೀತ ನಾಗರಿಕ ಒಕ್ಕೂಟದ ಅಧ್ಯಕ್ಷ ಶ್ರೀಕಾಂತ ಸ್ವಾಮಿ ಒತ್ತಾಯಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಭಾನುವಾರ ಜಾತ್ಯಾತೀತ ನಾಗರಿಕ ಒಕ್ಕೂಟದ ವತಿಯಿಂದ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು 1999ರಲ್ಲಿ ಎನ್‌ಜಿಓ ಆರಂಭ ಮಾಡಿದ ಮನ್ಸೂರ್ ಖಾದ್ರಿಯವರು ನಿರಂತರವಾಗಿ 26 ವರ್ಷಗಳಿಂದ ಹಜ್ ಯಾತ್ರಿಗಳಿಗೆ ಮಾರ್ಗದರ್ಶನ, ದಾಖಲಾತಿಗಳನ್ನು ತುಂಬುವುದು, ಅರ್ಜಿ ಸಲ್ಲಿಸುವ ಕುರಿತು ವಿವಿಧ ಜಿಲ್ಲೆಗಳಿಗೆ ಹೋಗಿ ತರಬೇತಿ ನೀಡುತ್ತಾ ಬರುತ್ತಿದ್ದಾರೆ. ಸ್ವತಃ ಇಂಜಿನಿಯರ್ ಆದ ಅವರು ಎರಡು ಬಾರಿ ನಗರಸಭೆ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಸಮಾಜದಲ್ಲಿ ಶಾಂತಿ ಸ್ಥಾಪನೆಗಾಗಿ ಶ್ರಮಿಸಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ, ಹಜ್ ಸಚಿವ ರಹಿಂಖಾನ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಈ ಬಾರಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಈ ಅವಕಾಶ ನೀಡಿ ಖಾದ್ರಿಯವರಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿ ಅಧ್ಯಕ್ಷರನ್ನಾಗಿ ಮಾಡಬೇಕೆಂದು ಒಕ್ಕೂಟ-ದ ವತಿಯಿಂದ ಸರ್ಕಾರಕ್ಕೆ ಒತ್ತಾಯಿಸಿದರು. ಫೆ. 5ರಂದು ಬೆಂಗಳೂರಿನಲ್ಲಿ ಹಜ್ ಸಮಿತಿ ಅಧ್ಯಕ್ಷರ ಆಯ್ಕೆಗಾಗಿ ಸಭೆ ನಡೆಯುತ್ತಿದೆ. ಈ ಸಭೆಯಲ್ಲಿ ಹಜ್ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಸಿಎಂ ಹಾಗೂ ಡಿಸಿಎಂ ಅವರ ಮೇಲೆ ಒತ್ತಡ ಹೇರಬೇಕೆಂದು ಪ್ರತಿಪಾದಿಸಿದರು. ಅಲ್ಲದೇ ಫೆ. 3ರಂದು ಬೀದರನಿಂದ ಬೆಂಗಳೂರಿಗೆ ನಿಯೋಗ ಕೂಡ ಕೊಂಡೊಯ್ಯಲಾಗುತ್ತಿದೆ ಎಂದು ಶ್ರೀಕಾಂತ ಸ್ವಾಮಿ ತಿಳಿಸಿದರು.

ಜಾತ್ಯಾತೀತ ನಾಗರಿಕರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಅಸಾದೋದ್ದಿನ್ ಅವರು ಮಾತನಾಡಿ ಸೈಯದ್ ಮನ್ಸೂರ್ ಖಾದ್ರಿ ಸಮಾಜ ಸೇವೆಗಾಗಿಯೇ ತಮ್ಮ ಜೀವನ ಮುಡುಪಾಗಿಟ್ಟಿದ್ದಾರೆ. ಹಜ್ ಸಮಿತಿಯಲ್ಲಿ ಅನುದಾನ ಇಲ್ಲದಿದ್ದರೂ ಹಜ್ ಯಾತ್ರಿಕರಿಗಾಗಿ ತನ್ನ ಸಮಯ ಮೀಸಲಿಟ್ಟು ಯಾವುದೇ ಫಲಾಪೇಕ್ಷೆಯಿಲ್ಲದೆ ದೇವರ ಸೇವೆಯಲ್ಲಿ ನಿರತರಾಗಿದ್ದಾರೆ. ಈ ಹಿಂದೆಯೂ ಸಮಾಜದ ಬಡವರಿಗಾಗಿ ಹಲವು ವಾಹನಗಳನ್ನು, ಬಂಡಿಗಳನ್ನು ವಿತರಿಸಿ ಮಾನವೀಯತೆ ಮೆರೆದಿದ್ದಾರೆ. ಆದ್ದರಿಂದ ಖಾದ್ರಿ ಅವರ ಸೇವೆ ಹಾಗೂ ಅನುಭವ ಗುರುತಿಸಿ ಹಜ್ ಸಮಿತಿ ಅಧ್ಯಕ್ಷರನ್ನಾಗಿ ನೇಮಿಸಬೇಕೆಂದು ತಿಳಿಸಿದರು.

ಒಕ್ಕೂಟದ ಉಪಾಧ್ಯಕ್ಷ ಮುಫ್ತಿ ಅಬ್ದುಲ್ ಗಫಾರ್ ಮಾತನಾಡಿ ಹಜ್ ಸಚಿವ ರಹಿಂಖಾನ್ ಅವರು ಜಿಲ್ಲೆಯವರೇ ಇರುವ ಕಾರಣ ತಮ್ಮ ಸ್ವಕ್ಷೇತ್ರದ ಒಬ್ಬ ಸಮಾಜ ಸೇವಕ ಸೈಯದ್ ಮನ್ಸೂರ್ ಖಾದ್ರಿಯವರಿಗೆ ಹಜ್ ಸಮಿತಿ ಅಧ್ಯಕ್ಷರಾಗಿ ಆಯ್ಕೆ ಮಾಡಿದರೆ ಹಿಂದುಳಿದ ಕ.ಕಲ್ಯಾಣ ಕರ್ನಾಟಕ ಭಾಗದ ಒಬ್ಬ ಸೇವಕನನ್ನು ಗುರುತಿಸಿದಂತಾಗುತ್ತದೆ ಎಂದರು.

ಒಕ್ಕೂಟದ ಕಾರ್ಯದರ್ಶಿ ಸೈಯದ್ ಸರಫರಾಜ್ ಹಾಸ್ಮಿ, ಮೌಲಾನಾ ಅತೀಕ್ ರೆಹೆಮಾನ್, ಮೌಲಾನಾ ಮುನೀಜ್ ಕೀರ್ಮಾನಿ ಸೇರಿದಂತೆ ಇನ್ನಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಮಹಾ ಕುಂಭ ಮೇಳಕ್ಕೆ ವಿಶೇಷ ರೈಲು: ಸಂತಸ

ಮಲ್ಲಮ್ಮ ನುಡಿ ವಾರ್ತೆ ಬೀದರ. ಫೆ. 03 : ಸಂಸದ ಸಾಗರ್ ಖಂಡ್ರೆ ಅವರು ಮಹಾ ಕುಂಭ ಮೇಳಕ್ಕೆ ಬೀದರನಿಂದ ವಿಶೇಷ ರೈಲುಗಳ ವ್ಯವಸ್ಥೆ ಮಾಡಿಸಿದ್ದಕ್ಕೆ ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಹಾಗೂ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ ಸಂತಸ ವ್ಯಕ್ತಪಡಿಸಿದ್ದಾರೆ. ವಿಶೇಷ ರೈಲುಗಳಿಂದ ಉತ್ತರಪ್ರದೇಶದ ಪ್ರಯಾಗರಾಜನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳಕ್ಕೆ ತೆರಳುವ ಬೀದರ್ ಲೋಕಸಭಾ ಕ್ಷೇತ್ರದ ಭಕ್ತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ. ರೈಲ್ವೆ ಇಲಾಖೆಯಿಂದ ವಿಶೇಷ ರೈಲುಗಳ ವ್ಯವಸ್ಥೆ ಮಾಡಿಸಿದ್ದಕ್ಕೆ ಸಂಸದರಿಗೆ ಧನ್ಯವಾದ ಅರ್ಪಿಸಿರುವ ಅವರು, ವಿಶೇಷ ರೈಲು ಸದುಪಯೋಗಪಡೆಯುವಂತೆ ಕ್ಷೇತ್ರದ ಜನರಲ್ಲಿ ಮನವಿ ಮಾಡಿದ್ದಾರೆ.

# ಶರಣ ಮಡಿವಾಳ ಮಾಚಿದೇವರ ಜಯಂತಿ ಆಚರಣೆ



ಮಲ್ಲಮ ನುಡಿ ವಾರ್ತೆ ತಾಳಿಕೋಟೆ:ಫೆ.3: ಪಟ್ಟಣದ ಪ್ರತಿಷ್ಠಿತ ಸರ್ವಜ್ಞವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶರಣ ಶ್ರೀ ಮಡಿವಾಳ ಮಾಚಿದೇವರ ಜಯಂತಿಯನ್ನು ಶನಿವಾರ ಆಚರಿಸಲಾಯಿತು.ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರ ಅವರು ಮಡಿವಾಳ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಮಾತನಾಡಿದ ಅವರು ಶರಣ ಶ್ರೀ ಮಡಿವಾಳ ಮಾಚಿದೇವರು 12ನೇ ಶತಮಾನದಲ್ಲಿ ಸಮಾಜದಲ್ಲಿದ್ದ ಅಸಮಾನತೆ,ಅಸ್ಪೃಶ್ಯತೆ ಹಾಗೂ ದುರ್ಬಲರ ಶೋಷಣೆ ವಿರುದ್ಧ ಬಸವಣ್ಣನವರು ಆರಂಭಿಸಿದ ಆಂದೋಲನದಲ್ಲಿ ಮುಂಚೂಣಿಯಲ್ಲಿ ನಿಂತು ಹೋರಾಡಿದರು. ಇವರು ಬಸವಣ್ಣನವರು ಕಟ್ಟಿದ ಶರಣರ ಅಗ್ರಗಣ್ಯ ಬಳಗದಲ್ಲಿ ಗುರುತಿಸಿಕೊಳ್ಳುತ್ತಾರೆ. ಇವರ ಆದರ್ಶ ಜೀವನ ನಮಗೆ ಮಾದರಿಯಾಗಬೇಕಾಗಿದೆ ಎಂದರು. ಇದೇ ಸಂದರ್ಭದಲ್ಲಿ ಸಮಸ್ತಗುರುಬಳಗದವರು ಮತ್ತು ವಿದ್ಯಾರ್ಥಿಗಳು ಸಾಮೂಹಿಕವಾಗಿ ಸೇರಿಕೊಂಡು ಪೂಜೆಯನ್ನು ಸಲ್ಲಿಸಿದರು.ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯ ಸಂತೋಷ ಪವಾರ,ಶಿಕ್ಷಕರಾದ ರಾಜು ಜವಳಗೇರಿ,ದೈಹಿಕ ಶಿಕ್ಷಕ ಬಸವರಾಜ ಚಳ್ಳಗಿ,ಶಾಂತಗೌಡ ಬಿರಾದಾರ,ಭೀಮನಗೌಡ ಸಾಸನೂರ,ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ,ಬಸವರಾಜ ಸವದತ್ತಿ ,ಮೌಲಾಲಿವಾಲಿಕಾರ,ಸಿದ್ದನಗೌಡ ಮೂದನೂರು, ಶರಣಗೌಡ ಕಾಚಾಪುರ. ಸಿದ್ದನಗೌಡ ಚೌದರಿ, ಸಂಜುಕುಮಾರ ಭಜಂತ್ರಿ,ರಮೇಶ ಪಾಸೋಡಿ, ರೂಪಾ ಪಾಟೀಲ,ಶಿವಲೀಲಾ ಚುಂಚನೂರ,ದೇವಿಂದ್ರ ಗುಳೆದ,ಅನಿತಾ ಚೌದ್ರಿ,ಅಂಬುಜಾ ಹಜೇರಿ,ರಾಜಬಿ ಬಿದರಿ,ಕಲ್ಪನಾ ಹಜೇರಿ,ನಾಗರತ್ನ ಮೈಲೇಶ್ವರ, ಹೇಮಾ ಕೊಡೆಕಲ್, ನಾಗಶ್ರೀ ನಾಯಕ, ಮೇಘಾ ಪಾಟೀಲ, ಮುಬಿನ ಮುರಾಳ, ತನುಶ್ರೀ ಮಹೇಂದ್ರಕರ, ಶಂಕ್ರಮ್ಮ, ಮುಬಾರಕ ಬನಹಟ್ಟಿ ಹಾಗೂ ಸರ್ವ ಗುರು ಬಳಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಉತ್ತಮ ಗುಣಮಟ್ಟದ ಔಷಧಿ ವಿತರಿಸಿ: ಡಾ. ಗೋಪಾಲ ದಾಬಡೆ



ಮಲ್ಲಮ ನುಡಿ ವಾರ್ತೆ ಬೀದರ. ಫೆ.03 : ರಾಜ್ಯದಲ್ಲಿ ಇತ್ತಿಚಿಗೆ ನಡೆಯುತ್ತಿರುವ ಬಾಣಂತಿಯರ ಸಾವಿಗೆ ಸರ್ಕಾರದ ನಿರ್ಲಕ್ಷಿತನ ಮತ್ತು ಕಳಪೆ ಔಷಧಿ ವಿತರಣೆಯೇ ಮೂಲ ಕಾರಣವಾಗಿದೆ. ಈ ವಿಷಯ ತನಿಖೆಯಲ್ಲಿ ಸಾಬೀತಾಗಿದೆ ಎಂದು ಡ್ರಗ್ ಆಕ್ಷನ್ ಫೋರಂ ಕರ್ನಾಟಕ ಹಾಗೂ ಸಾರ್ವತ್ರಿಕ ಆರೋಗ್ಯ ಆಂದೋಲನದ ಪ್ರಮುಖರಾದ ಡಾ. ಗೋಪಾಲ ದಾಬಡೆ ನಗರದ ಪತ್ರಿಕಾಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಈ ಕುರಿತು ಮಾತನಾಡಿದ ಅವರು ಫೆ. 3 ರಿಂದ 14ರ ವರೆಗೆ ಬೀದರನಿಂದ ಬೆಂಗಳೂರವರೆಗೆ ಆರೋಗ್ಯಹಕ್ಕಿನ ಜಾಥಾ ಹಾಗೂ ಜನಜಾಗೃತಿ ಮಾಡಲಾಗುತ್ತಿದೆ ಎಂದು ಪ್ರತಿಪಾದಿಸಿದರು. ಇಡೀ ರಾಜ್ಯಕ್ಕೆ ಔಷಧ ಒದಗಿಸುವ ಕರ್ನಾಟಕ ರಾಜ್ಯ ವೈದ್ಯಕೀಯ ಸೇವಾ ನಿಗಮ ನಿಯಮಿತ ಸಂಸ್ಥೆಯು ಪರೀಕ್ಷೆ ಮಾಡದೆ, ಔಷಧಗಳನ್ನು ನೇರವಾಗಿ ಸರಬರಾಜು ಮಾಡಿದ್ದಕ್ಕೆ ಬಾಣಂತಿಯರ ಸಾವು ಸಂಭವಿಸುತ್ತಿವೆ. ರಕ್ತನಾಳದೊಳಕ್ಕೆ ಕೊಡುವ ಔಷಧವನ್ನು ಪಶ್ಚಿಮ ಬಂಗಾಳದ ಫಾರ್ಮಾಸ್ಯೂಟಿಕಲ್ ಲಿಮಿಟೆಡ್ ಕಂಪನಿಯು ಬಳ್ಳಾರಿ ಜಿಲ್ಲಾಸ್ಪತ್ರೆಗೆ ಸರಬರಾಜು ಮಾಡಿದೆ. ಈ ಔಷಧವು ಗುಣಮಟ್ಟದಿಂದ ಕೂಡಿರಲಿಲ್ಲವೆಂಬ ಕಾರಣ ಗೊತ್ತಿದ್ದರೂ ಸರ್ಕಾರ ಎಚ್ಚೆತ್ತುಕೊಳ್ಳಲಿಲ್ಲ ಎಂದು ಆರೋಪಿಸಿದರು.

ಬಳ್ಳಾರಿ ಹಾಗೂ ಕರ್ನಾಟಕದ ಹಲವಾರು ಜಿಲ್ಲಾ ಆಸ್ಪತ್ರೆಗಳಲ್ಲಿ ಗುಣಮಟ್ಟವಿಲ್ಲದ ಸಲೈನ್‌ಗಳನ್ನು ನೀಡಿದ್ದರಿಂದ ತಾಯಂದಿರು ಸಾವನ್ನಪ್ಪಿದ ಬಗ್ಗೆ ಅಭಿಪ್ರಾಯ ಕ್ರೋಢಿಕರಿಸಲು ಈ ಜಾಥಾ ನಡೆಯುತ್ತಿದೆ. ಆದ್ದರಿಂದ ಪಶ್ಚಿಮ ಬಂಗಾಳದ ಕೆ.ಎಸ್.ಎಂ.ಎಸ್.ಸಿ.ಎಲ್. ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸಿ ಅದನ್ನು ವೆಬ್‌ಸೈಟ್‌ನಲ್ಲಿ ಹಾಕಬೇಕು. ರಾಜ್ಯದ ಸಿಎಂ ಹಾಗೂ ಆರೋಗ್ಯ ಸಚಿವರು ಇದನ್ನು ಸರಿಪಡಿಸುವ ಕ್ರಮ ಕೈಗೊಳ್ಳಬೇಕೆಂದು ದಾಬಡೆ ತಿಳಿಸಿದರು.

ತಮಿಳುನಾಡಿನ ವೈದ್ಯಕೀಯ ಸೇವಾ ನಿಗಮದ ಮಾದರಿಯಲ್ಲಿ ರಾಜಕೀಯ ಹಸ್ತಕ್ಷೇಪವಿಲ್ಲದಂತೆ, ಅಧಿಕಾರಿಗಳು ತಲೆ ಹಾಕದಂತೆ, ಕೆ.ಎಸ್.ಎಂ.ಎಸ್.ಸಿ.ಎಲ್. ಕಂಪನಿಯನ್ನು ರಾಜ್ಯದಲ್ಲಿಯೂ ಸ್ವತಂತ್ರ ಸಂಸ್ಥೆಯಾಗಿ ಮಾಡಬೇಕಾಗಿದೆ. ರಾಜಸ್ಥಾನದ ಆರೋಗ್ಯ ಹಕ್ಕು ಕಾಯ್ದೆ ರಾಜ್ಯದ ಜನರಿಗೆ ನ್ಯಾಯ ಒದಗಿಸುತ್ತದೆ. ನಮ್ಮ ರಾಜ್ಯಕ್ಕೂ ಈ ರೀತಿಯ ಕಾಯ್ದೆ ಜಾರಿ ಮಾಡಬೇಕಾಗಿದೆ. ಸರ್ಕಾರಿ ಜಿಲ್ಲಾಸ್ಪತ್ರೆಗಳಲ್ಲಿ ಔಷಧಗಳನ್ನು ಹೊರಗೆ ಬರೆದು ಕೊಡಬಾರದು. ಆಸ್ಪತ್ರೆಗಳ ಸುತ್ತಮುತ್ತ ಖಾಸಗಿ ಮೆಡಿಕಲ್ ಇರದಂತೆ ನೋಡಿಕೊಳ್ಳಬೇಕೆಂದು ಆಗ್ರಹಿಸಿದರು. ನಮ್ಮ ಕರ್ನಾಟಕ ಸಾರ್ವತ್ರಿಕ ಆರೋಗ್ಯ ಆಂದೋಲನ ಈ ನಿಟ್ಟಿನಲ್ಲಿ ಜಾಗೃತಿ ಮಾಡುತ್ತಿದೆ. ಆದ್ದರಿಂದ ಮುಖ್ಯಮಂತ್ರಿಗಳು ಈ ಕುರಿತು ಜಾಗೃತರಾಗಿ ಬಾಣಂತಿಯರ ಸಾವಿಗೆ ಪಶ್ಚಿಮ ಬಂಗಾಳದ ಕೆ.ಎಸ್. ಎಂ.ಎಸ್.ಸಿ.ಎಲ್.ಕಂಪನಿಯನ್ನು ಹೊಣೆ ಮಾಡಿ ತಕ್ಕ ಶಿಕ್ಷೆ ವಿಧಿಸಿ ತಾಯಂದಿರ ಸಾವುಗಳನ್ನು ತಡೆಯಬೇಕೆಂದು ದಾಬಡೆ ತಿಳಿಸಿದರು.

ಇದೇ ವೇಳೆ ಸುದ್ದಿಗೋಷ್ಠಿಯಲ್ಲಿ ಪ್ರಮುಖರಾದ ಮಹೇಶ ಪಾಟೀಲ, ಸ್ವಪ್ನದೀಪಾ, ಶಕುಂತಲಾ,ಭೀಮ್ ಮಸೂಟಿ, ರೇಷ್ಮಾ,ರಾಜಕುಮಾರ ಮತ್ತು ರೋಶನಿ ಉಪಸ್ಥಿತರಿದ್ದರು.

# ನಿವೃತ್ತ ಯೋಧನಿಗೆ ಅದ್ದೂರಿ ಸ್ವಾಗತ



ದೇಶದ ದೆಹಲಿ, ಜಮ್ಮು–ಕಾಶ್ಮೀರ್, ಬಿಹಾರ, ಹೈದ್ರಾಬಾದ್, ಬಾನಾಘಾಟ, ಛತ್ತಿಸಘಡ್, ಜಾರ್ಖಂಡ್‌ನಲ್ಲಿ ಕಾನಸ್ಟೇಬಲ್, ಹವಾಲ್ದಾರ್ ಆಗಿ ಕೆಲಸ ಮಾಡಿದ್ದು, ಕೊನೆಗೆ ಕ್ಲಿಷ್ಟ ಸೇವೆಯಾಗಿರುವ ಜಂಗಲ್ ಕೋಬ್ರಾ ಕಮಾಂಡೋ ಆಗಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಪಡೆದಿದ್ದೇನೆ. ಬಂಧು– ಬಳಗವನ್ನು ಬಿಟ್ಟು ಎರಡು ದಶಕಗಳ ಕಾಲ ದೇಶದ ಸೇವೆ ಮಾಡಿದ್ದಕ್ಕೆ ಈ ದಿನ ತಾವು ನೀಡಿದ ಗೌರವಕ್ಕೆ ಚಿರ ಋಣಿಯಾಗಿದ್ದೇನೆ. ನಾನೀಗ ಸ್ವಯಂ ನಿವೃತ್ತಿ ಪಡೆದಿದ್ದರೂ ದೇಶಕ್ಕಾಗಿ ಅಗತ್ಯ ಎನಿಸಿದರೆ ಯಾವುದೇ ಕ್ಷಣದಲ್ಲೂ ದುಡಿಯಲು ಸಿದ್ಧನಿದ್ದೇನೆ. ಈ ರೀತಿ ಭವ್ಯ ಸ್ವಾಗತ ನೀಡಿರುವುದು ಸಂತೋಷ ತಂದಿದೆ.

ಮಲ್ಲಮನುಡಿವಾರ್ತೆ ಬೀದರ, ಫೆ.03 : ಭಾರತ ದೇಶದ ವಿವಿಧೆಡೆ 21 ವರ್ಷಗಳ ಕಾಲ ಸಿಆರ್‌ಪಿಎಫ್ ಯೋಧನಾಗಿ ಸೇವೆ ಸಲ್ಲಿಸಿ ನಿವೃತ್ತಿ ಬಳಿಕ ಹುಟ್ಟೂರಿಗೆ ಮರಳಿದ ಔರಾದ ತಾಲೂಕಿನ ಜೀರ್ಗಾ(ಬಿ) ಗ್ರಾಮದ ಯೋಧ ರವೀಂದ್ರ ಕೊಡುಗೆ ಅವರನ್ನು ಗ್ರಾಮಸ್ಥರು ರವಿವಾರ ಅದ್ದೂರಿಯಾಗಿ ಸ್ವಾಗತಿಸಿದರು.

ಧರಿ ಹನುಮಾನ ಕ್ಷೇತ್ರದಿಂದ ತೆರೆದ ವಾಹನದಲ್ಲಿ ಯೋಧ ರವೀಂದ್ರ ಅವರನ್ನು ಪತ್ನಿ ಅಶ್ವಿನಿ ಜತೆ ಸಂತಪೂರ ಮಾರ್ಗವಾಗಿ ಜೀರ್ಗಾ(ಬಿ) ಗ್ರಾಮದವರೆಗೆ ಮೆರವಣಿಗೆ ಮಾಡಿಬರಮಾಡಿಕೊಳ್ಳಲಾಯಿತು. ಗ್ರಾಮದ ಯುವಕರು ಕೈಯಲ್ಲಿ ರಾಷ್ಟ್ರ ಧ್ವಜವನ್ನು ಹಿಡಿದು, ಜಯಘೋಷಗಳ ಮೂಲಕ ಬೈಕ್ ರ್‍ಯಾಲಿ ನಡೆಸಿದರು. ಬಳಿಕ ನಿವೃತ್ತ ಯೋಧ ಹುಟ್ಟುರೊಳಗೆ ಕಾಲಿಡುತ್ತಿದ್ದಂತೆ ಮಹಿಳೆಯರು ಆರತಿ ಬೆಳಗಿ, ಪುಷ್ಪಗಳನ್ನು ಚೆಲ್ಲಿ ವೇದಿಕೆ ಕರೆತಂದರು. ಈ ವೇಳೆ ಯೋಧ ತನ್ನ ಹೆತ್ತವರಿಗೆ ಸೆಲ್ಯೂಟ್ ಹೊಡೆದು, ತಲೆ ಮೇಲಿನ ಕ್ಯಾಪ್‌ನ್ನು ತೊಡಿಸಿ ಗೌರವ ಸಲ್ಲಿಸಿರುವುದು ನೆರೆದವರನ್ನು ಭಾವುಕರನ್ನಾಗಿಸಿತು.

ಯೋಧನ ಆಗಮವನ್ನು ಇಡೀ ಸಂಭ್ರಮವೇ ಸಂಭ್ರಮಿಸಿತು, ಹಬ್ಬದ ವಾತಾವರಣದಂತೆ ಕಳೆಗಟ್ಟಿತ್ತು. ಗ್ರಾಮದ ಪರವಾಗಿ ರವೀಂದ್ರ ಜತೆಗೆ ಇತ್ತಿಗೆ ಭಾರತೀಯ ಸೇನೆಯಿಂದ ನಿವೃತ್ತಿಯಾದ ಮಹಾದೇವ ಕೋಟೆ ಅವರನ್ನು ಸಹ ಸನ್ಮಾನಿಸಲಾಯಿತು. ಇದೇ ವೇಳೆ ಜಿಲ್ಲೆಯ ನಿವೃತ್ತ ಯೋಧರು ಮತ್ತು ಕರ್ತವ್ಯ ನಿರತ ಸೈನಿಕರು, ಜತೆಗೆ ಸರ್ಕಾರಿ ಹುದ್ದೆಯಿಂದ ನಿವೃತ್ತರಾದ ಗ್ರಾಮದ ಹಿರಿಯ ಜೀವಿಗಳನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ತಾ.ಪಂ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಮನೆ, ಬಂಧು ಬಳಗ ಮತ್ತು ಸಂತೋಷಗಳನ್ನು ತ್ಯಾಗ ಮಾಡಿ ಗಡಿಯಲ್ಲಿ ದೇಶ ಕಾಯುವ ಯೋಧರ ತ್ಯಾಗ, ದೇಶಪ್ರೇಮ ಸದಾ ಸ್ಮರಣೀಯ. ಯೋಧರು ನಮಗಾಗಿ ಬಾಹ್ಯ ದುಷ್ಟಶಕ್ತಿಗಳಿಂದ ರಾಷ್ಟ್ರವನ್ನು ರಕ್ಷಿಸುತ್ತಾರೆ. ಸೇವೆಯಿಂದ ನಿವೃತ್ತರಾಗಿ ತಾಯ್ನಾಡಿಗೆ ಆಗಮಿಸಿದ ರವೀಂದ್ರ ಅವರನ್ನು ಹೃದಯಸ್ಪರ್ಷಿಯಾಗಿ ಬರಮಾಡಿಕೊಂಡು ಗೌರವಿಸಿರುವುದು ಹೆಮ್ಮೆಯ ವಿಷಯ ಎಂದರು.

ಭಾಲ್ಕಿ ಹಿರೇಮಠದ ಶ್ರೀ ಗುರುಬಸವ ಪಟ್ಟದ್ದೇವರು ಸಾನಿಧ್ಯ ವಹಿಸಿ ಮಾತನಾಡಿ, ಭಾರತವು ಜಗತ್ತಿನ ಬಲಿಷ್ಠ ರಾಷ್ಟ್ರವಾಗಿ ರೂಪಗೊಳ್ಳುವಲ್ಲಿ ಯೋಧರ ಪರಿಶ್ರಮವಿದೆ. ಯುವ ಜನರು ದುಶ್ಚಟಗಳ ದಾಸರಾಗದೆ ದೇಶ, ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ಇಂತಹ ಯೋಧರು ಯುವ ಪೀಳಿಗೆಗೆ ಸ್ಫೂರ್ತಿಯಾಗಬೇಕು. ಈ ಗ್ರಾಮದಂತೆ ಎಲ್ಲರಲ್ಲಿ ಸಾಮರಸ್ಯ ಮೂಡಿದಾಗಲೇ ಭಾರತಕ್ಕೆ ನಿಜವಾದ ಸ್ವಾತಂತ್ರ ?? ಸಿಕ್ಕಂತೆ ಎಂದು ಹೇಳಿದರು.

ಹೆಡಗಾಪುರದ ಶ್ರೀ ಕೇದಾರನಾಥ ಶಿವಾಚಾರ್ಯರು ಮಾತನಾಡಿ, ದೇಶದ ರಕ್ಷಣೆಗಾಗಿ ತನ್ನ ಕುಡಿಯನ್ನು ಕೊಟ್ಟ ಯೋಧನ ಹೆತ್ತವರು ಮತ್ತು ಮಡದಿಯ ತ್ಯಾಗ ದೊಡ್ಡದು. ನಮ್ಮ ನೆಮ್ಮದಿಯ ಬದುಕಿಗಾಗಿ ಯೋಧರು ಗಡಿಯಲ್ಲಿ ಹೋರಾಡುತ್ತಾರೆ ಎಂದು ಬಣ್ಣಿಸಿದರು. ಸಿಪಿಐ ರಘವೀರಸಿಂಗ್ ಠಾಕೂರ್ ಕಾರ್ಯಕ್ರಮ ಉದ್ಘಾಟಿಸಿದರು. ಹಿರಿಯ ಸಂಗಪ್ಪ ದೇಗಲ್ವಾಡೆ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಯೋಧರ ಸಂಘದ ಜಿಲ್ಲಾಧ್ಯಕ್ಷ ರಾಜಕುಮಾರ ಲದ್ದಿ, ಪಿಕೆಪಿಎಸ್ ಅಧ್ಯಕ್ಷ ಬಸಯ್ಯ ಸ್ವಾಮಿ, ಬಸವ ಬಳಗದ ಜಿಲ್ಲಾಧ್ಯಕ್ಷ ಸಂಜುಕುಮಾರ ಜುಮ್ಮಾ, ಶಿವಾನಂದ ಶಿವು ಮುಕ್ತೇದಾರ್, ವೀರನಾರಿ ಸುಮನ್ ಜಾಧವ್ ಮತ್ತಿತರರಿದ್ದರು.

# ಸಂಘದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ: ಅಧ್ಯಕ್ಷ ಮುತ್ತುರಾಜ್



ಮಲ್ಲಮ ನುಡಿ ವಾರ್ತೆ ತಾಳಿಕೋಟಿ:ಫೆ.3: ಸಂಘದ ಎಲ್ಲಾ ಸದಸ್ಯರು ನಮ್ಮ ಮೇಲೆ ವಿಶ್ವಾಸವಿಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ, ಅವರೆಲ್ಲರ ಸಹಕಾರ ಹಾಗೂ ಸಮಾಜದ ಹಿರಿಯರ ಮಾರ್ಗದರ್ಶನದಲ್ಲಿ ಸಂಘದ ಇನ್ನಷ್ಟು ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ ಎಂದು ಶ್ರೀ ಪಂಚಾಚಾರ್ಯ ಸಹಕಾರಿ ಪತ್ತಿನ ಸಂಘದ ನೂತನ ಅಧ್ಯಕ್ಷ ಮುತ್ತುರಾಜ ಜಹಾಗೀರದಾರ ಹೇಳಿದರು. ಶನಿವಾರ ಸಂಘದ ಸಭಾಂಗಣದಲ್ಲಿ ನಡೆದ ಸಂಘದ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದ ನಂತರ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಸಮಾಜದ ಗಣ್ಯರು ಹಾಗೂ ವಿ.ವಿ. ಸಂಘದ ಅಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಅವರು ಮಾತನಾಡಿ ಸಮಾಜದ ಹಿರಿಯರ ಮಾತಿಗೆ ಗೌರವ ಕೊಟ್ಟು ಅವಿರೋಧ ಆಯ್ಕೆಗೆ ತಾವೆಲ್ಲರೂ ಸಹಕರಿಸಿದ್ದೀರಿ ಇದೇ ರೀತಿ ಸಂಘದ ಅಭಿವೃದ್ಧಿಗಾಗಿಯೂ ಒಗ್ಗಟ್ಟಿನಿಂದ ಕೆಲಸ ಮಾಡಿ ಎಂದರು. ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಜ್ಯೋತಿಷ್ಯ ರತ್ನ ರಾಮಲಿಂಗಯ್ಯ ಶ್ರೀಗಳು ಸಮಾಜದ ಈ ಸಂಘಕ್ಕೆ ಇಲ್ಲಿಯವರೆಗೆ ಚುನಾವಣೆ ನಡೆದಿಲ್ಲ,ಈ ಬಾರಿಯೂ ತಾವೆಲ್ಲರೂ ಅವಿರೋಧ ಆಯ್ಕೆಗೆ ಸಹಕರಿಸಿದ್ದೀರಿ ನಿಮಗೆ ಅಭಿನಂದಿಸುತ್ತೇನೆ, ಸಂಘದ ಏಳಿಗೆ ನಿಮ್ಮೆಲ್ಲರ ಉದ್ದೇಶವಾಗಿರಲಿ ಜಗದ್ಗುರು ಶ್ರೀ ಪಂಚಾಚಾರ್ಯರ ಆಶೀರ್ವಾದ ನಿಮ್ಮೊಂದಿಗೆ ಇರುತ್ತದೆ ಎಂದರು. ಈ ಸಮಯದಲ್ಲಿ ಬೇಡ ಜಂಗಮ ಸಮಾಜದ ತಾಲೂಕ ಅಧ್ಯಕ್ಷ ಶರಣಯ್ಯ ಹಿರೇಮಠ, ಶಿವಶಂಕರಯ್ಯ ಹಿರೇಮಠ,ಗುರಯ್ಯ ಹಿರೇಮಠ,ಕಾಶಿನಾಥ ಹಿರೇಮಠ, ಗಜದಂಡಯ್ಯ ಹಿರೇಮಠ, ಶಂಕ್ರಯ್ಯ ಬ್ಯಾಲ್ಯಾಳ ನೂತನ ಉಪಾಧ್ಯಕ್ಷ ನಾಗಲಿಂಗಯ್ಯ ಡೋಣೂರ ಮಠ, ಸಂಗಯ್ಯ ಕೊಡಗಾನೂರ, ಬಸಯ್ಯ ಹಿರೇಮಠ,ಚೆನ್ನಯ್ಯ ಹಿರೇಮಠ, ಈರಯ್ಯ ಹಿರೇಮಠ,ಪಂಚಾಕ್ಷರಿ ಹಿರೇಮಠ,ಮಲ್ಲಯ್ಯ ಸಾಲಿಮಠ, ವಿದ್ಯಾ ಮಹಾಂತೇಶ ಮಠ ಹಾಗೂ ರಾಜೇಶ್ವರಿ ಮಲ್ಲಯ್ಯ ವಿಭೂತಿಮಠ ಇದ್ದರು.

# ಎಲ್ಲರ ಸಹಕಾರದೊಂದಿಗೆ ಸಂಘದ ಅಭಿವೃದ್ಧಿ




ಮಲ್ಲಮ ನುಡಿ ವಾರ್ತೆ ತಾಳಿಕೋಟಿ:ಫೆ.3:ತಾಲೂಕಿನ ಗುಂಡಕನಾಳ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ.ಇದರ ಆಡಳಿತ ಮಂಡಳಿಗೆ ಅಧ್ಯಕ್ಷ ಉಪಾಧ್ಯಕ್ಷರ ಅವಿರೋಧ ಆಯ್ಕೆ ರವಿವಾರ ನಡೆಯಿತು. ಚುನಾವಣಾಧಿಕಾರಿ ಬಿ.ಎಸ್. ಕೊಂಡಗೂಳಿ ಅವರು ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷ ಮಲ್ಲನಗೌಡ ನಿಂ.ಬಿರಾದಾರ ಹಾಗೂ ಉಪಾಧ್ಯಕ್ಷ ಗುರಣಗೌಡ ಸಾ. ಬಿರಾದಾರ ಅವರ ಹೆಸರುಗಳನ್ನು ಘೋಷಣೆ ಮಾಡಿದರು. ಎರಡು ಸ್ಥಾನಕ್ಕೆ ಯಾವುದೇ ಪ್ರತಿಸ್ಪರ್ಧಿ ನಾಮಪತ್ರ ಸಲ್ಲಿಸದೇ ಇರುವ ಕಾರಣ ಎರಡೂ ಸ್ಥಾನ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಚುನಾವಣಾ ಪ್ರಕ್ರಿಯೆಯಲ್ಲಿ 12 ಜನ ನಿರ್ದೇಶಕರ ಪೈಕಿ 11 ನಿರ್ದೇಶಕರು ಭಾಗವಹಿಸಿ ಒಬ್ಬ ನಿರ್ದೇಶಕ ಗೈರು ಹಾಜರಾಗಿದ್ದರು ಇವರೆಲ್ಲರಿಗೂ ಸದಸ್ಯತ್ವದ ಪ್ರಮಾಣ ಪತ್ರ ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ನೂತನ ಅಧ್ಯಕ್ಷ ಮಲ್ಲನಗೌಡ ಬಿರಾದಾರ ಮಾತನಾಡಿ ಎಲ್ಲರ ನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಅವರ ಸಹಕಾರದೊಂದಿಗೆ ಸಂಘದ ಅಭಿವೃದ್ಧಿಗೆ ಶಕ್ತಿ ಮೀರಿ ಪ್ರಯತ್ನಿಸುತ್ತೇವೆ ಎಂದರು. ಸಂಘದ ಉಪಾಧ್ಯಕ್ಷರಾಗಿ ಆಯ್ಕೆಯಾದ ಗುಂಡಕನಾಳ ಗ್ರಾಮದ ಗುರಣಗೌಡ ಬಿರಾದಾರ ಅವರು ಕೃತಜ್ಞತೆ ಸಲ್ಲಿಸಿದರು. ನೂತನ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ನಿರ್ದೇಶಕರಾದ ಬಸವರಾಜ ಬಿರಾದಾರ, ಪ್ರಭುಗೌಡ ಪಾಟೀಲ,ಅಲ್ಲಿಸಾ ಪಿಂಜಾರ, ಉಸ್ಮಾನಸಾಬ ಮುಲ್ಲಾ, ಹಣಮಂತ ಕೊಡಗಾನೂರ, ಮಲ್ಲಣ್ಣ ಅಸ್ಕಿ, ನಿರ್ಮಲಾ ಪಾಟೀಲ, ಕಸ್ತೂರಿಬಾ ಪಾಟೀಲ,ಶಾಂತಮ್ಮ ಗಬಸಾವಳಗಿ ಇವರಿಗೆ ಸಂಘದ ಕಾರ್ಯನಿರ್ವಹಣಾಧಿಕಾರಿ ರಾಮಗಿರಿಮಠ ಹಾಗೂ ಸಿಬ್ಬಂದಿಗಳು ಸನ್ಮಾನಿಸಿ ಗೌರವಿಸಿದರು. ವಿಜಯೋತ್ಸವ: ನೂತನ ಅಧ್ಯಕ್ಷ ಉಪಾಧ್ಯಕ್ಷರ ಫಲಿತಾಂಶ ಹೊರ ಬೀಳುತ್ತಿದ್ದಂತೆಯೇ ಅವರ ಅಪಾರ ಬೆಂಬಲಿಗರು ಸೇರಿ ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು. ಈ ವೇಳೆ ಮುಖಂಡರಾದ ಅಯ್ಯನಗೌಡ ಬಿರಾದಾರ, ಶರಣಗೌಡ ಬಿರಾದಾರ, ಕುಮಾರಗೌಡ ಬಿರಾದಾರ, ಬಸನಗೌಡ ಪಾಟೀಲ,ಆನಂದಬಾಬು ಪಾಟೀಲ, ಭೀಮನಗೌಡ ವಣಿಕ್ಯಾಳ, ರಾಜುಗೌಡ ಬಿರಾದಾರ, ವೀರೇಶಗೌಡ ಪಾಟೀಲ,ಮುತ್ತುಗೌಡ ಮಾಳಿ, ಮಲ್ಲನಗೌಡ ಲಕ್ಕುಂಡಿ, ಸಿದ್ದನಗೌಡ ಬಿರಾದರ,ಮಧು ವಂದಗನೂರ,ನಾನಾಗೌಡ ಮೇಟಿ, ವಿಜಯಕುಮಾರ ಗಬಸಾವಳಗಿ, ಶಾಂತಗೌಡ ಪಾಟೀಲ, ರಾಜುಗೌಡ ಇಬ್ರಾಹಿಂಪೂರ ಮುತ್ತು ನೀರಲಗಿ ಇದ್ದರು.

# ನೂತನ ಅಧ್ಯಕ್ಷ- ಉಪಾಧ್ಯಕ್ಷರಿಗೆ ಗ್ರಾಮಸ್ಥರಿಂದ ಸನ್ಮಾನ



ಮಲ್ಲಮ ನುಡಿ ವಾರ್ತೆ ತಾಳಿಕೋಟಿ:ಫೆ.3: ಪಟ್ಟಣದ ಶ್ರೀ ಪಂಚಾಚಾರ್ಯ ಸಹಕಾರ ಪತ್ತಿನ ಸಂಘ ನಿಯಮಿತ, ಇದರ ಆಡಳಿತ ಮಂಡಳಿಗೆ ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷ ಮುತ್ತುರಾಜ್ ಜಹಾಗೀರದಾರ ಹಾಗೂ ಉಪಾಧ್ಯಕ್ಷ ನಾಗಲಿಂಗಯ್ಯ ಡೋಣೂರಮಠ ಇವರಿಗೆ ತಾಲೂಕಿನ ಶಳ್ಳಗಿ ಹಾಗೂ ಲಕ್ಕುಂಡಿ ಗ್ರಾಮದ ಗಣ್ಯರು ಸನ್ಮಾನಿಸಿ ಗೌರವಿಸಿದರು.

ಶನಿವಾರ ಪಟ್ಟಣದ ಶ್ರೀ ಪಂಚಾಚಾರ್ಯ ಸಹಕಾರಿ ಸಂಘದ ಸಭಾಂಗಣದಲ್ಲಿ ನಡೆದ ಈ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ಅವರಿಗೆ ಈ ಸನ್ಮಾನ ನೀಡಲಾಯಿತು. ಈ ಸಮಯದಲ್ಲಿ ಜ್ಯೋತಿಷ್ಯ ರತ್ನ ಪರಮಪೂಜ್ಯ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು,ವಿವಿ ಸಂಘದ ಅಧ್ಯಕ್ಷ ವಿ.ಸಿ. ಹಿರೇಮಠ, ಶಂಕರಗೌಡ ದೇಸಾಯಿ, ವಿಶ್ವನಾಥ್ ರೆಡ್ಡಿ ಪಾಟೀಲ, ವಿಶ್ವನಾಥ ನಾಡಗೌಡ, ಮುತ್ತುಗೌಡ ಚೌದ್ರಿ, ನಿಂಗಣ್ಣ ಹವಾಲ್ದಾರ, ಸೂಗೂರೆಡ್ಡಿ ನಾಯ್ಕಲ್, ಪಂಚಾಕ್ಷರಿ ಹಿರೇಮಠ ಹಾಗೂ ಸಂಘದ ನೂತನ ಸದಸ್ಯರು ಇದ್ದರು.

# ನಾಟ್ಯಶ್ರೀ ನೃತ್ಯಾಲಯದಿಂದ ಆಯೋಜನೆ ರಾಜ್ಯಮಟ್ಟದ ಕಲಾ ಸಂಭ್ರಮೋತ್ಸವ 8ಕ್ಕೆ

ಮಲ್ಲಮ ನುಡಿ ವಾರ್ತೆ

ಬೀದರ. ಫೆ. 03 : ನಾಟ್ಯಶ್ರೀ ನೃತ್ಯಾಲಯ ವತಿಯಿಂದ ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರುರಂಗಮಂದಿರದಲ್ಲಿ ಫೆ. 8 ರಂದು ರಾಜ್ಯಮಟ್ಟದ ಕಲಾ ಸಂಭ್ರಮೋತ್ಸವ ಹಾಗೂ ನಾಟ್ಯಶ್ರೀ ಪ್ರಶಸ್ತಿ– 2025 ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 10.30 ರಿಂದ ಸಂಜೆ ವರೆಗೆ ಕಲಾವಿದರು ತಮ್ಮ ಕಲಾ ಪ್ರದರ್ಶನ ನೀಡಲಿದ್ದಾರೆ ಎಂದು ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ತಿಳಿಸಿದ್ದಾರೆ.

ನಟರಾಜ ಪೂಜೆಯೊಂದಿಗೆ 'ನಾಟ್ಯಶ್ರೀ ಸಾಂಸ್ಕೃತಿಕ ವೈಭವ' ಆರಂಭವಾಗಲಿದೆ. 'ಶಾಸ್ತ್ರೀಯ ಸಂಗೀತಲಹರಿ'ಯಲ್ಲಿ ಕಲಬುರಗಿಯ ಹಿಂದೂಸ್ತಾನಿ ಗಾಯಕ ಪಂಡಿತ ಹಣಮಂತರಾವ್ ಮಳ್ಳಿದಾಸರ ಪದಗಳನ್ನು ಸುಮಧುರವಾಗಿ ಹಾಡಲಿದ್ದಾರೆ. ಸಂಗಯ್ಯ ಸ್ವಾಮಿ ಡೊಂಗರಗಾಂವ್ ಹಾರ್ಮೋನಿಯಂ, ಪಂಡಿತ ರಾಮಚಂದ್ರ ಕಲ್ಲಹಿಪ್ಪರ್ಗಿ ತಲಬಾ ಸಾಥ್ ನೀಡಲಿದ್ದಾರೆ ಎಂದು ಹೇಳಿದ್ದಾರೆ.

ನಾಟ್ಯಶ್ರೀ ನೃತ್ಯಾಲಯದ ಕಲಾವಿದೆಯರು ಪುಷ್ಪಾಂಜಲಿ, ನಟರಾಜ ನೃತ್ಯ, ದಶಾವತಾರ, ಕೃಷ್ಣನ ಲೀಲೆ, ಭಾಗ್ಯದ ಲಕ್ಷ್ಮಿ ಬಾರಮ್ಮ, ನಟೇಶ ಕೌಥುವಂ, ತಿಲ್ಲಾನ, ವಚನ ನೃತ್ಯ ಪ್ರಸ್ತುತಪಡಿಸಲಿದ್ದಾರೆ. 'ಕನಕದಾಸರಿಗೆ ಶ್ರೀ ಕೃಷ್ಣನ ದರ್ಶನ', 'ಮಹಾಶಕ್ತಿ ವೀರಭದ್ರ' ನೃತ್ಯರೂಪಕಗಳನ್ನು ಪ್ರದರ್ಶಿಸಲಿದ್ದಾರೆ ಎಂದು ತಿಳಿಸಿದ್ದಾರೆ.



ಮಂಗಳೂರಿನ ಬಾಲನಟ ಮಾಸ್ಟರ್ ಶೌರ್ಯರಾವ್ ವಿಶೇಷ ನೃತ್ಯ, ವಿದುಷಿ ಸೌಂದರ್ಯ ಭರತನಾಟ್ಯ ಪ್ರದರ್ಶನ ನೀಡಲಿದ್ದಾರೆ ಎಂದು ಹೇಳಿದ್ದಾರೆ.

'ಜಾನಪದನೃತ್ಯಸಂಭ್ರಮ'ದಲ್ಲಿ ನೃತ್ಯಾಲಯದ ಕಲಾವಿದೆಯರು ವಚನ ನೃತ, ಗರ್ಬಾ, ರೈತ ಗೀತೆ, ಜಾನಪದ ಗೀತೆ, ಕೋಲಾಟ, ಭಾಂಗಡ, ಅಘೋರಿ ನೃತ್ಯ, ಮರಾಠಿ ನೃತ್ಯ ಹಾಗೂ ಒನಕೆ ಓಬವ್ವ ನೃತ್ಯರೂಪಕ ಪ್ರದರ್ಶಿಸಲಿದ್ದಾರೆ. ಬೆಂಗಳೂರಿನ ಜಾದೂಗಾರ ನಾರಾಯಣ ಭಟ್ ಮಾಯಾ ಜಾದೂ ಪ್ರದರ್ಶಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಸಂಜೆ 3.45ಕ್ಕೆ ನಡೆಯುವ ಪ್ರಶಸ್ತಿ ಪ್ರದಾನ, ಸಭಾ ಕಾರ್ಯಕ್ರಮ ಹಾಗೂ ಸಾಹಿತಿಗಳೊಂದಿಗೆ ಸಂವಾದವನ್ನು ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಹಾಗೂ ಸಾಹಿತಿ ಡಾ. ಡಿ.ವಿ. ಗುರುಪ್ರಸಾದ್ ಉದ್ಘಾಟಿಸುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಬೀದರ್ ವಿಶ್ವವಿದ್ಯಾಲಯದ ಕುಲಸಚಿವೆ ಸುರೇಖಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ, ಸಾಹಿತಿ ಶಿವಕುಮಾರ ಕಟ್ಟೆ, ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಹೆಬ್ಬಾಳೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಸಾಮಾಜಿಕ ಚಿಂತಕಿ ಡಾ. ನೀತಾ ಬೆಲ್ದಾಳೆ, ಪ್ರಧಾನ ಅಂಚೆ ಪಾಲಕಿ ಮಂಗಲಾ ಭಾಗವತ್, ಸುಜಾತಾ ಪೂಜಾರಿ ಉಪಸ್ಥಿತರಿರಲಿದ್ದಾರೆ. ರಾಣಿ ಸತ್ಯಮೂರ್ತಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಬಾಗಲಕೋಟೆಯ ವಿದುಷಿ ಶುಭದಾ ಗುರುರಾಜ ದೇಶಪಾಂಡೆ ಅವರಿಗೆ 2025ನೇ ಸಾಲಿನ ನಾಟ್ಯಶ್ರೀ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಭಾನುಪ್ರಿಯಾ ಅರಳಿ ಸುಗಮ ಸಂಗೀತ, ಕಲಾವಿದರಾದ ಶಂಭುಲಿಂಗ ವಾಲ್ದೊಡ್ಡಿ ಹಾಗೂ ಮಹೇಶಕುಮಾರ ಕುಂಬಾರ ಜಾನಪದ ಸಂಗೀತ ನಡೆಸಿಕೊಡಲಿದ್ದಾರೆ ಎಂದು ಹೇಳಿದ್ದಾರೆ.

# ಭರತಭೂಷಣಗೆ ನಾಲ್ಕನೇ ಬಾರಿ ಗೆಲುವು



ಬೀದರ. ಫೆ. 03 : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿ. ಸಹಕಾರ ಸಂಘದ ಚುನಾವಣೆಯಲ್ಲಿ ಭರತಭೂಷಣ ಅವರು ಸತತ ನಾಲ್ಕನೇ ಬಾರಿ ಜಯಭೇರಿ ಬಾರಿಸಿ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.


ಕಾಶಿನಾಥ ಬೆಲ್ದಾಳೆ ಬೆಂಬಲಿತ ಪೆನಾಲ್ ನ ವೀರಣ್ಣ ಮುದ್ನಾಳ, ಬಸವರಾಜ ಜೈನಾಪುರ, ಭರತಭೂಷಣ ತಂಡದ 15 ನಿರ್ದೇಶಕರ ಪೈಕಿ 14 ನಿರ್ದೇಶಕರು ಜಯಭೇರಿ ಬಾರಿಸಿದ್ದಾರೆ. ಸುಮಂತ ಕಟ್ಟಿಮನಿ, ವಿಜಯಕುಮಾರ ಡುಮ್ಮೆ ಸೂರ್ಯಕಾಂತ್ ಮತ್ತು ಥಾಮಸ್ ಇವರ ಪೆನಾಲ್ನಲ್ಲಿ ಒಬ್ಬರಿಗೆ ಮಾತ್ರ ಜಯವಾಗಿ ಹೀನಾಯ ಸೋಲು ಕಂಡಿದ್ದಾರೆ. ಹೀಗಾಗಿ ಸರ್ವ ಸದಸ್ಯರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಸಂಘದ ಅಧ್ಯಕ್ಷ ಮಹೇಶ ಘಾಳೆ, ಉಪಾಧ್ಯಕ್ಷ ರಾಜಕುಮಾರ ಕರುಣೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡೈಮಂಡ್ ಕಾಲೇಜಿನಲ್ಲಿ ಯಶಸ್ವಿಯಾಗಿ ನಡೆದ ಪಿ.ಯು ಪ್ರವೇಶ ಪರೀಕ್ಷೆ-3400 ವಿದ್ಯಾರ್ಥಿಗಳು ಹಾಜರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಫೆ.3:ತಾಲೂಕಿನ ಡೈಮಂಡ್ ಕಾಲೇಜಿನಲ್ಲಿ ದಿನಾಂಕ 02 ಫೆಬ್ರುವರಿ 2025 ರಂದು ನಡೆದ ಪ್ರವೇಶ ಪರೀಕ್ಷೆಗೆ ಒಟ್ಟು 3400 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ.

ಸಂಸ್ಥೆಯ ಅಧ್ಯಕ್ಷರಾದ ಶೇಖ್ ಮಸ್ತಾನವಲಿ ಹಾಗೂ ಕಾರ್ಯದರ್ಶಿಗಳಾದ ವೈ. ಮಾಧವರಾವ ರವರ ಮಾರ್ಗದರ್ಶನದಲ್ಲಿ ಡೈಮಂಡ್ ಕಾಲೇಜಿನಿಂದ 2025–26ನೇ ಸಾಲಿಗೆ ಪ್ರವೇಶ ಪರೀಕ್ಷೆ ನಡೆಸಲಾಯಿತು.



ಬೀದರ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಓದುತ್ತಿರುವ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಎಸ್.ಎಸ್.ಎಲ್.ಸಿ. ಆಂಗ್ಲ, ಕನ್ನಡ, ಉರ್ದು, ಮರಾಠಿ ಮಾಧ್ಯಮದ ವಿದ್ಯಾರ್ಥಿಗಳು ಪರೀಕ್ಷೆ ಬರೆದರು.

"ಕಾಲೇಜಿನ ಶುಲ್ಕ ರಿಯಾಯಿತಿ ಪ್ರವೇಶ ಪರೀಕ್ಷೆ"ಯಲ್ಲಿ ಮೊದಲ ಹಂತದಲ್ಲಿ ಹೆಚ್ಚು ಅಂಕಗಳಿಸುವ 25 ವಿದ್ಯಾರ್ಥಿಗಳಿಗೆ ಉಚಿತ ಎರಡು ವರ್ಷ ಪಿಯುಸಿ ಶಿಕ್ಷಣ ನೀಡಲಾಗುತ್ತದೆ. ನಂತರದ 26 ರಿಂದ 100 ವಿದ್ಯಾರ್ಥಿಗಳಿಗೆ 75%, 100 ರಿಂದ 250 ವಿದ್ಯಾರ್ಥಿಗಳಿಗೆ 50%, 251 ರಿಂದ 500 ವಿದ್ಯಾರ್ಥಿಗಳಿಗೆ 25%, 501 ರಿಂದ 750 ವಿದ್ಯಾರ್ಥಿಗಳಿಗೆ 10% ರಿಯಾಯಿತಿ ನೀಡಲಾಗುತ್ತದೆ ಎಂದು ಮುಖ್ಯ ಆಡಳಿತಾಧಿಕಾರಿ ಅಶ್ವಿನ ಭೋಸ್ಲೆ ತಿಳಿಸಿದ್ದಾರೆ ಹಾಗೂ ಎರಡನೇ ಹಂತದ ಪ್ರವೇಶ ಪರೀಕ್ಷೆ 9ನೇ ಫೆಬ್ರವರಿ 2025 ರಂದು ನಡೆಸಲಾಗುತ್ತದೆ. ಇನ್ನೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಸದಾವಕಾಶ ಮಾಡಿಕೊಡಲಾಗುತ್ತದೆ ಎಂದು ತಿಳಿಸಿದ್ದಾರೆ.

ಪ್ರವೇಶ ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲರಾದ ಎಸ್.ಕೆ. ಹುಸೇನ್, ಉಪಪ್ರಾಂಶುಪಾಲರಾದ ಶ್ರೀಮತಿ ಸುನಂದಾ ಹಾಗೂ ಮುಖ್ಯ ಆಡಳಿತಾಧಿಕಾರಿಗಳಾದ ಅಶ್ವಿನ್ ಭೋಸ್ಲೆ, ಗಿರೀಶ ಭಂಡಾರಿ, ಮಂಜುನಾಥ ನಿಲಂಗೆ, ಜ್ಞಾನೇಶ್ವರ ಬಿರಾದಾರ, ರೆಹಮಾನ್, ಕರೀಮ, ರಾಜಶೇಖರ, ರಂಧೀರ ಜಾಧವ, ಶೇಖರ ಮತ್ತು ಎಲ್ಲ ಸಿಬ್ಬಂದಿವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಆಧಾರ್ ಕೇಂದ್ರದ ಸದುಪಯೋಗಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.3: ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ಆಧಾರ ಕಾರ್ಡ್ ಕೇಂದ್ರ ಪುನರರಾಂಭಿಸಲಾಗಿದ್ದು ಸುತ್ತಮುತ್ತಲಿನ ಗ್ರಾಮಸ್ಥರು ಸದುಪಯೋಗಪಡೆದುಕೊಳ್ಳಬೇಕು ಎಂದು ವಕೀಲ ಮಹೇಶ ರಾಚೋಟೆ ಮನವಿ ಮಾಡಿದ್ದಾರೆ.

ಗ್ರಾಮದ ಅಂಚೆ ಕಛೇರಿಯಲ್ಲಿ ಈ ಹಿಂದೆ ಇದ್ದ ಆಧಾರ್ ಕಾರ್ಡ ಕೇಂದ್ರ ವಿವಿಧ ಕಾರಣಗಳಿಂದ ಭಾಲ್ಕಿಗೆ ಸ್ಥಳಾಂತರಿಸಲಾಗಿತ್ತು.

ಹಾಗಾಗಿ ಕ್ಷೇತ್ರದ ಸಂಸದರು ಸೇರಿ ಅಂಚೆ ಕಛೇರಿಯ ಮುಖ್ಯ ಅಧಿಕಾರಿಗಳಿಗೆ ಪತ್ರ ಬರೆದು ಗ್ರಾಮದಲ್ಲಿ ಆಧಾರ ಕೇಂದ್ರ ಪುನರರಾಂಭಿಸಲು ಮನವಿ ಮಾಡಿಕೊಳ್ಳಲಾಗಿತ್ತು. ಇದೀಗ ಮನವಿ ಸ್ಪಂದನೆ ಸಿಕ್ಕಿದ್ದು ಗ್ರಾಮದ ಅಂಚೆ ಕಚೇರಿಯಲ್ಲಿ ಆಧಾರ ಕೇಂದ್ರ ಆರಂಭಗೊಂಡಿದೆ. ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಮಕ್ಕಳ ಶೈಕ್ಷಣಿಕ ಏಳಿಗೆಯಲ್ಲಿ ಪಾಲಕರ ಪಾತ್ರ ಹಿರಿದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.3:ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಶಿಕ್ಷಕರ ಜೊತೆ ಪಾಲಕರ ಪಾತ್ರವು ಹಿರಿದು ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಪ್ರೌಢಶಾಲೆಯಲ್ಲಿ ನಡೆದ ಪ್ರೌಢ ಶಾಲಾ ವಿಭಾಗದ ಪಾಲಕರ ಸಭೆಯಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಪ್ರತಿಷ್ಠಿತ ಶಾಲಾ–ಕಾಲೇಜಿಗೆ ನಮ್ಮ ಮಕ್ಕಳನ್ನು ದಾಖಲಿಸಿದ್ದೇವೆ ಇನ್ಮುಂದೆ ನಮ್ಮ ಕಾರ್ಯ ಮುಗಿತು ಎಂದು ಪಾಲಕ–ಪೋಷಕರು ಯಾವುದೇ ಕಾರಣಕ್ಕೂ ಭಾವಿಸಬಾರದು. ಕ್ಲಾಸ್ ಹೇಗೆ ನಡ್ತಿವೆ, ನಮ್ಮ ಮಗುವಿನ ಶೈಕ್ಷಣಿಕ ಪ್ರದರ್ಶನ ಹೇಗಿದೆ ಎಂಬುದು ಸೇರಿದಂತೆ ಎಲ್ಲವನ್ನು ತಿಳಿದುಕೊಳ್ಳುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಪ್ರಶಸ್ತಿ, ಸ್ಪರ್ಧೆ ವಿಷಯದಲ್ಲಿ ಸೋಲು–ಗೆಲುವು ಯಾವಾಗಲು ಸಾಮಾನ್ಯ. ಅದಕ್ಕೆ ತಲೆಕೆಡಿಸಿಕೊಂಡು ಹಿಂಜರಿಯದೇ ಮುನ್ನುಗ್ಗುವ ಛಾತಿಯನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪಾಲಕ ಪ್ರತಿನಿಧಿಗಳಾದ ಪ್ರಭು ಧೂಪೆ, ರಾಜೇಶ ಮುಗಟೆ, ಸೂರ್ಯಕಾಂತ ಕಮಲನಗರ, ಶರಣು ಪಾಟೀಲ, ಮುಖ್ಯ ಶಿಕ್ಷಕ ಮಹೇಶ ಮಹಾರಾಜ್, ಲಕ್ಷ್ಮಣ ಮೇತ್ರೆ ಸೇರಿದಂತೆ ಎಲ್ಲ ಸಿಬ್ಬಂದಿ ಇದ್ದರು.

# ಸರ್ಕಾರಿ ಪ್ರೌಢ ಶಾಲೆ ಮುಖ್ಯ ಶಿಕ್ಷಕ ಶಿವಕಾಂತ ಹಣಮಶೇಟ್ಟೆ ನಿವೃತ್ತಿ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.3:ತಾಲೂಕಿನ ಖತಗಾಂವ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶುಕ್ರವಾರ ಮುಖ್ಯ ಶಿಕ್ಷಕ ಶಿವಕಾಂತ ಹಣಮಶೇಟ್ಟೆ ಅವರ ವಯೋನಿವೃತ್ತಿ ಸಮಾರಂಭ ಆಯೋಜನೆ ಮಾಡಿ ಗೌರವ ಪೂರ್ವಕವಾಗಿ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ವಿಶ್ವನಾಥ ಡೋಣಗಾಪೂರೆ ಮಾತನಾಡಿ,

ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿ ಅವರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿ ನಿವೃತ್ತಿಯಾಗುವ ಮುಖ್ಯ ಶಿಕ್ಷಕ ಶಿವಕಾಂತ ಹಣಮಶೇಟ್ಟೆ ಅವರ ನಿವೃತ್ತಿ ಜೀವನವನ್ನು ಸಮಾಜಮುಖಿ ಚಿಂತನೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಬದುಕು ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಶಾಲೆಯ ಶಿಕ್ಷಕಿ ಶೈಲಶ್ರೀ ಮಾತನಾಡಿ, ಶಿಕ್ಷಕರು ತಮ್ಮ ಸೇವಾವಧಿಯಲ್ಲಿ ಗಳಿಸುವ ಅಪಾರ ಜ್ಞಾನ ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯ. ಯುವ ಪೀಳಿಗೆಯನ್ನು ಸುಸಂಸ್ಕೃತರನ್ನಾಗಿ ಮಾಡುವ ಗುರುತರ ಜವಾಬ್ದಾರಿ ಶಿಕ್ಷಕರದ್ದಾಗಿದೆ ಎಂದರು.

ಮುಖ್ಯಶಿಕ್ಷಕ ಶಿವಕಾಂತ ಹಣಮಶೇಟ್ಟೆ ಅವರು ಅತ್ಯಂತ ಶಿಸ್ತಿನ ಶಿಕ್ಷಕರು, ಶಿವಕಾಂತ ಸರ್ ಎಂದರೆ ಮಕ್ಕಳಿಗೆ ಅಚ್ಚುಮೆಚ್ಚು, ಶಾಲೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಟ್ಟು, ಉತ್ತಮ ರೀತಿಯಿಂದ ಕೆಲಸ ಮಾಡಿ ಎಂತಹ ದೊಡ್ಡ ಸಮಸ್ಯೆ ಇದ್ದರೂ ಕೂಡಾ ಅದಕ್ಕೆ ಪರಿಹಾರ ಕಂಡುಕೊಳ್ಳುವ ಸಾಮರ್ಥ್ಯ ಅವರಲ್ಲಿತ್ತು. 1994 ರಲ್ಲಿ ಪ್ರೌಢ ಶಾಲಾ ಶಿಕ್ಷಕರಾಗಿ ಸೇವೆಗೆ ಸೇರಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿದ್ದಾರೆ. ಅಲ್ಲದೇ ಅವರು ಕಲಿಸಿದ ಮಕ್ಕಳು ಕೂಡಾ ಉನ್ನತ ಸ್ಥಾನಕ್ಕೆ ಹೋಗಿದ್ದಾರೆ ಎಂದರು.

ಸ.ಪ್ರೌ.ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಬಿರಾದಾರ, ನಿವೃತ್ತ ಶಿಕ್ಷಕ ಸೂರ್ಯಕಾಂತ ಧರಣೆ, ಸೂರ್ಯಕಾಂತ ಬೇಂದ್ರೆ, ಎ???ಡಿಎ???ಸಿ ಮಾಜಿ ಅಧ್ಯಕ್ಷ ಸಪ್ನಾ ಚಿವಟೆ, ನಾಗೇಶ ಹರಪಾಳೆ ಹಾಗೂ ಗ್ರಾಮ ಗಣ್ಯರು, ಶಿಕ್ಷಕರು, ಮಕ್ಕಳು ಇದ್ದರು. ಶರಣಬಸಪ್ಪಾ ಸಲಗಾರ ನಿರೂಪಿಸಿದರು, ವಂದರ್ಪಣೆ ಅನುಪ ನೀಲಂಗೆ ನಡೆಸಿಕೊಟ್ಟರು.



ಬಾಗಲಕೋಟೆ : ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನ ಮಕ್ಕಳೊಂದಿಗೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ ಸೇರಿದಂತೆ ಇತರೆ ಅಧಿಕಾರಿಗಳು ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸಂವಾದ ನಡೆಸಿದರು.

# ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳವಾಗಲಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.3:ಮಕ್ಕಳಿರುವ ಕಡೆ ಶಿಕ್ಷಕರಿಲ್ಲ, ಶಿಕ್ಷಕರಿರುವ ಕಡೆ ಮಕ್ಕಳಿಲ್ಲ, ಶಿಕ್ಷಕರು ಸಮಯಕ್ಕೆ ಶಾಲೆಗೆ ಹೋಗುವುದಿಲ್ಲ, 7–8ನೇ ತರಗತಿ ಮಕ್ಕಳಿಗೆ ಸರಿಯಾಗಿ ಓದಲು ಬರುತ್ತಿಲ್ಲ. ಸರ್ಕಾರಿ ಶಾಲೆಗಳು ಅವ್ಯವಸ್ಥೆಯ ತಾಣಗಳಾಗಿವೆ. ಇವುಗಳನ್ನು ಸರಿಪಡಿಸಿ ದಾಖಲಾತಿ ಹೆಚ್ಚಳಕ್ಕೆ ಪ್ರಯತ್ನಿಸಬೇಕು. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಕ್ಷೇತ್ರದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಇರುವಂತೆ ಮಾಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಔರಾದ(ಬಿ) ತಾಲ್ಲೂಕಿನ ಘಮಸುಬಾಯಿ ಬೋಂತಿ ತಾಂಡಾದಲ್ಲಿನ ಶಾಸಕರ ಗೃಹ ಕಛೇರಿ ಆವರಣದಲ್ಲಿ ಶನಿವಾರ ಶಿಕ್ಷಣ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ನಾನು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಿದ್ದು, ನಿರಂತರವಾಗಿ ಶ್ರಮಿಸುತ್ತಿದ್ದೇನೆ. ಆದರೆ ಅಧಿಕಾರಿಗಳು ಮತ್ತು ಶಿಕ್ಷಕರಿಂದ ಸೂಕ್ತ ಸ್ಪಂದನೆ ಸಿಗುತ್ತಿಲ್ಲ. ಕಳೆದ ಎರಡು ವರ್ಷ ಎಸ್ಸೆಸ್ಸೆಲ್ಸಿ ಫಲಿತಾಂಶ ತೀವ್ರ ಕುಸಿದಿರುವುದು ಬೇಸರ ಮೂಡಿಸಿದೆ. ಈ ವರ್ಷದ ಫಲಿತಾಂಶ ಸುಧಾರಣೆಗೆ ಏನು ಮಾಡಿದ್ದೀರಿ ಎಂದು ತರಾಟೆಗೆ ತೆಗೆದುಕೊಂಡರು.

ಕೆಲವು ಶಾಲೆಗಳಲ್ಲಿ ಶಿಕ್ಷಕರು ಸಮಯಕ್ಕೆ ಶಾಲೆಗೆ ಬರುವುದಿಲ್ಲವೆಂಬ ದೂರುಗಳಿವೆ. ತಾಂಡಾ ಶಾಲೆಗಳ ಪರಿಸ್ಥಿತಿ ತೀವ್ರ ಹದಗೆಟ್ಟಿದೆ. ಕೆಲವು ಶಿಕ್ಷಕರು ಶಾಲೆಗೆ ಹೋಗದೇ ಸಂಬಳ ಪಡೆಯುತ್ತಿದ್ದಾರೆ ಎನ್ನುವ ದೂರುಗಳಿವೆ. ಹೀಗಾದರೆ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳ ಹೇಗೆ ಸಾಧ್ಯ ? ಶಿಕ್ಷಕರು ಸಮಯ ಪಾಲನೆ ಮಾಡಬೇಕು. ಸರಿಯಾಗಿ ಪಾಠ ಮಾಡಬೇಕು. ಪೋಷಕರ ಮನವೊಲಿಸುವ ಕೆಲಸ ಮಾಡಬೇಕು. ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದೇನೆ. ಇನ್ನು ಮುಂದೆ ಸುಮ್ಮನಿರುವುದಿಲ್ಲ. ಮಕ್ಕಳ ದಾಖಲಾತಿಯಿಲ್ಲದ ಶಿಕ್ಷಕರನ್ನು ದೂರದ ಜಿಲ್ಲೆಗಳಿಗೆ ವರ್ಗಾಯಿಸಲು ಶಿಫಾರಸ್ಸು ಮಾಡುತ್ತೇನೆ. ಹಾಗಾಗಿ ಎಲ್ಲರೂ ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದು ಸೂಚಿಸಿದರು.


ಬಿ.ಆರ್.ಪಿ, ಸಿ.ಆರ್.ಪಿ, ಇಸಿಓ ಇನ್ನಷ್ಟು ಚುರುಕಾಗಬೇಕು. ಶಿಕ್ಷಕರ ಮೇಲೆ ನಿಗಾ ವಹಿಸಬೇಕು. ಸರಿಯಾಗಿ ಕೆಲಸ ಮಾಡದವರಿಗೆ ಚುರುಕು ಮುಟ್ಟಿಸಬೇಕು. ತಾವು ತಮ್ಮ ಜವಾಬ್ದಾರಿಗಳನ್ನು ಸರಿಯಾಗಿ ನಿಭಾಯಿಸಿ ಶಿಕ್ಷಕರನ್ನು ಸರಿದಾರಿಗೆ ತರಬೇಕು ಎಂದರು.

ಶಿಕ್ಷಕರು ಮಕ್ಕಳ ಭವಿಷ್ಯ ರೂಪಿಸುವವರು. ಹಾಗಾಗಿ ಶಿಕ್ಷಕರೆಂದರೆ ನನಗೆ ಎಲ್ಲಿಲ್ಲದ ಗೌರವ ಭಾವನೆಯಿದೆ. ಇದಕ್ಕೆ ಧಕ್ಕೆ ಬಾರದ ರೀತಿಯಲ್ಲಿ ಕೆಲಸ ಮಾಡಬೇಕು. ಎಲ್ಲ ಶಾಲೆಗಳಿಗೆ ಉತ್ತಮ ಕಟ್ಟಡ, ಕುಡಿಯುವ ನೀರು, ಶೌಚಾಲಯ, ಕಂಪೌಂಡ್, ಆಟದ ಮೈದಾನ, ಗ್ರಂಥಾಲಯ, ಎ???ಡಿ ಟಿವಿ ಸೇರಿದಂತೆ ಎಲ್ಲ ರೀತಿಯ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ. ಸರ್ಕಾರಿ ಶಾಲೆಗಳನ್ನು ಡಿಜಿಟಲ್ ಮಾಡುವ ಕೆಲಸ ನಡೆದಿದೆ. ಇನ್ನೂ ಯಾವುದಾದರೂ ಶಾಲೆಗಳಲ್ಲಿ ಕೊರತೆ ಇದ್ದರೆ ನನ್ನ ಗಮನಕ್ಕೆ ತಂದು ಪಡೆದುಕೊಳ್ಳಿ. ಶಿಕ್ಷಣದ ಗುಣಮಟ್ಟ ಸುಧಾರಿಸುವುದೇ ನನ್ನ ಸಂಕಲ್ಪವಾಗಿದೆ ಎಂದು ಹೇಳಿದರು.

ದ್ವಿದಾಖಲಾತಿ ಸಮಸ್ಯೆ ಸರಿಪಡಿಸಿ: ದ್ವಿದಾಖಲಾತಿ ಸಮಸ್ಯೆಯ ಬಗ್ಗೆ ಅಧಿಕಾರಿಗಳಿಂದ ವಿವರಣೆ ಪಡೆದ ಶಾಸಕರು, ಈ ಸಮಸ್ಯೆ ಶೀಘ್ರ ಪರಿಹರಿಸಬೇಕು. ಯಾರೋ ಮಾಡುವ ತಪ್ಪಿಗೆ ನಮ್ಮ ಮಕ್ಕಳು ಬಲಿಯಾಗಬಾರದು. ಇನ್ನು ಮುಂದೆ ಈ ರೀತಿಯ ಲೋಪಗಳು ಜರುಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶಾಸಕರು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜಿ ರಂಗೇಶ, ಕ್ಷೇತ್ರ ಸಮನ್ವಯ ಅಧಿಕಾರಿ ಪ್ರಕಾಶ ರಾಠೋಡ್, ಶಿಕ್ಷಕರ ಸಂಘದ ಅಧ್ಯಕ್ಷ ಪಂಡರಿ ಆಡೆ, ಧೂಳಪ್ಪ, ವಿದ್ಯಸಾಗರ, ವಿಶ್ವನಾಥ ಬಿರಾದಾರ, ಬಸವರಾಜ ಪಾಟೀಲ್, ಸಿಆರ್ಪಿ, ಬಿಆರ್ಪಿ, ಇಸಿಓ, ಶಿಕ್ಷಕರ ಸಂಘದ ಪದಾಧಿಕಾರಿಗಳು ಸೇರಿದಂತೆ ಇತರರಿದ್ದರು.

# ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ರಾಮಣ್ಣ ಬಳಿಚಕ್ರ, ಉಪಾಧ್ಯಕ್ಷರಾಗಿ ವೆಂಕಟರಡ್ಡಿ ಅಣಬಿ ಅವಿರೋಧವಾಗಿ ಆಯ್ಕೆ



ಮಲ್ಲಮ ನುಡಿ ವಾರ್ತೆ

ಯಾದಗಿರಿ :ಫೆ.3: ಇಲ್ಲಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮಿಣ ಅಭಿವೃದ್ಧಿ ಬ್ಯಾಂಕ್ ನಿ.ದ ನೂತನ ಅಧ್ಯಕ್ಷರಾಗಿ ರಾಮಣ್ಣಬಳಿಚಕ್ರ ಕೋಟಗೇರಾ ಹಾಗೂ ಉಪಾಧ್ಯಕ್ಷರಾಗಿನಾಗರಡ್ಡಿಅಣಬಿ ಹೆಡಗಿಮದ್ರಾಅವಿರೋಧವಾಗಿ ಆಯ್ಕೆಯಾದರು.

ಬ್ಯಾಂಕ್‌ನ ಸಭಾಂಗಣದಲ್ಲಿ ಸೋಮವಾರ ನಡೆದ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ ಚುನಾವಣೆಗೆ ಅಧ್ಯಕ್ಷ ಸ್ಥಾನಕ್ಕೆ ರಾಮಣ್ಣ ಬಳಿಚಕ್ರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಾಗರಡ್ಡಿ ಅಣಬಿ ಉಭಯ ಅಭ್ಯರ್ಥಿಗಳು ಮಾತ್ರ ಏಕೈಕ ಅಭ್ಯರ್ಥಿಗಳಾಗಿ ಚುನಾವಣಾಧಿಕಾರಿ ಶ್ರೀಮತಿ ಗಿರಿಜಾ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಪರಿಶೀಲನೆ ಮಾಡಿದ ಚುನಾವಣಾಧಿಕಾರಿ ಕೊನೆಗೆ ಉಭಯ ಅಭ್ಯರ್ಥಿಗಳು ಅವಿರೋಧವಾಗಿಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು.

ಸಭೆಯಲ್ಲಿ ಆಡಳಿತ ಮಂಡಳಿಯ ನಿರ್ದೇಶಕರಾದ ಅಮೃತರಡ್ಡಿ ಪಾಟೀಲ್, ಬಸವರಡ್ಡಿ ಹೆಗ್ಗಣಗೇರಾ, ಶರಣಪ್ಪಗೌಡ ಕೌಳೂರ, ರಾಘವೇಂದ್ರರಡ್ಡಿ ಕೊಂಕಲ್, ಶ್ರೀಮತಿ ಮರೆಮ್ಮ, ಶರಣಗೌಡ ಸೌರಾಷ್ಟ್ರಹಳ್ಳಿ, ಬಸವರಾಜ ಕಣೆಕಲ್, ವೆಂಕಟರಾಮಲು ಚಪೆಟ್ಲಾ, ರವಿಪುತ್ರ ಆರ್. ಹೊಸಳ್ಳಿ, ಜಲ್ಲಮ್ಮ ತಾತಳಗೇರಾ, ಬನ್ನಪ್ಪ ಹಳಿಗೇರಿ, ಪಿಎಲ್‌ಡಿ ವ್ಯವಸ್ಥಾಪಕ ಅಯ್ಯಣರಡ್ಡಿ, ಸಿದ್ದಯ್ಯ ಕಲಾಲ್ ಯಳವಾರ ಹಾಜರಿದ್ದರು.

ಪತ್ರಿಕೆಯೊಂದಿಗೆ ನೂತನ ಅಧ್ಯಕ್ಷ ರಾಮಣ್ಣ ಬಳಿಚಕ್ರ ಮಾತನಾಡಿ, ನಾನು ದಿ. ಸದಾಶಿವರಡ್ಡಿ ಕಂದಕೂರ, ಮಾಜಿ ಶಾಸಕ ದಿ. ನಾಗನಗೌಡ ಕಂದಕೂರ ಅವರ ಸಂಪರ್ಕದ ಮೂಲಕ ರಾಜಕೀಯ ಪ್ರವೇಶ ಮಾಡಿ, ಕಳೆದ 40 ವರ್ಷಗಳಿಂದ ಆ ಮನೆತನಕ್ಕೆ ಹಾಗೂ ಜೆಡಿಎಸ್ ಪಕ್ಷಕ್ಕೆ ನಿಷ್ಠಾವಂತ ಕಾರ್ಯಕರ್ತನಾಗಿ, ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ, ನನ್ನ ಸೇವೆ ಗುರುತಿಸಿ ಶಾಸಕ ಶರಣಗೌಡ ಕಂದಕೂರ ಅವರು ಹೊಸ ಜವಾಬ್ದಾರಿ, ರಾಜಕೀಯ ಅಧಿಕಾರ ನೀಡಿದ್ದಾರೆ, ಬರುವ ದಿನಗಳಲ್ಲಿ ಗುರುಮಿಠಕಲ್ ಮತಕ್ಷೇತ್ರದಲ್ಲಿ ಪಕ್ಷ ಸಂಘಟನೆಗೆ ಶ್ರಮಿಸುವ ಜೊತೆಗೆ ಪಿಎಲ್‌ಡಿ ಬ್ಯಾಂಕ್ ಮೂಲಕ ಸರ್ಕಾರದಿಂದ ರೈತರಿಗೆ ಎಲ್ಲಾ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ತಲುಪಿಸಿ ಎಲ್ಲರ ಪ್ರೀತಿ–ವಿಶ್ವಾಸ ಉಳಿಸಿಕೊಳ್ಳುತ್ತೇನೆ ಎಂದು ಹೇಳಿದರು.

ನಂತರ ನೂತನ ಅಧ್ಯಕ್ಷ–ಉಪಾಧ್ಯಕ್ಷರನ್ನು ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಮಲ್ಲಣಗೌಡ ಪಾಟೀಲ್ ಹತ್ತಿಕುಣಿ, ರಾಚನಗೌಡ ಮುದ್ನಾಳ, ಸಿದ್ದಪ್ಪ ಹೊಟ್ಟಿ, ರವೀಂದ್ರ ಮುಂಡರಗಿ, ಆನಂದರಡ್ಡಿ ವಡವಟ್, ನರಸಿಂಹರಡ್ಡಿ ಚಿಂತಗುಂಟಾ, ಬಸವರಾಜ ಚಂಡ್ರಿಕಿ, ನಿಂಗಪ್ಪ ತಳಕ್, ಡಾ. ಆಂಜನೇಯ ಕಡೇಚೂರ, ಸಾಬರಡ್ಡಿ ತಮ್ಮಣ್ಣೋರ ಹತ್ತಿಕುಣಿ, ನರಸಪ್ಪ ಇದ್ಲಿ, ಮಹಾದೇವಪ್ಪ ಕಂದಕೂರ ಸೇರಿದಂತೆ ಉಪಸ್ಥಿತರಿದ್ದರು.

## ಸಂತೋಷಕುಮಾರಗೆ ಪಿಎಚ್‌ಡಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಫೆ.3: ತಾಲೂಕಿನ ಹತ್ತಿಕುಣಿ ಗ್ರಾಮದ ಸಂತೋಷ ಕುಮಾರ ರಾಮರೆಡ್ಡಿ ಮಾಲಿ ಪಾಟೀಲ್ ಹತ್ತಿಕುಣಿ ಇವರಿಗೆ ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿಯ ಕನ್ನಡ ಅಧ್ಯಯನ ಸಂಸ್ಥೆಯ ಮುಖ್ಯಸ್ಥರಾದ ಡಾ.ಹೆಚ್.ಟಿ.ಪೋತೆಯವರ ನಿರ್ದೇಶನದೊಂದಿಗೆ ಹಾಗೂ ಬೀದರ ಜಿಲ್ಲೆಯ ಕರ್ನಾಟಕ ಕಾಲೇಜಿನ ಕನ್ನಡ ವಿಭಾಗ ಮುಖ್ಯಸ್ಥರು ಮತ್ತು ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಜಗನ್ನಾಥ ಹೆಬ್ಬಾಳೆ ಅವರ ಮಾರ್ಗದರ್ಶನದಲ್ಲಿ ಜನಪದ ವಿಭಾಗದ "ಯಾದಗಿರಿ ಜಿಲ್ಲೆಯ ಜಾತ್ರೆಗಳು" ಎಂಬ ಸಂಶೋಧನಾ ಮಹಾಪ್ರಬಂಧದ ಮಂಡನೆಗೆ ವಿಶ್ವವಿದ್ಯಾಲಯವು ಡಾಕ್ಟರೇಟ್ ಪದವಿ ನೀಡಿದೆ.

## ಗರ್ಭಿಣಿ ಅವಧಿಯಲ್ಲಿ ಸತತ ಪಾದಗಳ ಬಾವು, ರಕ್ತದೊತ್ತಡದ ಚಿನ್ಹೆಯಾಗಿರಬಹುದು;ನಿರ್ಲಕ್ಷ್ಯಿಸಬೇಡಿ: ಡಾ.ಯಲ್ಲಾ ರಮೇಶಬಾಬು



ಬಳ್ಳಾರಿ,ಫೆ.03:ಗರ್ಭಿಣಿಎಂದು ತಿಳಿದ ಕೂಡಲೆ ಉಚಿತವಾಗಿ ತಾಯಿಕಾರ್ಡ್‌ನಲ್ಲಿನೋಂದಣಿ ಮಾಡಿಸುವಜೊತೆಗೆರಕ್ತದೊತ್ತಡ ಚಿನ್ಹೆಯಾಗಿರುವ ಪಾದಗಳ ಬಾವುನ್ನುನಿರ್ಲಕ್ಷಿಸಬೇಡಿ;ವೈದ್ಯರ ಸಲಹೆಯಂತೆಔಷದೋಪಚಾರ ಪಡೆದುಆಹಾರದಲ್ಲಿಬದಲಾವಣೆ ಮೂಲಕಗರ್ಭಿಣಿಯರಆರೈಕೆಗೆ ಬೆಂಬಲ ನೀಡಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಯಲ್ಲಾ ರಮೇಶ ಬಾಬು ಪಾಲಕರಲ್ಲಿ ವಿನಂತಿಸಿದರು.

ಸೋಮವಾರದಂದು ಎಮ್ಮಿಗನೂರು ಗ್ರಾಮದಲ್ಲಿ ಗರ್ಭಿಣಿ ತಾಯಿಯ ಮನೆ ಭೇಟಿ ಮಾಡಿ ಪಾಲಕರೊಂದಿಗೆ ಮಾತನಾಡುತ್ತಾ, ರಕ್ತದೊತ್ತಡ ವಲ್ಲದೆ ಚೊಚ್ಚುಲು ಗರ್ಭಿಣಿ, ಎತ್ತರ ಕಡಿಮೆ, ದೇಹದ ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು, ಮೊದಲ ಹೆರಿಗೆ ಸಿಸೇರಿಯನ್, ಮುಂತಾದ ಕಾರಣಗಳಿದ್ದರೂ ಸಹ ಗಂಡಾಂತರಕಾರಿ ಗರ್ಭಿಣಿಯರಾಗುತ್ತಾರೆ, ದಯವಿಟ್ಟು ನಿರ್ಲಕ್ಷಿಸಬೇಡಿ ಎಂದು ವಿನಂತಿಸಿದರು.

ರಕ್ತಹೀನತೆ ನಿವಾರಣೆಗೆ ಕ್ರಮ:

ತೀವ್ರರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಾದ ಕನಿಷ್ಟ 180 ಕಬ್ಬಿಣಾಂಶ ಮಾತ್ರೆಗಳ ಸೇವನೆ, ವೈದ್ಯರ ಸಲಹೆ ಮೇರೆಗೆ ಐರನ್ ಸುಕ್ರೋಸ್ ಚುಚ್ಚುಮದ್ದು, ಅಗತ್ಯವಿದ್ದರೆ ರಕ್ತ ಹಾಕಿಸುವಿಕೆಯನ್ನು ಸಹ ಮಾಡಲಾಗುವುದು. ಈಹಂತದಲ್ಲೂ ಸುಧಾರಣೆಯಾಗದಿದ್ದಲ್ಲಿ ಪ್ರಸೂತಿ ತಜ್ಞರ ಬಳಿ ಖುದ್ದಾಗಿ ಕರೆದು ಕೊಂಡು ಹೊಗಲು ಸಿಬ್ಬಂದಿಯವರಿಗೆ ಸೂಚಿಸಿದರು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು.

ಮಕ್ಕಳ ಜನನದ ಅಂತರಕ್ಕಾಗಿ ತಾತ್ಕಾಲಿಕ ವಿಧಾನ ಬಳಕೆ:

ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಯಾಗುವಅವಧಿಯನ್ನು ಕನಿಷ್ಟ3 ವರ್ಷಕ್ಕೆ ಕಡ್ಡಾಯವಾಗಿ ಮುಂದುಡುವುದು, ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ–ಟಿ, ನೀರೊಧ ಬಳಸಲು ವಿನಂತಿಸಿದರು.

ಭೇಟಿಯ ವೇಳೆ ತಾಲೂಕು ಆರೋಗ್ಯಾಧಿಕಾರಿ ಡಾ.ಅರುಣ್ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿಎನ್‌ಓ ಗಿರೀಶ್, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಬಸವರಾಜ್, ಸಿಬ್ಬಂದಿಯವರಾದ, ಬಸನಗೌಡ, ವಿಘ್ನೇಶ, ಕೃಷ್ಣಮೂರ್ತಿ ಸೇರಿದಂತೆ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಗೀತಾ, ಪೂಜಾ, ನಂದಾ, ಸಿಹೆಚ್‌ಓ ಸುಧಾ, ಆಶಾ ಕಾರ್ಯಕತೆ–ಯರು ಇದ್ದರು.

## ಗ್ಯಾರಂಟಿ ಯೋಜನೆ ಸದುಪಯೋಗ ಪಡೆದುಕೊಳ್ಳಿ: ಶಾಸಕ ಬಿ.ಎಂ.ನಾಗರಾಜ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.03:ರಾಜ್ಯ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕು ಎಂದು ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ ಅವರು ಹೇಳಿದರು.

ಸಿರುಗುಪ್ಪ ತಾಲ್ಲೂಕು ಪಂಚಾಯತ್ ವತಿಯಿಂದ ಸಿರುಗುಪ್ಪ ಪಟ್ಟಣದ ತಾಲ್ಲೂಕು ಪಂಚಾಯಿತಿಯ ಸಾಮರ್ಥ್ಯ ಸೌಧದಲ್ಲಿ ಸೋಮವಾರ ಆಯೋಜಿಸಿದ್ದ ತಾಲ್ಲೂಕುಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ತಾಲ್ಲೂಕಿನಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರುಗಳು ಸಹ ಗ್ಯಾರಂಟಿ ಯೋಜನೆಗಳ ಬಗ್ಗೆ ತಮ್ಮ–ತಮ್ಮ ಕ್ಷೇತ್ರವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಆಧಾರ್ ಕಾರ್ಡ್, ರೇಷನ್ ಕಾರ್ಡ್ ಮತ್ತು ಜಿಎಸ್‌ಟಿ ಇತರೆ ತಾಂತ್ರಿಕ ತೊಂದರೆಗಳಿಂದ ವಂಚಿತರಾಗಿರುವ ಅರ್ಹ ಫಲಾನುಭವಿಗಳನ್ನು ಗ್ಯಾರಂಟಿ ಯೋಜನಾ ಸಮಿತಿ ಸದಸ್ಯರುಗಳು ತಮ್ಮ ಕ್ಷೇತ್ರದಲ್ಲಿ ಗುರುತಿಸಿ ಯೋಜನೆಯ ಸೌಲಭ್ಯವನ್ನು ಒದಗಿಸಲು ಕಾರ್ಯಪ್ರವೃತರಾಗಬೇಕು ಎಂದು ನಿರ್ದೇಶನ ನೀಡಿದರು.

ಬಳಿಕ ಶಾಸಕರು ಅನ್ನಭಾಗ್ಯ, ಗೃಹಲಕ್ಷ್ಮಿ ??, ಗೃಹಜ್ಯೋತಿ, ಶಕ್ತಿಯೋಜನೆಮತ್ತುಯುವನಿಧಿ ಸೇರಿದಂತೆ ಐದು ಗ್ಯಾರಂಟಿ ಯೋಜನೆಯ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಅಂಕಿ–ಸಂಖ್ಯೆಗಳ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳನ್ನು ಹಳ್ಳಿ ಮಟ್ಟದಲ್ಲಿಯೂ ತಲುಪಿಸುವಂತಾಗಲು ಹಾಗೂ ಫಲಾನುಭವಿಗಳು ವಂಚಿತರಾಗದಂತೆ ನೋಡಿಕೊಳ್ಳಬೇಕು. ಈ ಕುರಿತು ಸಾಕಷ್ಟು ಪ್ರಚಾರ ನೀಡಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಿರುಗುಪ್ಪ ತಾಲ್ಲೂಕು ಅಧ್ಯಕ್ಷ ಮಾರುತಿ ರೆಡ್ಡಿ ವರಪ್ರಸಾದ್, ಉಪಾಧ್ಯಕ್ಷ ಕರಿಬಸಪ್ಪ, ಸದಸ್ಯರುಗಳಾದ ಎಸ್.ಎಂ.ನಾಗರಾಜ ಸ್ವಾಮಿ, ಪಾಲಾಕ್ಷಗೌಡ, ವೆಂಕಟರೆಡ್ಡಿ, ಚನ್ನಬಸವ, ಕೆ.ವೀರೇಶ್ ನಾಯ್ಕ್, ಜಿ.ಬಸವನಗೌಡ, ಬಿ.ಎಂ. ಅಪ್ಪಾಜಿ ನಾಯಕ, ಬಿ.ಕೆ. ಹಸೇನ್, ಡಿ.ದಾನೇಶ್ವರಿ, ಅಗ್ರಹಾರ ಗೋವಿಂದ, ಎಸ್.ಶ್ಯಾಂ ಸುಂದರ್, ಬಿ.ದೊಡ್ಡ ಪರಮೇಶ್ವರಪ್ಪ, ಸಿರುಗುಪ್ಪ ತಾಪಾಂ ಇಒ ಪವನ ಕುಮಾರ್ ಎಸ್ ದಂಡಪ್ಪನವರ, ಗ್ರೇಡ್–2 ತಹಶೀಲ್ದಾರರಾದ ಸತ್ಯಮ್ಮ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು, ಉದ್ಯೋಗ ವಿನಿಮಯ ಕೇಂದ್ರ, ಜೆಸ್ಕಾಂ, ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ, ಸಿರುಗುಪ್ಪ ವಿಭಾಗ ಸಿಬ್ಬಂದಿ, ಆಹಾರ ಶಿರಸ್ತೇದಾರರು ಸೇರಿದಂತೆ ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ: ಸ್ಪೀಕರ್ ಯು.ಟಿ. ಖಾದರ್



ಮಲ್ಲಮ್ಮ ನುಡಿ ವಾರ್ತೆ

ಮಂಗಳೂರು ಫೆ. 03:ಜನಸಾಮಾನ್ಯರಿಗೆವಿಧಾನಸೌಧ ಆವರಣ ಮುಕ್ತವಾಗಿಸಿ, ಅವರಲ್ಲಿ ಓದಿನ ಬಗ್ಗೆ ಆಸಕ್ತಿ ಮೂಡಿಸುವಉದ್ದೇಶದೊಂದಿಗೆ ಫೆ.28ರಿಂದ ಮಾ.3ರವರೆಗೆ ವಿಧಾನ ಸೌಧ ಆವರಣದಲ್ಲಿ ಪುಸ್ತಕ ಮತ್ತು ಸಾಹಿತ್ಯ ಮೇಳ ಆಯೋಜಿಸಲಾಗುತ್ತಿದೆ ಎಂದು ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಅವರು ಸೋಮವಾರ ಮಂಗಳೂರು ಸರ್ಕ್ಯುಟ್ ಹೌಸ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವಿಧಾನಸೌಧದ ಆವರಣ ದಲ್ಲಿ ಫೆ.28ರಿಂದ ಮಾ.3ರವರೆಗೆ ಪುಸ್ತಕ ಮತ್ತು ಸಾಹಿತ್ಯ ಮೇಳ ನಡೆಯಲಿದೆ. ನಾಡಿನ ಸಾಹಿತಿಗಳು, ಬುದ್ದಿಜೀವಿಗಳು, ಬರಹಗಾರರು, ಸಚಿವರು, ಶಾಸಕರು ಸೇರಿದಂತೆ ಪುಸ್ತಕಗಳನ್ನು ಪ್ರೀತಿಸುವವರು ಭಾಗವಹಿಸಲಿರುವ ಈ ಮೇಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆ.28ರಂದು ಚಾಲನೆ ನೀಡಲಿದ್ದಾರೆ ಎಂದು ಹೇಳಿದರು.

ಪುಸ್ತಕ ಮೇಳದೊಂದಿಗೆ ಸಾಹಿತ್ಯ ಚರ್ಚೆ, ಗೋಷ್ಠಿ, ಪುಸ್ತಕ ಬಿಡುಗಡೆ ಕಾರ್ಯಕ್ರಮಗಳಿಗೂ ಇಲ್ಲಿ ಅವಕಾಶ ನೀಡಲಾಗಿದೆ. ಪುಸ್ತಕ ಮೇಳದ ಯಶಸ್ಸಿಗೆ ಹಿರಿಯ ಅಧಿಕಾರಿಗಳ ಸಮಿತಿ ರಚಿಸಲಾಗಿದೆ ಎಂದು ಅವರು ಹೇಳಿದರು.

ಪುಸ್ತಕ ಮೇಳದಲ್ಲಿ ಖಾಸಗಿ ಪುಸ್ತಕ ಪ್ರಕಾಶನ ಗಳಿಗೂ ಪುಸ್ತಕಗಳ ಪ್ರದರ್ಶನಕ್ಕೆ ಅವಕಾಶ ನೀಡಲಾಗುವುದು. ಲೇಖಕರು ಅಥವಾ ಸಾಹಿತಿಗಳು ತಮ್ಮ ಪುಸ್ತಕಗಳನ್ನು ಬಿಡುಗಡೆಗೊಳಿಸಲು ಅವಕಾಶ ಕಲ್ಪಿಸಲಾಗುವುದು. ಇದಲ್ಲದೆ, ಉತ್ತಮ ಸಾಹಿತ್ಯ ಕೃತಿಗೆ ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದೆ ಎಂದು ಸ್ಪೀಕರ್ ವಿವರಿಸಿದರು.

ಶಾಸಕರ ಅನುದಾನದಲ್ಲಿ ಖರೀದಿಗೆ ಅವಕಾಶ :


ಸ್ಪರ್ಧಾತ್ಮಕ ಪುಸ್ತಕಗಳು ಸೇರಿದಂತೆ ನಾನ ಪ್ರಕಾರದ ಬೇಡಿಕೆಯ ಪುಸ್ತಕಗಳನ್ನು ಶಾಸಕರ ಇಲ್ಲಿ ಖರೀದಿಸಿ ತಮ್ಮ ಕ್ಷೇತ್ರಗಳಲ್ಲಿನ ಗ್ರಂಥಾಲಯಗಳು, ಸರಕಾರಿ ಕಾಲೇಜುಗಳಿಗೆ ಪೂರೈಸಬಹುದು. ಇದಕ್ಕೆ ಪೂರಕವಾಗಿ ಶಾಸಕ ನಿಧಿಯಲ್ಲಿನ 2ರಿಂದ 3 ಲಕ್ಷರೂ. ವರೆಗೆ ಪುಸ್ತಕಗೆ ಖರೀದಿಗೆ ಅವಕಾಶ ಮಾಡಿಕೊಡಲಾಗುವುದು ಎಂದು ಸಭಾಧ್ಯಕ್ಷರು ಹೇಳಿದರು.

ಪುಸ್ತಕ ಮೇಳದ ಅವಧಿಯಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗುವುದು, ಮೇಳದ ಸಂದರ್ಭದಲ್ಲಿ ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. ಇಲ್ಲಿ ಭೇಟಿ ನೀಡುವವರಿಗೆ ತರಹೇವಾರಿ ತಿಂಡಿ–ಖಾದ್ಯಗಳನ್ನು ಒಳಗೊಂಡ ಆಹಾರ ಮೇಳವೂ ಇರಲಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗುವುದು. ವಿಚಾರಗೋಷ್ಠಿಗಳು, ಚರ್ಚೆಗಳೂ ನಡೆಯಲಿವೆ ಎಂದು ಯು.ಟಿ. ಖಾದರ್ ತಿಳಿಸಿದರು.

ಲಾಂಛನ ವಿನ್ಯಾಸ ಆಹ್ವಾನ:

ನಾಲ್ಕುದಿನಗಳ ಪುಸ್ತಕ–ಸಾಹಿತ್ಯ ಮೇಳಕ್ಕೆ ಸಂಬಂಧಪಟ್ಟಂತೆ ಪ್ರಶಸ್ತಿ ನೀಡಲು ಹಾಗೂ ಲಾಂಛನ ವಿನ್ಯಾಸಗೊಳಿಸಲು ಉದ್ದೇಶಿಸಿದ್ದು, ಈ ಸಂಬಂಧ ಸಾರ್ವಜನಿಕರಿಗೆ ಮುಕ್ತ ಆಹ್ವಾನ ನೀಡಿದೆ. ಪ್ರಶಸ್ತಿಗೆ ಸೂಕ್ತ ಹೆಸರನ್ನು ಹಾಗೂ ಪುಸ್ತಕ ಮೇಳದ ಲಾಂಛನವನ್ನು ಕಳುಹಿಸಬಹುದು. ಆಯ್ಕೆಯಾಗುವವರಿಗೆ ಬಹುಮಾನ ನೀಡಲಾಗುವುದು. ಆಸಕ್ತರು ಪುಸ್ತಕ ಮೇಳಕ್ಕೆ ಸರಿಹೊಂದುವ ಲಾಂಛನವನ್ನು ವಿನ್ಯಾಸಗೊಳಿಸಿ ಹಾಗೂ ಪ್ರಶಸ್ತಿಯ ಹೆಸರನ್ನು ತಮ್ಮ ವಿವರಗಳೊಂದಿಗೆ ಫೆಬ್ರವರಿ 3 ರೊಳಗೆ ಇಮೇಲ್ secy-kla-kar@nic.in ಅಥವಾ ವಾಟ್ಸಾಪ್ ಸಂ–ಖ್ಯೆ 9448108798 ಇದಕ್ಕೆ ಕಳುಹಿಸಬಹುದು ಎಂದು ವಿಧಾನಸಭಾಧ್ಯಕ್ಷರು ತಿಳಿಸಿದರು.

## ಕಳಪೆ ಬೀಜ, ಗೊಬ್ಬರಗಳ ವಿತರಣೆ ಬೇಡ–ಸಚಿವರ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.3–ರೈತರಿಗೆ ನೀಡಲಾಗುವ ಬೀಜ, ಗೊಬ್ಬರ, ಯಂತ್ರೋಪಕರಣಗಳಗುಣಮಟ್ಟದ ಬಗ್ಗೆ ಎಚ್ಚರಿಕೆ ವಹಿಸಬೇಕು ಮತ್ತುಕಳಪೆಯಾದಂತವುಗಳನ್ನು ವಿತರಿಸಬಾರದುಎಂದುಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶನಿವಾರಜಿಲ್ಲಾಪಂಚಾಯತ್ ನೂತನ ಸಭಾಭವನದಲ್ಲಿ ಜರುಗಿದ ಮುಂದುವರೆದ ಮೂರನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಇಲಾಖೆಯಡಿ ಬರುವ ಕೆಲವು ಯೋಜನೆಗಳನ್ನು ಎಸ್.ಸಿ/ಎಸ್.ಟಿ. ವರ್ಗದ ಹೆಸರು ಹೇಳಿಕೊಂಡು ಕೆಲವು ದುರುಳರು ದುರ್ಬಳಕೆ ಮಾಡುತ್ತಿದ್ದಾರೆ. ಇಂತಹವರನ್ನು ಶೀಘ್ರವಾಗಿ ಪತ್ತೆಹಚ್ಚಿ, ಅವರ ವಿರುದ್ಧ ಕಠಿಣ ಕ್ರಮಕೈಗೊಳ್ಳಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳನ್ನು ಸೂಚಿಸಿದರು.

ಸರ್ಕಾರದ ಯೋಜನೆಗಳು ಫಲಾನುಭವಿಗಳಿಗೆ ನಿಜವಾಗಿಯೂ ತಲುಪುತ್ತಿವೆಯೇ ಎಂಬುದರ ಕುರಿತು ಪರಿಶೀಲನೆ ನಡೆಸುವುದು ಅಗತ್ಯವಾಗಿದ್ದು, ಫಲಾನುಭವಿಗಳ ಮನೆಗೆ ಭೇಟಿ ನೀಡಿ ಅವರಿಂದ ನೇರ ಫೀಡ್‌ಬ್ಯಾಕ್ ಪಡೆದು ವರದಿ ತಯಾರಿಸಬೇಕು ಎಂದು ಸೂಚಿಸಿದ ಸಚಿವರು, ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನ ಹೇಗೆ ನಡೆಯುತ್ತಿದೆ ಎಂಬುದರ ಸಮಗ್ರ ತನಿಖೆ ನಡೆಸಿ, ಅದರ ಬಗ್ಗೆ ಸ್ಪಷ್ಟ ವರದಿ ಸಿದ್ಧಪಡಿಸಬೇಕು ಎಂದರು.

ತೊಗರಿ ಮತ್ತು ಕಡಲೆ ಬೆಳೆಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲಾಗುತ್ತಿದ್ದರೂ ಖರೀದಿ ಕೇಂದ್ರಗಳಲ್ಲಿ ಸಾಕಷ್ಟು ಸಮಸ್ಯೆ ಉಂಟಾಗುತ್ತಿವೆ, ರೈತರ ಗೋಳನ್ನು ಅರ್ಥ ಮಾಡಿಕೊಂಡು ಸಮಸ್ಯೆ ಪರಿಹರಿಸಿ ಎಂದು ಹೇಳಿದರು.

ಕುಡಿಯುವ ನೀರಿನ ಪೈಪುಗಳ ಗುಣಮಟ್ಟದ ಮೇಲೆ ಅಧಿಕಾರಿಗಳು ಗಮನಹರಿಸಬೇಕು. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೈಪುಗಳ ಅಳವಡಿಕೆ ಮತ್ತು ಅವುಗಳ ಗುಣಮಟ್ಟದ ಬಗ್ಗೆ ನಿಗಾ ವಹಿಸಬೇಕಾಗಿದೆ. ಪೈಪು ಅಳವಡಿಕೆ ವೇಳೆ ರಸ್ತೆಗಳನ್ನು ಅಗೆಯಲಾಗುತ್ತದೆ. ಅದನ್ನು ತಕ್ಷಣ ಮುಚ್ಚುವ ಕ್ರಮ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಕೃಷಿ, ಗ್ರಾಮೀಣ ಕುಡಿಯುವ ನೀರು ಮತ್ತು ಸರ್ಕಾರಿ ಯೋಜನೆಗಳ ಪ್ರಾಮಾಣಿಕ ಕಾರ್ಯನಿರ್ವಹಣೆಗೆ ಸೂಕ್ತ ತೀರ್ಮಾನಗಳನ್ನು ಕೈಗೊಳ್ಳಲು ಈ ಸಭೆ ಒಳ್ಳೆಯ ವೇದಿಕೆಯಾಗಿದೆಯೆಂದು ಸಚಿವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಶಾಸಕರಾದ ಎಚ್.ವೈ.ಮೇಟಿ, ಜೆ.ಟಿ.ಪಾಟೀಲ, ವಿಜಯಾನಂದ ಕಾಶಪ್ಪನವರ, ಬಿ.ಬಿ.ಚಿಮ್ಮನಕಟ್ಟಿ, ಸಿದ್ದು ಸವದಿ, ವಿಧಾನಪರಿಷತ್ ಸದಸ್ಯರಾದ ಉಮಾಶ್ರೀ, ಹಣಮಂತ ನಿರಾಣಿ, ಪಿ.ಎಚ್.ಪೂಜಾರ ಹಾಗೂ ಜಿಲ್ಲಾಧಿಕಾರಿ ಕೆ.ಎಂ. ಜಾನಕಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಸೇರಿದಂತೆ ಇತರರು ಇದ್ದರು

## ಗ್ರಾಮ –1 ಯೋಜನೆಯ ಅನುಷ್ಠಾನ : ಮರು ಅಧಿಸೂಚನೆ

ಮಲ್ಲಮ ನುಡಿ ವಾರ್ತೆ

ಕೊಪ್ಪಳ:ಫೆ.3:ಕೊಪ್ಪಳಜಿಲ್ಲೆಯಲ್ಲಿ ಗ್ರಾಮ–1 ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಟಾನಗೊಳಿಸುವಸಲುವಾಗಿ ಕುಷ್ಟಗಿ ತಾಲೂಕಿನ ಚಳಗೇರಾ ಗ್ರಾಮ ಪಂಚಾಯತ್, ಗಂಗಾವತಿ ತಾಲೂಕಿನ ಚಿಕ್ಕಬೆಣಕಲ್ಲ, ಕುಕನೂರು ತಾಲೂಕಿನ ಕುದರಿಮೋತಿ ಮತ್ತು ಕನಕಗಿರಿ ತಾಲೂಕಿನ ಜೀರಾಳ ಒಳಗೊಂಡಂತೆ ಈ 4 ಗ್ರಾಮ ಪಂಚಾಯತ್‌ನಲ್ಲಿ ಮರು ಅಧಿಸೂಚನೆಯನ್ನು ಸರ್ಕಾರವು ಹೊರಡಿಸಿರುತ್ತದೆ.

ಪ್ರಯುಕ್ತಆಯಾಪಂಚಾಯತಿಗಳ ವ್ಯಾಪ್ತಿಯಲ್ಲಿರುವ ವಿದ್ಯಾವಂತ ಆಸಕ್ತರು ಗ್ರಾಮ–1 ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಇಚ್ಛಿಸಿದಲ್ಲಿ ಪೋರ್ಟಲ್ https://kal-mys.gramaone.karnataka.gov.in ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಫೆಬ್ರವರಿ 15 ರವರೆಗೆ ಅವಕಾಶ ಕಲ್ಪಿಸಿದ್ದು, ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಎಲ್ಲರ ವಿಶ್ವಾಸದೊಂದಿಗೆ ಆಡಳಿತ ನೀಡಲಿದ್ದೇವೆ



ಮಲ್ಲಮ ನುಡಿ ವಾರ್ತೆ

ತಾಳಿಕೋಟಿ:ಫೆ.3: ಪಟ್ಟಣದ ಪ್ರತಿಷ್ಠಿತ ತಾಳಿಕೋಟಿ ಸಹಕಾರಿ ಬ್ಯಾಂಕ್ ಇದರ ಆಡಳಿತ ಮಂಡಳಿಗೆ ನೂತನ ಅಧ್ಯಕ್ಷ ಉಪಾಧ್ಯಕ್ಷರಅವಿರೋಧಆಯ್ಕೆ ಸೋಮವಾರ ನಡೆಯಿತು. ಚುನಾವಣಾ ಅಧಿಕಾರಿ ಚೇತನ್ ಭಾವಿಕಟ್ಟಿ ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷ ಕಾಶಿನಾಥ ಚಂದಪ್ಪ ಸಜ್ಜನ( ಬಿದರಕುಂದಿ) ಉಪಾಧ್ಯಕ್ಷ ಚಿಂತಪ್ಪಗೌಡ ಸಾಹೇಬಗೌಡ ಯಾಳಗಿ ಅವರ ಹೆಸರನ್ನು ಘೋಷಣೆ ಮಾಡಿದರು. ಸದರಿ ಸ್ಥಾನಗಳ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕಾಶಿನಾಥ ಸಜ್ಜನ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆಚಿಂತಪ್ಪಗೌಡ ಯಾಳಗಿ ಇವರಿಬ್ಬರೆನಾಮಪತ್ರಸಲ್ಲಿಸಿದ್ದರು. ಎರಡು ಸ್ಥಾನಕ್ಕೆ ಯಾವುದೇ ಪ್ರತಿಸ್ಪರ್ಧಿ ನಾಮಪತ್ರಸಲ್ಲಿಸದ ಕಾರಣ ಎರಡೂ ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ಮಾಡಲಾಯಿತು ಚುನಾವಣಾ ಪ್ರಕ್ರಿಯೆಯಲ್ಲಿ ಎಲ್ಲಾ 13 ಜನ ನಿರ್ದೇಶಕರು ಹಾಜರಿದ್ದರು. ಈ ಸಂದರ್ಭದಲ್ಲಿ ಬ್ಯಾಂಕಿನ ನೂತನಅಧ್ಯಕ್ಷಕಾಶಿನಾಥಸಜ್ಜನ ಮಾತನಾಡಿ ಎಲ್ಲನಿರ್ದೇಶಕರು ನಮ್ಮಿಬ್ಬರ ಮೇಲೆ ವಿಶ್ವಾಸವಿಟ್ಟು ಅವಿರೋಧವಾಗಿಆಯ್ಕೆಯಾಗಲು ಸಹಕರಿಸಿದ್ದಾರೆ ಅವರ ಈ ವಿಶ್ವಾಸಕ್ಕೆ ಚುತಿ ಬಾರದ ಹಾಗೆ ಹಿರಿಯರು ಹಾಕಿಕೊಟ್ಟಹೋದ ಮಾರ್ಗದಲ್ಲಿಯೇ ಬ್ಯಾಂಕಿನ ಅಭಿವೃದ್ಧಿಗಾಗಿ ಶಕ್ತಿ ಮೀರಿ ಪ್ರಯತ್ನಿಸುತ್ತೇವೆ ಎಂದರು. ಉಪಾಧ್ಯಕ್ಷರಾಗಿಅವಿರೋಧವಾಗಿ ಆಯ್ಕೆಯಾದ ಚಿಂತಪ್ಪಗೌಡ ಯಾಳಗಿ ಅವರು ಆಯ್ಕೆಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು. ನೂತನವಾಗಿಆಡಳಿತ ಮಂಡಳಿಗೆ ಆಯ್ಕೆಯಾದ ನಿರ್ದೇಶಕರಾದ ದತ್ತಾತ್ರೇಯ ಹೆಬಸೂರ,ಎಂ.ಎಸ್.ಸರಶೆಟ್ಟಿ, ಈಶ್ವರಪ್ಪ ಬಿಳೇಭಾವಿ, ಬಾಬು ಹಜೇರಿ, ಸುರೇಶ ಪಾಟೀಲ, ಪ್ರಹ್ಲಾದಸಿಂಗ್ ಹಜೇರಿ,ಡಿ. ಕೆ. ಪಾಟೀಲ, ಗಿರಿಜಾಬಾಯಿ ಬಸಯ್ಯಕೊಡಗಾನೂರ,ಶೈಲಾ ವಿಶ್ವನಾಥ ಬಡದಾಳಿ, ರಾಮಣ್ಣ ಕಟ್ಟಿಮನಿ,ಸಂಜೀವಪ್ಪಬರದೇನಾಳ ಹಾಗೂ ಚುನಾವಣಾಧಿಕಾರಿ ಚೇತನ ಭಾವಿಕಟ್ಟಿ, ಸಹಾಯಕ ಚುನಾವಣಾಧಿಕಾರಿ ಆರ್.ಬಿ.ಧವಮ್ಮೊರಮಠ ಇವರಿಗೆ ಬ್ಯಾಂಕಿನ ವ್ಯವಸ್ಥಾಪಕಿ ಶ್ರೀಮತಿ ಬಿ.ಕೆ. ಮಣೂರ ಹಾಗೂ ಸಿಬ್ಬಂದಿಗಳು ಕೂಡಿ ಸನ್ಮಾನಿಸಿ ಗೌರವಿಸಿದರು. ಇದೇ ಸಂದರ್ಭದಲ್ಲಿ ಆಯ್ಕೆಯಾದ ಎಲ್ಲಾ 13 ಜನ ನೂತನ ನಿರ್ದೇಶಕರಿಗೆಸದಸ್ಯತ್ವಪ್ರಮಾಣ ಪತ್ರ ವಿತರಿಸಲಾಯಿತು. ಈ ಸಮಯದಲ್ಲಿ ಮುಖಂಡರಾದ ಬಿ.ಎಸ್.ಪಾಟೀಲ(ಯಾಳಗಿ), ವಿ.ವಿ.ಸಂಘದ ಅಧ್ಯಕ್ಷ ವಿ.ಸಿ. ಹಿರೇಮಠ, ಹನುಮಂತ್ರಾಯ ಬಾಗೇವಾಡಿ,ಕಾಶಿನಾಥಮುರಾಳ ಇದ್ದರು.

# ರಾಜ್ಯಪಾಲರ ಪುರಸ್ಕಾರಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.3:ನಗರದ ಬಿವಿವಿ ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದ ವಿದ್ಯಾರ್ಥಿಗಳು ರಾಜ್ಯಪಾಲರಿಂದಕೊಡಮಾಡುವ 2023-24ನೇ ಸಾಲಿನ ಭಾರತ ಸ್ಕೌಟ್ ಮತ್ತು ಗೈಡ್ ಸಂಸ್ಥೆಯ ರಾಜ್ಯ ಪುರಸ್ಕಾರ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ರೇಂಜರ್ ಸ್ಫೂರ್ತಿ ತುರಡಗಿ, ಪ್ರಿಯಾ ಹಳಿಂಗಳಿ, ಐಶ್ವರ್ಯ ಸಿ.ಜೆ ಮತ್ತು ಪ್ರಿಯಾ ಆಸಂಗಿ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಈ ವಿದ್ಯಾರ್ಥಿನಿಯರನ್ನು ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಆಡಳಿತಾಧಿಕಾರಿಗಳಾದ ಡಾ.ವ್ಹಿ. ಎಸ್.ಕಟಗಿಹಳ್ಳಿಮಠ, ಪ್ರೊ. ವ್ಹಿ.ಆರ್.ಶಿರೋಳ ಹಾಗೂ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜೆ.ಒಡೆಯರ ಹಾಗೂ ಕಾಲೇಜಿನ ಸಿಬ್ಬಂದಿ ಅಭಿನಂದಿಸಿದ್ದಾರೆ.

# ನರೇಗಾ ಬಡ ಕುಟುಂಬಗಳಿಗೆ ಆಸರೆ:ಸಂಪಗಾವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.3- ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಬಡ ಕೂಲಿಕಾರ್ಮಿಕ ಕುಟುಂಬಗಳಿಗೆ ಉದ್ಯೋಗ ಒದಗಿಸಿ ಅವರಿಗೆ ಆಹಾರ ಭದ್ರತೆ ನೀಡಿ ಜೀವನೋಪಾಯ ಮಾಡಲು ಅಸರೆಯಾಗಿದೆ ಎಂದು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷಸಂಪಗಾವಿ ಹೇಳಿದರು.

ನರೇಗಾ ದಿನಾಚರಣೆ ಅಂಗವಾಗಿರವಿವಾರ ಸಮೀಪದ ಮುಗಳೊಳ್ಳಿ ಗ್ರಾಪಂ ವ್ಯಾಪ್ತಿಯ ಹೊನ್ನಾಕಟ್ಟಿಗ್ರಾಮದ ಅಮೃತ ಸರೋವರ ಅಂಗಳದಲ್ಲಿ ಜರುಗಿದ ನರೇಗೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೂಲಿ ಕಾರ್ಮಿಕರು ನರೇಗಾ ಯೋಜನೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಕುಟುಂಬ ನಿರ್ವಹಣೆಯೊಂದಿಗೆ ಜೀವನೋಪಾಯ ಮಾಡಬೇಕು ಎಂದರು.

ತಾಪಂ ಸಹಾಯಕ ನಿರ್ದೇಶಕರಾದ ಅರ್ಚನಾ ಕುಲಕರ್ಣಿ ಮಾತನಾಡಿ, ನರೇಗಾ ಯೋಜನೆಯ ಪ್ರಯೋಜನಗಳನ್ನು ವಿವರಿಸಿ, ಕೂಲಿಕಾರ್ಮಿಕರು ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆಯಿತ್ತರು.

ಕೂಲಿ ಕಾರ್ಮಿಕ ಮಹಿಳೆ ನೀಲಮ್ಮ ಜೋಗಿ ಅನಿಸಿಕೆ ವ್ಯಕ್ತಪಡಿಸಿ ನರೇಗಾ ಯೋಜನೆಯಿಂದ ತಮ್ಮ ಮಕ್ಕಳ ಶಿಕ್ಷಣಕ್ಕೆ ಆಗಿರುವ ಅನುಕೂಲತೆ ಹಾಗೂ ಕುಟುಂಬ ನಿರ್ವಹಣೆಗಾದ ಪ್ರಯೋಜನವನ್ನು ತಿಳಿಸಿದರು. ಇದೇ ಸಂದರ್ಭದಲ್ಲಿ ನರೇಗಾ ಯೋಜನೆಯಡಿ 100 ದಿನಗಳ ಕೂಲಿ ಪೂರೈಸಿದ ಕೂಲಿ ಕಾರ್ಮಿಕರಿಗೆ ಪ್ರಮಾಣ ಪತ್ರ ನೀಡಿ ಸತ್ಕರಿಸಲಾಯಿತು.

ಗ್ರಾಪಂ ಪಿಡಿಓ ಆರ್. ಎಚ್.ನದಾಫ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಪಂ ಅಧ್ಯಕ್ಷೆ ಜ್ಯೋತಿ ಚಂದ್ರಶೇಖರ ಲಮಾಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸದಸ್ಯರಾದ ತುಕ್ಕಪ್ಪ ಗಲಗಲಿ, ರಾಮವ್ವ ವಾಲೀಕಾರ, ಸತ್ಯವ್ವ ಬೆಲ್ಲದಡಿ, ಜಿಲ್ಲಾ ಐಇಸಿ ಸಂಯೋಜ-ಕರು, ನರೇಗಾ ಯೋಜನೆಯ ವಿವಿಧ ಹಂತದ ಸಿಬ್ಬಂದಿ, ಗ್ರಾಪಂ ಸಿಬ್ಬಂದಿ ಇದ್ದರು.

# ಕಾರ್ಮಿಕರು ನರೇಗಾ ಯೋಜನೆ ಸದ್ಬಳಕೆ ಮಾಡಿಕೊಳ್ಳಿ:ಎಡಿ ಚವ್ಹಾಣ



ನೂರ ದಿನ ಪೂರೈಸಿದ ಕಾರ್ಮಿಕರಿಗೆ ಸನ್ಮಾನ: ನರೇಗಾ ನೂರು ದಿನ ಪೂರೈಸಿದ ಕೂಲಿ ಕಾರ್ಮಿಕರಿಗೆ ಸನ್ಮಾನಿಸಲಾಯಿತು ಹಾಗೂ ನೂತನ ಕಾರ್ಮಿಕರಿಗೆ ಜಾಬ್ ಕಾಡ9 ವಿತರಿಸಲಾಯಿತು. ನಂತರ ನರೇಗಾ ಯೋಜನೆಯಡಿ ಅನುಷ್ಠಾನ ಗೊಂಡ ಕಾಮಗಾರಿಗಳನ್ನು ತಾ.ಪಂ.ಸ.ನಿ.ಸಂತೋಷ ಚವ್ಹಾಣ ಸರ್ ಪರಿಶೀಲಿಸಿದರು.


ಬಸವಕಲ್ಯಾಣ:ಫೆ.3:ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ದೊಡ್ಡಯೋಜನೆಯಾಗಿದ್ದು, ನರೇಗಾ ಕಾರ್ಮಿಕರು ಇದರ ಸದುಪಯೋಗಪಡೆದುಕೊಳ್ಳುವ ಮೂಲಕ ಸ್ವಾವಲಂಬಿ ಜೀವನ ಸಾಧಿಸಬೇಕು ಎಂದು ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಸಂತೋಷ ಚವ್ಹಾಣ ಹೇಳಿದರು.

ತಾಲ್ಲೂಕಿನ ಮೊರಖಂಡಿ ಗ್ರಾಮದಲ್ಲಿ ಗ್ರಾಮ ಪಂಚಾಯತ್ ವತಿಯಿಂದ ಶನಿವಾರ ಹಮ್ಮಿಕೊಂಡ ನರೇಗಾ ದಿನಾಚರಣೆ ಕಾರ್ಯಕ್ರಮವನ್ನು ಕೇಕ್ ಕತ್ತರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿ, ಪ್ರಾರಂಭದಲ್ಲಿ ಬಹಳಷ್ಟು ಅಡತಡೆಗಳಿದ್ದವು. ಆದರೆ ಇಗ ಯಾವುದೇ ಸಮಸ್ಯೆ ಇಲ್ಲ. ನೀವು ಮಾಡಿದ ಕೂಲಿ ಮೊತ್ತ ನೇರವಾಗಿ ನಿಮ್ಮ ಖಾತೆಗೆ ಜಮಾ ಮಾಡಲಾಗುತ್ತಿದೆ. ಇದ-ರಿಂದ ಸಾಕಷ್ಟು ಕುಟುಂಬಗಳು ಉತ್ತಮವಾದ ಜೀವನ ಸಾಗಿಸುತ್ತಿದ್ದಾರೆ. ಹೀಗಾಗಿ ಕೂಲಿ ಕಾರ್ಮಿಕರು ಇನ್ನೂ ಹೆಚ್ಚಿನ ರೀತಿಯಲ್ಲಿ ಇದರ ಲಾಭ ಪಡೆದುಕೊಳ್ಳಬೇಕು. ಇದಕ್ಕೆ ಬೇಕಾದ ಸಹಕಾರ ನಾವು ನೀಡುತ್ತೇವೆ ಎಂದರು. ನಂತರ ಗ್ರಾ.ಪಂ.ಉಪಾಧ್ಯಕ್ಷರಾದ ಸಂಜು ಗಾಯಕವಾಡ ಅವರು ಮಾತನಾಡಿ, ಉದ್ಯೋಗ ಖಾತ್ರಿ ಬಂದಾಗಿನಿಂದಲೂ ಗ್ರಾಮೀಣ ಜೀವನ ಬದಲಾವಣೆ ಆಗುವುದರ ಜೊತೆಗೆ, ಗ್ರಾಮದಲ್ಲಿ ರಸ್ತೆ, ಚರಂಡಿ, ಸೇರಿದಂತೆ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈ ಗೊಳ್ಳಲಾಗಿದೆ ಎಂದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತರೆಡ್ಡಿ ಮಾಲಿಪಾಟೀಲ್ ಮಾತನಾಡಿ, ನರೇಗಾ ದಿನಾಚರಣೆ ಉದ್ದೇಶ ಮತ್ತು ಮಹತ್ವದ ಬಗ್ಗೆ ಸವಿಸ್ತಾರವಾಗಿ ತಿಳಿಸಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಕಾ. ವೀರನಾಥ, ಬಾಲಾಜಿ ಬೋಗಳೆ, ಗಜಾನಂದ ಖೀಲಾರೆ, ಜಯರಾಜ ಬೂಚಾರ, ನಿಂಗಪ್ಪಾ ಕಲ್ಯಾಣಿ, ಸಂತೋಷ ಉಸ್ತುರೆ, ಬಾಲಾಜಿ ಜಾಧವ, ಐಇಸಿ ಸಂಯೋಜಕ ವೀರಾರೆಡ್ಡಿ, ತಾಂತ್ರಿಕ ಸಹಾಯಕರಾದ ಅವಿನಾಶ, ಇಸ್ಮಾಯಿಲ್, ಬಿ.ಸಿ.ರೋಹಿಣಿ ಸೇರಿದಂತೆ ಗ್ರಾಮಸ್ಥರು ಇದ್ದರು.

# ಇಂದು ಬೇವೂರು ಗ್ರಾಮದಲ್ಲಿ ಜನಸ್ಪಂದನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.3: ಕೊಪ್ಪಳ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ತಾಲ್ಲೂಕು ಮಟ್ಟದ "ಜನ ಸ್ಪಂದನಾ" ಕಾರ್ಯಕ್ರಮವು ಫೆಬ್ರವರಿ 4ರ ಮಂಗಳವಾರ ಯಲಬುರ್ಗಾ ತಾಲೂಕಿನ ಬೇವೂರು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿನ ಸಾರ್ವಜನಿಕರ ಕುಂದುಕೊರತೆಗಳನ್ನು ಶೀಘ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಾಲ್ಲೂಕು ಮಟ್ಟದಲ್ಲಿ 'ಜನ ಸ್ಪಂದನಾ' ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಜಂಟಿಯಾಗಿ ತಾಲ್ಲೂಕು ಮಟ್ಟದಲ್ಲಿ ಹಮ್ಮಿಕೊಳ್ಳಲು ತಿಳಿಸಿದಂತೆ, ಜನ ಸ್ಪಂದನಾ ಕಾರ್ಯಕ್ರಮವನ್ನು ಫೆ. 4ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ಬೇವೂರು ಗ್ರಾಮದ ಬುದ್ದ ಬಸವ ಅಂಬೇಡ್ಕರ್ ಭವನದಲ್ಲಿ ಜನಸ್ಪಂದನ ಕಾರ್ಯಕ್ರಮ ಆಯೋಜಿಸಲಾಗಿರುತ್ತದೆ.

ಈ "ಜನ ಸ್ಪಂದನಾ" ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಿ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಲು ಹಾಗೂ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೀರಾಪೂರ-3ನೇ ಅಂಗನವಾಡಿ ಕೇಂದ್ರ ಉದ್ಘಾಟನೆ

ಕಲಬುರಗಿ,ಫೆ.3:ಕೆ.ಕೆ.ಆರ್.ಡಿ.ಬಿ. ಅನುದಾನದಡಿ ನೂತನವಾಗಿ ನಿರ್ಮಿಸಿರುವ ಕಲಬುರಗಿಯ ಹೀರಾಪೂರ-3ನೇ ಅಂಗನವಾಡಿ ಕೇಂದ್ರವನ್ನು ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಇತ್ತೀಚೆಗೆ ಉದ್ಘಾಟಿಸಿದರು. ನಂತರ ಅವರು ಮಾತನಾಡಿ, ಕಡ್ಡಾಯವಾಗಿ ಎಲ್ಲರೂ ತಮ್ಮ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸಬೇಕು. ಮಕ್ಕಳು ಮೊದಲು ಅಂಗನವಾಡಿ ಕೇಂದ್ರಗಳಲ್ಲಿ ನೀಡುವ ಶಾಲಾ ಪೂರ್ವ ಶಿಕ್ಷಣ ಪಡೆಯಬೇಕು ಎಂದರು.

ಮಹಾನಗರ ಪಾಲಿಕೆಯ ಸದಸ್ಯ ಅಲಿಮುದ್ದೀನ್ ಪಟೇಲ್ ಅವರು ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರಿಗೆ ಮೇಲಿಂದ ಮೇಲೆ ತರಬೇತಿ ನೀಡುವುದರಿಂದ ಗುಣಮಟ್ಟದ ಶಾಲಾ ಪೂರ್ವ ಶಿಕ್ಷಣ ನೀಡಲು ಅನುಕೂಲವಾಗುತ್ತದೆ ಎಂದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಭೀಮರಾಯ ಕಣ್ಣೂರು ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಬಡಾವಣೆಯ ಸಂತೋಷ ಮೇಲ್ಮನಿ, ವಿಠ್ಠಲ ಚಿಕಣಿ, ಜಗನ್ನಾಥ ಹಿಪ್ಪರಗಿ, ಶಿವಕುಮಾರ ಮದರಿ, ಶಿವಕುಮಾರ ಬಾಳಿ, ಶರಣಗೌಡ ಬಿರಾದಾರ, ಜಾವೀದ ಬೇಗ, ಹಿರಿಯ ಮೇಲ್ವಿಚಾರಕಿ ಪ್ರಭಾವತಿ ಸಾಲೋಟಗಿ, ಆಶ್ವಿನಿ ಭದ್ರಶೆಟ್ಟಿ, ಗೀತಾ ಚವ್ಹಾಣ, ಶ್ರೀಮತಿ ಶಿವಲೀಲಾ ಬಿ ಕಡಗಂಚಿ ಹಾಗೂ ವಲಯದ ಮೇಲ್ವಿಚಾರಕಿ ಮಲ್ಲಮ್ಮ ಬಿ. ಪೂಜಾರಿ ಅವರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ವೇತನ ಹಾಗೂ ಸರ್ಕಾರಿ ಶಾಲೆಗಳ ರಕ್ಷಣೆ ಕೋರಿ ಶಾಸಕರಿಗೆ ಮನವಿ

ಮಲ್ಲಮ್ಮನುಡಿ ವಾರ್ತೆ

ಕೊಪ್ಪಳ :ಫೆ.3: ಎಐಡಿಎಸಓ ವತಿಯಿಂದ ವಿದ್ಯಾರ್ಥಿ ವೇತನ ಹಾಗೂ ಸರ್ಕಾರಿ ಶಾಲೆಗಳ ರಕ್ಷಣೆ ಕೋರಿ ಶಾಸಕರಿಗೆ ಮನವಿ ಸಲ್ಲಿಸಲಾಯಿತು.




ನಂತರ ಮಾತನಾಡಿದ ಎಐಡಿಎಸಓ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಕಲ್ಯಾಣ್. ವಿ, ಕಳೆದ ಮೂರು ವರ್ಷಗಳಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಸರಿಯಾಗಿ ವಿದ್ಯಾರ್ಥಿ ವೇತನ ಲಭ್ಯವಾಗುತ್ತಿಲ್ಲ. ಹಿಂದುಳಿದ ಮತ್ತು ಅಲ್ಪಸಂಖ್ಯಾತ ಇಲಾಖೆ ಅಡಿಯಲ್ಲಿ ಬರುವ ಪದವಿ, ಸ್ನಾತಕೋತ್ತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಲಭ್ಯವಾಗುತ್ತಿಲ್ಲ. ರಾಜ್ಯದ ಹಲವೆಡೆ ಕೆಲವು ಎಸ್ ಸಿ/ಎಸ್ ಟಿ ವಿದ್ಯಾರ್ಥಿಗಳು ಕೂಡ ವಿದ್ಯಾರ್ಥಿ ವೇತನದಿಂದ ವಂಚಿತರಾಗಿದ್ದಾರೆ. ಒಂದೆಡೆ, ದಿನದಿಂದ ದಿನಕ್ಕೆ ಶಿಕ್ಷಣದ-ಅದರಲ್ಲೂ, ಉನ್ನತ ಶಿಕ್ಷಣದ ವೆಚ್ಚ ಅತ್ಯಂತ ಅಧಿಕವಾಗುತ್ತಿದೆ. ಆದರೆ ಇನ್ನೊಂದೆಡೆ, ಕ್ರಮೇಣವಾಗಿ ವಿದ್ಯಾರ್ಥಿ ವೇತನ ಕಡಿತಗೊಳುತ್ತಿರುವುದರಿಂದ ಅಧಿಕ ಪ್ರಮಾಣದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ದೂರ ಉಳಿಯುವ ಅನಿವಾರ್ಯತೆಗೆ ತಳ್ಳಲ್ಪಟ್ಟಿದ್ದಾರೆ. ಅದರಲ್ಲೂ ವಿದ್ಯಾರ್ಥಿ ವೇತನದ ಮೇಲೆ ಅವಲಂಬಿತರಾಗಿರುವ ರೈತ, ಕಾರ್ಮಿಕರನ್ನೊಳಗೊಂಡಂತೆ ಬಡಜನರ ಮಕ್ಕಳ ಶಿಕ್ಷಣದ ಕನಸುಗಳು ಇದರಿಂದ ಛಿದ್ರಗೊಳ್ಳುತ್ತಿವೆ. ರಾಜ್ಯ ಸರ್ಕಾರವು ಈ ಕುರಿತು ಸೂಕ್ತ ಪರಿಹಾರ ಒದಗಿಸಬೇಕೆಂಬುದು ರಾಜ್ಯದ ವಿದ್ಯಾರ್ಥಿಗಳ ಅಳಲು ಎಂದರು.

ಇತ್ತೀಚೆಗಷ್ಟೆ ರಾಜ್ಯ ಸರ್ಕಾರವು 'ಹಬ್ ಅಂಡ್ ಸ್ಪೋಕ್' ಅಡಿಯಲ್ಲಿ ಕಡಿಮೆ ಹಾಜರಾತಿ ಇರುವ ಸರ್ಕಾರಿ ಶಾಲೆಗಳನ್ನು ಇತರ ಶಾಲೆಗಳೊಂದಿಗೆ ಸಂಯೋಜಿಸುವ ನಿರ್ಧಾರವನ್ನು ಪ್ರಕಟಿಸಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಸುಧಾರಣಾ ಸಮಿತಿಯನ್ನು ಸಹ ರಚಿಸಲಾಗಿದೆ. ಪತ್ರಿಕೆಗಳಲ್ಲಿ ವರದಿಯಾಗಿರುವಂತೆ ರಾಜ್ಯದಲ್ಲಿ 4 ಸಾವಿರಕ್ಕೂ ಅಧಿಕ ಶಾಲೆಗಳು 10 ಮಕ್ಕಳಿಗಿಂತ ಕಡಿಮೆ ದಾಖಲಾತಿಯನ್ನು ಹೊಂದಿವೆ.

ಈ ಶಾಲೆಗಳ ಭವಿಷ್ಯದ ಕುರಿತು ಪಾಲಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳಲ್ಲಿ ಆತಂಕ ತಲೆದೋರಿದೆ. ಸರ್ಕಾರವು ರಾಜ್ಯದ ಬಡಜನರ ಮಕ್ಕಳ ಶಿಕ್ಷಣದ ಆಶಾಕಿರಣವಾಗಿರುವ ಸರ್ಕಾರಿ ಶಾಲೆಗಳನ್ನು ಬಲಪಡಿಸಬೇಕೆಂಬುದು ರಾಜ್ಯದ ವಿದ್ಯಾರ್ಥಿಗಳ ಆಶಯ. ಆದ್ಯತೆಯ ಮೇರೆಗೆ ಸರ್ಕಾರವು ಶಿಕ್ಷಣಕ್ಕೆ ಬಜೆಟ್ ನಲ್ಲಿ ಅನುದಾನ ನಿಗದಿಪಡಿಸಬೇಕು ಮತ್ತು ಎಲ್ಲ ವಿಭಾಗದ ಮತ್ತು ಎಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ಖಾತ್ರಿ ಪಡಿಸಬೇಕು ಹಾಗೂ ಸರ್ಕಾರಿ ಶಾಲೆಗಳನ್ನು ಸಂಯೋಜನೆಗೊಳಿಸುವ ಬದಲು ಹಾಜರಾತಿ ಕಡಿಮೆಯಿರುವ ಶಾಲೆಗಳನ್ನು ಅವಶ್ಯಕ ಸೌಲಭ್ಯ ನೀಡಿ ರಕ್ಷಿಸಬೇಕೆಂದು ಈ ಮೂಲಕ ಎಐಡಿಎಸಓ ತಮ್ಮ ಮೂಲಕ ರಾಜ್ಯ ಸರ್ಕಾರ-ಕ್ಕೆ ಆಗ್ರಹಪೂರ್ವಕ ಮನವಿ ಸಲ್ಲಿಸಲಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕರ್ತರಾದ ಸದಾಶಿವ ಇದ್ದರು. ಈ ಕುರಿತು ಒಳ್ಳೆ ಸ್ಪಂದನೆ ಶಾಸಕರು ನೀಡಿದರು.

# ಶಶಿಕಾಂತ ಶೆಂಬೆಳ್ಳಿಗೆ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪ್ರದಾನ:



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.03:ಕರ್ನಾಟಕ ಮಾಧ್ಯಮ ಅಕಾಡೆಮಿಯಿಂದ ಬೆಂಗಳೂರಿನಲ್ಲಿ ಸೊಮವಾರ ಏರ್ಪಡಿಸಿದ್ದ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು 2023ನೇ ಸಾಲಿನ ವಾರ್ಷಿಕ ಪ್ರಶಸ್ತಿಯನ್ನು ಬೀದರ್ ಜಿಲ್ಲಾ ಪ್ರಜಾವಾಣಿ ಹಿರಿಯ ವರದಿಗಾರ ಶಶಿಕಾಂತ ಎಸ್.ಶೆಂಬೆಳ್ಳಿ ಅವರಿಗೆ ಪ್ರದಾನ ಮಾಡಿದರು.

ಪ್ರಶಸ್ತಿಯು ?50 ಸಾವಿರ ನಗದು, ಪ್ರಮಾಣ ಪತ್ರ ಹೊಂದಿದೆ. ಸಮಾರಂಭದಲ್ಲಿ ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ, ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನುಂ, ಕರ್ನಾಟಕ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ವಾರ್ತಾ ಇಲಾಖೆಯ ಹೇಮಂತ ನಿಂಬಾಳ್ಕರ್, ಅಕಾಡೆಮಿಯ ಸಹನಾ ಹಾಜರಿದ್ದರು.

ಹರ್ಷ: ಪ್ರಶಸ್ತಿ ಸ್ವೀಕರಿಸಿದ ಶಶಿಕಾಂತ ಶಂಬೆಳ್ಳಿಯವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ರಾಜ್ಯ ಪರಿಷತ್ ಸದಸ್ಯರಾದ ಬಸವರಾಜ ಕಾಮಶೆಟ್ಟಿ, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರಾದ ಅಪ್ಪಾರಾವ ಸೌದಿ, ದೀಪಕ ಮನ್ನಳ್ಳಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷರುಗಳಾದ ಶ್ರೀನಿವಾಸ ಚೌದರಿ, ಅಬ್ದುಲ್ ಅಲಿ, ನಾಗಶೆಟ್ಟಿ ದರಂಪುರ, ಕಾರ್ಯದರ್ಶಿಗಳಾದ ಪೃಥ್ವಿರಾಜ, ಸುನಿಲಕುಮಾರ ಕುಲಕರ್ಣಿ, ಶ್ರೀಕಾಂತ ಬಿರಾದಾರ, ಖಜಾಂಚಿ ಎಂ.ಪಿ ಮುಧಾಳೆ, ಎಲ್ಲಾ ಜಿಲ್ಲಾ ಕಾರ್ಯಕಾರಿಣಿ ಸದಸ್ಯರು, ಜಿಲ್ಲೆಯ ಎಲ್ಲ ತಾಲೂಕು ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಸೇರಿದಂತೆ ಇತರೆ ಸದಸ್ಯರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ಅಕ್ರಮ ಅಕ್ಕಿ ಸಾಗಾಟಗಾರರ ಮೇಲೆ ಕಠಿಣ ಶಿಕ್ಷೆಗೆ ಕ್ರಮ : ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ : ಫೆ 03 : ಜಿಲ್ಲೆಯಲ್ಲಿ ಅಕ್ರಮವಾಗಿ ಅಕ್ಕಿ ಸಾಗಾಟ ಪ್ರಕರಣಗಳಲ್ಲಿ ಹೆಚ್ಚಾಗಿ ಕಂಡುಬಂದವರನ್ನು ಕಠಿಣ ಶಿಕ್ಷೆಗೆ ಗುರಿಪಡಿಸುವಂತೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಸೋಮವಾರ ಜರುಗಿದ ಮುಂದುವರೆಗೆ ಜಿ.ಪಂ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಅಕ್ರಮವಾಗಿ ಕಾಳಸಂತೆಯಲ್ಲಿ ಅಕ್ಕಿ ಮಾರಾಟ ಹಾಗೂ ಸಾಗಾಟನೆ ಸಂಪೂರ್ಣವಾಗಿ ತಡೆಯುವ ನಿಟ್ಟಿನಲ್ಲಿ ಎಷ್ಟೇ ಪ್ರಯತ್ನ ಪಟ್ಟರು ಅಕ್ರಮವಾಗಿ ಸಾಗಾಟ ಮಾಡುವವರು ರಂಗೋಲಿ ಕೆಳಗೆ ನುಗ್ಗುವ ಪ್ರಯತ್ನ ಮಾಡುತ್ತಿದ್ದು, ಅಂತವರ ವಿರುದ್ಧ ಕಠಿಣ ಶಿಕ್ಷೆಗೆ ಗುರುಪಡಿಸಲು ಮುಂದಾಗಿರುವುದಾಗಿ ಸಚಿವರು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಅನಧಿಕೃತವಾಗಿ ಅಕ್ಕಿ ಸಾಗಾಟ ತಡೆಗೆ ಚೆಕ್ ಪೋಸ್ಟ ಮಾಡಲು ತಿಳಿಸಿದರು. ಈಗಾಗಲೇ ಅಕ್ರಮ ಕಾಳಸಂತೆ ಮಾಡುವವರ ವಿರುದ್ಧ 17 ಪ್ರಕರಣ ದಾಖಲಿಸಿಕೊಂಡು 1020 ಕ್ವಿಂಟಲ್ ಅಕ್ಕಿ ಹಾಗೂ 12 ವಾಹನಗಳನ್ನು ಜಪ್ತ ಮಾಡಲಾಗಿದೆ. 29 ಆರೋಪಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ಹಾಕಲಾಗಿದೆ. ಹೋಟೆಲ್‌ನಲ್ಲಿ ಅಕ್ರಮವಾಗಿ ಗೃಹಬಳಕೆಯ ಸಿಲೆಂಡರ ಬಳಕೆ ಮಾಡುತ್ತಿದ್ದವರ ಮೇಲೆ 22 ಪ್ರಕರಣ ದಾಖಲಿಸಿ ಉಪ ವಿಭಾಗಾಧಿಕಾರಿಗಳ ಹಂತದಲ್ಲಿ ವಿಚಾರಣೆಗೆ ತೆ–ಗೆದುಕೊಂಡಿದ್ದಾರೆ. ಅಲ್ಲದೇ ಜಿಲ್ಲೆಯಲ್ಲಿ 1140 ಅನರ್ಹ ಬಿಪಿಎಲ್ ಪಡಿತರ ಚೀಟಿ ಹೊಂದಿದವರನ್ನು ಪತ್ತೆ ಹಚ್ಚಿ 12 ಲಕ್ಷ ರೂ.ಗಳನ್ನು ದಂಡ ವಿಧಿಸಲಾಗಿದೆ ಎಂದು ತಿಳಿಸಿದರು.


ಸಣ್ಣನೀರಾವರಿ ಇಲಾಖೆಯಡಿ ತುಳಸಿಗೆರೆ ಕೆರಯಲ್ಲಿ ನೀರು ತುಂಬಿಸುವದರ ಜೊತೆಗೆ ಇತರೆ ಕೆರೆಗಳನ್ನು ತುಂಬಿಸುವ ಕಾರ್ಯವಾಗಬೇಕು. ನಬಾರ್ಡ ಯೋಜನೆಯಡಿ ಕೆರೆಗಳ ಆಧುನಿಕರಣ, ಆಣೆಕಟ್ಟುಗಳ ನಿರ್ಮಾಣ, ಏತ ನೀರಾವರಿ ಯೋಜನೆ, ಚೆಕ್‌ಡ್ಯಾಂ, ಪ್ರವಾಹ ಸಂರಕ್ಷಣಾ ಕಾಮಗಾರಿಗಳ ಬಗ್ಗೆ ಸಂಪೂರ್ಣ ಮಾಹಿತಿ ಸಭೆಗೆ ನೀಡದಿರುವದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿ ಸಭೆಗೆ ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು. ಕೈಗೊಂಡ ಪ್ರತಿಯೊಂದು ಕಾಮಗಾರಿಗಳ ಬಗ್ಗೆ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾಹಿತಿ ಪುಸ್ತಕದಲ್ಲಿ ಕೇವಲ ಹೆಸ್ಕಾಂ ಇಲಾಖೆಯ ಬಗ್ಗೆ ಮಾತ್ರ ಮಾಹಿತಿ ಇದೆ. ಆದರೆ ಕೆಪಿಟಿಸಿಎಲ್ ಮಾಹಿತಿ ಏಕೆ ಇಲ್ಲ. ತಮ್ಮ ತಮ್ಮ ವ್ಯಾಪ್ತಿಯಲ್ಲಿ ಬರುವ ಕೆಲಸ ಸಂಪೂರ್ಣ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ತೋಟದ ಮನೆಗಳಿಗೆ ರಾತ್ರಿವೇಳೆ ಸಿಂಗಲ್ ಫೇಸ್ ವಿದ್ಯುತ್ ನೀಡಲು ಕ್ರಮವಹಿಸುವಂತೆ ಬೀಳಗಿ ಶಾಸಕರು ಆಗಿರುವ ಹಟ್ಟಿ ಚಿನ್ನದಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ತಿಳಿಸಿದರು. ಹೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಹಾಗೂ ಏತ ನೀರಾವರಿ ಯೋಜನೆಗಳ ಬಗ್ಗೆ ಫೆಬ್ರವರಿ 10 ರೊಳಗಾಗಿ ಪ್ರತ್ಯೇಕ ಸಭೆ ಕರೆಯಲಾಗುವುದೆಂದು ಸಚಿವರು ತಿಳಿಸಿದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸರಕಾರವಿವಿಧಯೋಜನೆಗಳಿಗೆಆಯ್ಕೆ ಮಾಡಿದಫಲಾನುಭವಿಗಳಿಗೆಸಾಲ ವಿತರಿಸದೇಸತಾಯಿಸುತ್ತಿರುವುದು ಕಂಡುಬರುತ್ತಿದ್ದು, ಈ ಬಗ್ಗೆ ಸೂಕ್ತ ಕ್ರಮವಹಿಸಲು ಸೂಚಿಸಿದರು. ಗದ್ದನಕೇರಿ ಕ್ರಾಸ್‌ನಲ್ಲಿ 4 ಮಾರ್ಗಗಳಿಂದ ಸಾಕಷ್ಟು ಪ್ರಮಾಣದಲ್ಲಿ ಬಸ್‌ಗಳು ಸಂಚರಿಸುತ್ತಿದ್ದು, ಪ್ರಯಾಣಿಕರಿಗೆ ಕೂಡಲು ವ್ಯವಸ್ಥೆ ಇಲ್ಲ. ನಾಲ್ಕು ಕಡೆಗಳಲ್ಲಿ ಬಸ್ ಶೇಲ್ಟರ ನಿರ್ಮಿಸಲು ಕ್ರಮವಹಿಸಲು ತಿಳಿಸಿದರು. ಮುಂಬರುವ ಬೇಸಿಗೆಯಲ್ಲಿ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮಕ್ಕಾಗಿ ಸೂಚನೆ ನೀಡಿದರು. ನಗರಾಭಿವೃದ್ಧಿ ಕೋಶದ ಇಲಾಖೆಯಲ್ಲಿ ಕಡಿಮೆ ಪ್ರಗತಿ ಸಾಧಿಸಿರುವದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿ ಸಚಿವರು ಅಂತಹ ಅಧಿಕಾರಿಗಳಿಗೆ ನೋಟಿಸ್ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಯೋಜನಾಧಿಕಾರಿ ಪುನಿತ್, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹಾ ಕುಂಭ ಮೇಳದಲ್ಲಿ ಭಾಗಿಯಾಗಲು ಬೈಕ್ ಮುಖಾಂತರ ಸಂಚರಿಸುತ್ತಿರುವ ಅಭಿ ಗುತ್ತೇದಾರ



ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದ ಪ್ರಯಾಗ ರಾಜದಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಭಾಗಿಯಾಗಲು ಪಟ್ಟಣದ ಉತ್ಸಾಯಿ ಯುವಕನಾದ ಅಭಿ ಗುತ್ತೇದಾರ ರವಿವಾರ ಸಂಜೀವ್ ಆಂಜನೇಯನ ದರ್ಶನ ಪಡೆದು ಬೈಕ್ ಮೂಲಕ ತೆರಳಿದ್ದಾನೆ.

ಈ ಕುರಿತು ಮಾತನಾಡಿರುವ ಅಭಿ ಗುತ್ತೇದಾರ ಭಾರತದ ಏಕತೆ ಮತ್ತು ಅಧ್ಯಾತ್ಮಿಕ ಪರಂಪರೆಯನ್ನು ಸಾರುವ ಮಹಾ ಕುಂಭಮೇಳವಾಗಿದ್ದು, ನೂರಾನಲವತ್ತೈದುವರ್ಷಕ್ಕೊಮ್ಮೆ ನಡೆಯುವ ಈ ಮಹಾ ಕುಂಭಮೇಳದಲ್ಲಿ ಜಗತ್ತಿನ ವಿವಿಧ ಮೂಲೆಗಳಿಂದ ಜನರು ಭಾಗವಹಿಸಿ ಸಂಗಮದ ನದಿ ಸ್ನಾನವನ್ನು ಮಾಡುವ ಮೂಲಕ ಪಾಪ ವಿಮೋಚನೆ , ಪುಣ್ಯ ಪ್ರಾಪ್ತಿಗೆ ಒಳಗಾಗುತ್ತಿದ್ದಾರೆ ಅದೆ ರೀತಿಯಾಗಿ ನಾನು ಸಹ ಪಟ್ಟಣದಿಂದ ಒಬ್ಬನಾಗಿ ತೆರಳುತ್ತಿದ್ದೆನೆ ಎಂದು ತಿಳಿಸಿದ ಅವರು ನಾನು ಈ ಹಿಂದೆ ಅಯೋಧ್ಯ ಶ್ರೀರಾಮನ ದೇವಾಲಯದ ಉದ್ಘಾಟನೆಯ ವೇಳೆಯಲ್ಲು ಸಹ ಹದಿನೈದು ನೂರು ಕಿಮೀ ನಷ್ಟು ದೂರ ಬೈಕ ಮುಖಾಂತರವಾಗಿ ತೆರಳಿ ತಲುಪಿ ರಾಮ ಲಲ್ಲನ ದರ್ಶನಕ್ಕೆ ಪ್ರಾಪ್ತನಾಗಿದ್ದೆ. ಅದೇ ರೀತಿಯಾಗಿ ಇಂದು ಕೂಡ ಪಟ್ಟಣದಿಂದ ಸುಮಾರು ಹದಿನೆಂಟು ನೂರು ಕಿಮೀ ದೂರವನ್ನು ಚಲಿಸಿ ಕೊಟ್ಯಾಂತರ ಜನರು ಭಾಗಿಯಾಗಿರುವ ಮಹಾಕುಂಭ ಮೇಳದಲ್ಲಿ ನಾನು ಮತ್ತು ನನ್ನ ಸ್ನೇಹಿತರು ಸಹ ಪಾಲ್ಗೊಳ್ಳೋದ್ದಾಗಿ ಹೇಳಿದ್ದಾರೆ.

ಈ ಸಂಧರ್ಭದಲ್ಲಿ:ಸಂಜೀವ್ ಆಂಜನೇಯ ದೇವಸ್ಥಾನದ ಅರ್ಚಕ ಉದಯಕುಮಾರ್ ಕುಲ್ಕರ್ಣಿ ,ಗಿರೀಶ ಬ್ಯಾಕೋಡ ,ಮಲ್ಲಿಕಾರ್ಜುನ್ ಶಹಾಪುರ್, ರಮೇಶ ದೇವಿಕೆರೆ ಸೇರಿದಂತೆ ಹಲವರು ಹಾಜರಿದ್ದರು.



ಚಿಟಗುಪ್ಪ:ಉತ್ತರ ಪ್ರದೇಶದ ಪ್ರಯಾಗರಾಜ ಜಂಗಮವಾಡಿ ಮಠ ಮಹಾಕುಂಭ ಮೇಳದಲ್ಲಿ ಪಟ್ಟಣದ ಉದ್ಯಮಿ ನರಸಪ್ಪ ನರನಾಳ ಮೈಸೂರಿನ ಸುತ್ತೂರು ಮಠದ ಶ್ರೀ ಶ್ರೀ ಶ್ರೀ ಜಗದ್ಗುರು ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿಜೀ ಅವರ ದರ್ಶನ ಪಡೆದರು.

# ಚಿಟಗುಪ್ಪಾ: ಮಹಿಳಾ ಸ್ವ ಸಹಾಯ ಗುಂಪುಗಳನ್ನು ತೆರಿಗೆ ವಸೂಲಾತಿಗಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ(ಕರ್ನಾಟಕ ವಾರ್ತೆ) ಫೆಬ್ರುವರಿ.3: ಚಿಟಗುಪ್ಪಾ ಪಟ್ಟಣದ ಆಸ್ತಿ ಹಾಗೂ ನೀರಿನ ತೆರಿಗೆಯನ್ನು ಸಂಗ್ರಹಿಸಲು ಪುರಸಭೆ ವ್ಯಾಪ್ತಿಯ ಡೇ ನಲ್ಮ್ ಅಭಿಯಾನದಡಿ ನೊಂದಾಯಿಸಲ್ಪಟ್ಟ ಅರ್ಹ ಹಾಗೂ ಆಸಕ್ತ ಮಹಿಳಾ ಸ್ವ ಸಹಾಯ ಗುಂಪುಗಳನ್ನು ತೆರಿಗೆ ವಸೂಲಾತಿಗಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿಟಗುಪ್ಪಾ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿಟಗುಪ್ಪಾ ಪುರಸಭೆ ವ್ಯಾಪ್ತಿಯಲ್ಲಿನ ನೀರಿನ ಬಳಕೆಯ ಶುಲ್ಕದ ಹಿಂದಿನ ಬಾಕಿ ಮೊತ್ತ ಬಡ್ಡಿ ಸಹಿತವಾಗಿ ಮತ್ತು ಪ್ರಸಕ್ತ ವಾರ್ಷಿಕ ಸಹಿತ ವಸೂಲಿ ಮಾಡುವುದು ಹಾಗು ಬಹುದಿನಗಳಿಂದ ಬಾಕಿ ಇರುವ ಆಸ್ತಿ ತೆರಿಗೆ ವಾರ್ಷಿಕ ಬೇಡಿಕೆಗೆ ಅನುಗುಣವಾಗಿ ಸಮರ್ಪಕವಾಗಿ ವಸೂಲಿ ಮಾಡುವ ಸ್ಥಳೀಯ ಸ್ವ ಸಹಾಯ ಗುಂಪುಗಳ ಸೇವೆಯನ್ನು ಪಡೆಯಲು ಮತ್ತು ಸ್ವಸಹಾಯ ಗುಂಪುಗಳ ವಸೂಲಾತಿ ಮೊತ್ತದಲ್ಲಿ ಶೇ 5% ರಷ್ಟನ್ನು ಪ್ರೂತ್ಸಾಹ ಧನದ ರೂಪದಲ್ಲಿ ನೀಡಲು ಸರ್ಕಾರವು ಆದೇಶಿಸಿದೆ. ಅರ್ಹತೆಗಳ ವಿವರ: ಮಹಿಳಾ ಸ್ವಸಹಾಯ ಸಂಘವು ಡೇ ನಲ್ಮ್ ಅಭಿಯಾನದಡಿ ನೊಂದಾಯಿಸಿರಬೇಕು. ಸಂಘಗಳು ಸದಸ್ಯರು ಕನಿಷ್ಟ 7ನೇ ತರಗತಿವರೆಗೆ ಶಿಕ್ಷಣವನ್ನು ಬಳಸುವ ಸಾಮರ್ಥ್ಯ ಹೊಂದಿರಬೇಕು. ಬ್ಯಾಂಕಿನ ಮೂಲಕ ಅಥವಾ ಆಂತರಿಕ ಸಾಲ ಪಡೆದು ನಿಯಮಿತ ಸಾಲ ಮರುಪಾವತಿ ಮಾಡಿರಬೇಕು. ಸ್ವ–ಸಹಾಯ ಗುಂಪು ಸಂಬಂದಪಟ್ಟ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿನಲ್ಲಿ ಡೇ–ನಲ್ಮ ಅಭಿಯಾನದಡಿ ನೊಂದಾಯಿಸಿಕೊಂಡು ಮಾನ್ಯತೆ ಇರುವ ಎಂ, ಐ ಎಸ್ ಕೋಡ ಹೊಂದಿರಬೇಕು. ಸ್ವಸಹಾಯ ಸಂಘದ ಹೆಸರಿನಲ್ಲಿ ಸಕ್ರಿಯ ಬ್ಯಾಂಕ ಖಾತೆಯನ್ನು ಹೊಂದಿರಬೇಕು. ಸ್ವಸಹಾಯ ಸಂಘ ರಚನೆಯಾಗಿ ಕನಿಷ್ಟ 3 ವರ್ಷ ಹೊಂದಿರಬೇಕು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಿ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಶಾಲೆಯ ಹಳೆಯ ನೆನಪುಗಳು ಪರಿಶ್ರಮ, ಶಿಕ್ಷಣದ ಮಹತ್ವ, ಗುರುವಿನ ಶ್ರೇಷ್ಠತೆಯನ್ನು ತಿಳಿಸುತ್ತವೆ' ಎಂದು ಸೊಂತ ಆಶ್ರಮದ ಪೀಠಾಧಿಪತಿಗಳಾದ ಶ್ರೀ ಶ್ರೀ ಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಹೇಳಿದರು. ಪಟ್ಟಣದ ಫಾತಿಮಾಪುರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ವಾರ್ಷಿಕೋತ್ಸವ ಹಾಗೂ ಗುರುವಂದನಾ, ಸ್ನೇಹ ಸಮ್ಮೇಳನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಒಟ್ಟಾಗಿ ಸೇರಿ ಅಂದಿನಿಂದ ಇಲ್ಲಿಯವರೆಗೂ ಸೇವೆ ಸಲ್ಲಿಸಿದ ಗುರುಗಳಿಗೆ ಅಭಿನಂದನೆ ಸಲ್ಲಿಸುವ ಮೂಲಕ ವಿದ್ಯಾರ್ಥಿ ಜೀವನದ ನೂರಾರು ನೆನಪುಗಳು ಕಣ್ಣು ಮುಂದೆ ಬರುವಂತೆ ಮಾಡಿದೆ. ಗುರುವಿನ ಶ್ರೇಷ್ಠತೆ ವಿದ್ಯಾರ್ಥಿ ಜೀವನದಲ್ಲಿ ತಿಳಿಯುವುದಕ್ಕಿಂತ ವೃತ್ತಿ ಜೀವನದ ಪಯಣದಲ್ಲಿ ತಿಳಿಯುವುದು ಹೆಚ್ಚು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ ಗುಡಾಳ ಮಾತನಾಡಿ, ಮಕ್ಕಳಿಗೆ ಒಳ್ಳೆಯ ಶಿಕ್ಷಣ ಹಾಗೂ ಶಿಸ್ತಿನ ಜೊತೆಗೆ ಉತ್ತಮ ಸಂಸ್ಕಾರವನ್ನೂ ನೀಡುವ ಜವಾಬ್ದಾರಿ ಇಂದಿನ ಶಿಕ್ಷಕರ ಮೇಲಿದೆ, ಶಾಲೆಯ ಅಭಿವೃದ್ಧಿ, ಮಕ್ಕಳ ಏಳಿಗೆಗಾಗಿ ದುಡಿಯುವ ಉದಾತ್ತ ಮನೋಭಾವ ಬೆಳೆಸಿಕೊಳ್ಳಬೇಕು. ಮಕ್ಕಳ ಭವಿಷ್ಯ ರೂಪಿಸಲು ಗ್ರಾಮಸ್ಥರ, ಸಮುದಾಯದ ಹಾಗೂ ಪಾಲಕರ ಪಾತ್ರ ಏನು, ನಮ್ಮ ಕೊಡುಗೆ ಏನು ಎಂಬುದನ್ನು ಎಲ್ಲರೂ ಆತ್ಮಾವಲೋಕನ ಮಾಡಿಕೊಳ್ಳಬೇಕು. ಮಕ್ಕಳ ಭವಿಷ್ಯಕ್ಕಾಗಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ಮಾದರಿ ಶಾಲೆಗಳನ್ನಾಗಿ ರೂಪಿಸುವ ಕೆಲಸ ಮಾಡಲು ಶಿಕ್ಷಕ ಸಮುದಾಯ ಮುಂದಾಗಬೇಕೆಂದು ಮನವಿ ಮಾಡಿಕೊಂಡರು.ಬೋರವೆಲ್ ದುರಸ್ತಿ ಅತೀ ಶೀಘ್ರದಲ್ಲೇ ಮಾಡಿಕೊಡಿಸುವುದಾಗಿ ಭರವಸೆ ನೀಡಿದರು. ಶಾಲೆಯ ಮುಖ್ಯ ಶಿಕ್ಷಕಿ ಪ್ರೇಮಿಳಾ ರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಅವರು, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಸಿಗುತ್ತಿದ್ದು, ಪೋಷಕರು ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ದಾಖಲಿಸಬೇಕು' 'ಸರ್ಕಾರ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಉಚಿತ ಪುಸ್ತಕ, ಸಮವಸ್ತ್ರ ನೀಡುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜತೆಗೆ ಉಚಿತ ಸೌಲಭ್ಯಗಳು ಸಿಗುತ್ತಿದ್ದು, ಪೋಷಕರು ಇದರ ಸದುಪಯೋಗ ಪಡೆಯಬೇಕು. ಕಾನ್ವೆಂಟ್ ವ್ಯಾಮೋಹದಿಂದ ಹೊರಬರಬೇಕು. ಸರ್ಕಾರಿ ಶಾಲೆಗಳಲ್ಲಿ ಓದಿದ ಅನೇಕ ಮಹನೀಯರು ದೇಶದ ಉನ್ನತ ಹುದ್ದೆ ಅಲಂಕರಿಸಿದ್ದಾರೆ. ಇಲ್ಲಿ ನುರಿತ ಶಿಕ್ಷಕರಿದ್ದಾರೆ. ಪೋಷಕರು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಕಳುಹಿಸಬೇಕು' ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಕುಡಿಯಲು ನೀರಿನ ಸಮಸ್ಯೆ ಆಗುತ್ತಿದ್ದೆ, ಶಾಲೆಯಲ್ಲಿ ಬೋರ್ವೆಲ್ ಇದೆ ಆದರೆ ಕೆಟ್ಟು ಹೋಗಿದೆ ಕೂಡಲೇ ನೀರಿನ ವ್ಯವಸ್ಥೆ ಕಲ್ಪಿಸಿಕೂಡಬೇಕು ಎಂದು ವೇದಿಕೆಯಲ್ಲಿದ್ದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಎಲ್ಲಾ ಶಿಕ್ಷಕರಿಗೂ ಸನ್ಮಾನಿಸಿ ಗೌರವಿಸಲಾಯಿತು. ನಂತರ ಶಾಲಾ ಮಕ್ಕಳಿಂದ ಸಂಸ್ಕೃತಿ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯೆ ಸೌಭಾಗ್ಯವತಿ ಅಶೋಕ ಸ್ವಾಮಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಹಾವೀರ ಜಮಖಂಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್, ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ್ ಉಪ್ಪಿನ, ಎಸ್ಡಿಎಂಸಿ ಅಧ್ಯಕ್ಷ ದಿಲೀಪಕುಮಾರ್ ನರನಾಳ, ಉಪಾಧ್ಯಕ್ಷ ಅಂಬಾಜಿ ಪವಾರ, ಸುಭಾಷ ಜಮಾದರ್ ಸೇರಿದಂತೆ ಸದಸ್ಯರು, ಸಿಬ್ಬಂದಿ ವರ್ಗದವರು, ಹಳೆ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಇದ್ದರು. ಕಾರ್ಯಕ್ರಮವನ್ನು ಮಲ್ಲಿಕಾರ್ಜುನ ಸೀತಾಳಗೇರಾ ನಿರೋಪಿಸಿ ವಂದಿಸಿದರು.

# ಮಡಿವಾಳೇಶ್ವರ ದೇವಸ್ಥಾನ ಅಭಿವೃದ್ಧಿ ಪಥದಲ್ಲಿ ಸಾಗಲಿ: ಪ್ರವೀಣಕುಮಾರ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ : ಸರ್ವ ರೀತಿಯಲ್ಲೂ ದೇಶ ಉನ್ನತ ಹೊಂದಿದರೆ, ಭವ್ಯ ಭಾರತ ದೇಶವು ವಿಶ್ವ ಮಟ್ಟದಲ್ಲಿ ಸೂಪರ್ ಪವರ್ ರಾಷ್ಟವಾಗಿ ನಿಲ್ಲುತ್ತದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಪ್ರವೀಣಕುಮಾರ ಹೇಳಿದರು. ನಗರದ ಸಂತ ಶಿರೋಮಣಿ ಮಡಿವಾಳೇಶ್ವರ ದೇವಸ್ಥಾನದ ಸಮುದಾಯ ಭವನ ಅಭಿವೃದ್ಧಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 2.50 ಲಕ್ಷ ರೂ. ಆದೇಶ ಪತ್ರ ವಿತರಿಸಿ ಮಾತನಾಡಿದ ಅವರು ಭಾರತ ದೇಶ ಈಗ ಎಲ್ಲಾ ರೀತಿಯಲ್ಲೂ ಅಭಿವೃದ್ಧಿ ಹೊಂದುತ್ತಿದೆ, ಈ ಅಭಿವೃದ್ಧಿ ವೇಗ ಇನ್ನಷ್ಟು ಹೆಚ್ಚಾಗಲಿ ಎಂದು ಗ್ರಾಮಾಭಿವೃದ್ಧಿ ಯೋಜನೆ ನಿರಂತರವಾಗಿ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಹತ್ತು ಹಲವು ಅಭಿವೃದ್ಧಿ ಪಥ ಯೋಜನೆಗಳು ಹಾಕಿಕೊಂಡು ಸರ್ವರ ವಿಕಾಸಕ್ಕಾಗಿ ಶ್ರಮಿಸಲಾಗುತ್ತಿದೆ. ವಿಶೇಷವಾಗಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನ ನೀಡಿ, ಜನಸಾಮಾನ್ಯರಿಗೆ ಉಪಯೋಗವಾಗುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದರು. ಜನಜಾಗೃತಿ ಜಿಲ್ಲಾ ಸಮಿತಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ ಮಾತನಾಡಿ ಅನುದಾನ ಉಪಯೋಗಿಸಿಕೊಂಡು ಸಮುದಾಯ ಭವನ ಅಭಿವೃದ್ಧಿ ಹೊಂದಲಿ ಎಂದರು. ತಾಲೂಕು ಯೋಜನಾಧಿಕಾರಿ ಬಸವರಾಜ ರವರು ಸರ್ವರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಜನಜಾಗೃತಿ ವೇದಿಕೆ ಜಿಲ್ಲಾ ಸದಸ್ಯರಾದ ಶಾಮರಾವ ಭುತಾಳೆ, ಸಂಗಮೇಶ ಜವಾದಿ ಸೇರಿದಂತೆ ದೇವಸ್ಥಾನ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.